ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 16 | PAGE- ಪುಟ 8 | ಮಂಗಳವಾರ 18.02.2025 | RS.ಬೆಲೆ 2/-

## ಮಾ.7ರಂದು ರಾಜ್ಯ ಬಜೆಟ್

ಮಲ್ಲಮ ನುಡಿ ವಾರ್ತೆ

ಬೆಂಗಳೂರು:ಫೆ.17:ಮುಖ್ಯಮಂತ್ರಿ ಸಿದ್ದರಾಮಯ್ಯಅವರುಸೋಮವಾರ 2025-26ನೇ ಸಾಲಿನ ರಾಜ್ಯ ಬಜೆಟ್ ಅನ್ನು ಮಾರ್ಚ್ 7 ರಂದು ಮಂಡಿಸುವುದಾಗಿ ಹೇಳಿದ್ದಾರೆ.ಇದುಸಿದ್ದರಾಮಯ್ಯ ಮಂಡಿಸಲಿರುವ16ನೇಬಜೆಟ್ ಆಗಿದೆ.

ಇಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, "ಮಾರ್ಚ್ 3ರಿಂದ ವಿಧಾನಸಭೆ ಅಧಿವೇಶನ ಆರಂಭವಾಗಲಿದೆ. ಹೊಸ ವರ್ಷದ ಮೊದಲ ಅಧಿವೇಶನ ಇದಾಗಿರುವುದರಿಂದ, ಮಾರ್ಚ್ 3ರಂದುರಾಜ್ಯಪಾಲರು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಜಂಟಿ ಅಧಿವೇಶನವನ್ನುಉದ್ದೇಶಿಸಿ ಮಾತನಾಡಲಿದ್ದಾರೆ.ಮಂಗಳವಾರ, ಬುಧವಾರ ಮತ್ತುಗುರುವಾರ (ಮಾರ್ಚ್ 4, 5 ಮತ್ತು 6) ರಾಜ್ಯಪಾಲರ ಭಾಷಣದ ಕುರಿತು ಚರ್ಚೆ ನಡೆಯಲಿದೆ. ಶುಕ್ರವಾರ (ಮಾರ್ಚ್ 7), ನಾನು 2025-26ನೇ ಸಾಲಿನ ಬಜೆಟ್ ಮಂಡಿಸುತ್ತೇನೆ."

"ಅದರ ನಂತರ ಬಜೆಟ್ ಬಗ್ಗೆ ಚರ್ಚೆ ನಡೆಯಲಿದ್ದು, ಮಾರ್ಚ್ ಅಂತ್ಯದಲ್ಲಿ ಅದ-ಕ್ಕೆ ನಾನು ಉತ್ತರಿಸುತ್ತೇನೆ. ಅಧಿವೇಶನವನ್ನು ಎಷ್ಟು ಸಮಯನಡೆಸಬೇಕು(ಕೊನೆಯ ದಿನಾಂಕ) ಎಂಬುದನ್ನು ವ್ಯವಹಾರ ಸಲಹಾ ಸಮಿತಿ ನಿರ್ಧರಿಸುತ್ತದೆ"ಎಂದು ಸಿಎಂ ಹೇಳಿದರು.ಸೋಮವಾರರೈತ ಮುಖಂಡರು ಮತ್ತು ರೈತ ಸಂಘಟನೆಯಪ್ರತಿನಿಧಿಗಳೊಂದಿಗೆ ಬಜೆಟ್‌ಪೂರ್ವಸಮಾಲೋಚನಾ



ಸಭೆ ನಡೆಸಿದ ಮುಖ್ಯಮಂತ್ರಿ, ತಮ್ಮ ಮೊಣಕಾಲು ನೋವಿನ ಹೊರತಾಗಿಯೂ ಕಳೆದ ಕೆಲವು ದಿನಗಳಿಂದ ತಮ್ಮ ಅಧಿಕೃತ ನಿವಾಸದಲ್ಲಿ ವಿವಿಧ ಇಲಾಖೆಗಳೊಂದಿಗೆ ಇದೇ ರೀತಿಯ ಚರ್ಚೆಗಳನ್ನು ನಡೆಸುತ್ತಿರುವುದಾಗಿ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದ ರೈತ ನಾಯಕರನ್ನು ಭೇಟಿ ಮಾಡಲು ವಿಧಾನಸೌಧಕ್ಕೆ ಬಂದಿದ್ದಾಗಿ ಹೇಳಿದರು.

"ರೈತ ಮುಖಂಡರು ಮತ್ತು ವಿವಿಧ ರೈತ ಸಂಘಟನೆಗಳ ಪ್ರತಿನಿಧಿಗಳುತಮ್ಮಅಭಿಪ್ರಾಯಗಳನ್ನು ಹಂಚಿಕೊಂಡಿದ್ದಾರೆ.ಅವುಗಳನ್ನು ಗಮನದಲ್ಲಿಟ್ಟುಕೊಂಡು ಬಜೆಟ್ ಸಿದ್ಧಪಡಿಸಲಾಗುವುದು. ನಮ್ಮ ಮಿತಿಯಲ್ಲಿ ಸಾಧ್ಯವಿರುವ ಎಲ್ಲವನ್ನೂನಾವುಸೇರಿಸುತ್ತೇವೆ" ಎಂದು ಅವರು ಹೇಳಿದರು.

ರೈತರ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ಮತ್ತು ಕೃಷಿ ಕ್ಷೇತ್ರದ ಅಭಿವೃದ್ಧಿಯನ್ನು ಬೆಂಬಲಿಸುವಲ್ಲಿ ಸರ್ಕಾರ

(2ನೇ ಪುಟ ನೋಡಿ)

## ಜನರ ಹೊರೆ ತಗ್ಗಿಸಲು ಕೇಂದ್ರ ಸಬ್ಸಿಡಿ ನೀಡಲಿ - ರಾಮಲಿಂಗಾರೆಡ್ಡಿ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೆಟ್ರೋ ಏರಿಕೆ ದರದಿಂದ ಪ್ರಯಾಣಿಕರು ಕಂಗೆಡುತ್ತಿದ್ದಾರೆ. ದರ ಏರಿಕೆ ಮಾಡಿದ್ದು ಕಾಂಗ್ರೆಸ್ ಅಂತ ಬಿಜೆಪಿಯವರು ಗೂಬೆ ಕೂರಿಸುತ್ತಿದ್ದಾರೆ. ಮೆಟ್ರೋ ನಿರ್ವಹಣೆ ಮತ್ತು ಅದನ್ನು ಉಳಿಸಿಕೊಂಡು ಹೋಗಲು ಕೇಂದ್ರ ಸರ್ಕಾರ ಸಬ್ಸಿಡಿ ನೀಡಬೇಕೆಂದು ಸಾರಿಗೆ ಹಾಗೂ ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿ ಸಭಾಂಗಣದಲ್ಲಿ ಸುದ್ದಿಗಾರರೊಂದಿಗೆಮಾತನಾಡಿ, ಮೆಟ್ರೋ ಪ್ರಯಾಣ ದರ ಬೆಲೆ ಏರಿಕೆಯಲ್ಲಿ ಬಿಜೆಪಿಯವರು ಸುಳ್ಳು ಹೇಳುತ್ತಾರೆ. ಸುಳ್ಳು ಹೇಳುವವರೆಲ್ಲ ಒಗ್ಗೂಡಿ ಒಂದು ಪಕ್ಷ ಕಟ್ಟಿಕೊಂಡಿದ್ದಾರೆ. ಒಳ್ಳೆ ಕೆಲಸ ಇದ್ದರೆ ನಾವೇ



ಮಾಡಿದ್ದೇವೆ ಎನ್ನುತ್ತಾರೆ. ಕೆಟ್ಟ ಕೆಲಸ ಇದ್ದರೆ ಅದನ್ನು ಕಾಂಗ್ರೆಸ್‌ನವರು ಮಾಡಿದ್ದಾರೆ ಅಂತಾರೆ. ಅವರಿಗೆ ಕಾನೂನು, ಕಟ್ಟಳೆಗಳ ತಿಳುವಳಿಕೆ ಇಲ್ಲ. ಅಶ್ವಿನಿ ವೈಷ್ಣವ್ ಅವರನ್ನು ಆಹ್ವಾನಿಸಿ ಅವರಿಂದಲೇ ಸುಳ್ಳು ಹೇಳಿಸಿದ್ದಾರೆ. ಕೇಂದ್ರ ಮಂತ್ರಿಯಾಗಿ ಅವರೂ ಸುಳ್ಳು ಹೇಳಿ ಹೋಗಿದ್ದಾರೆ. ಇಂಥವರ ಕೈಲಿ ರೇಲ್ವೆ ಇಲಾಖೆ ಹೇಗೆ ಅಭಿವೃದ್ಧಿ ಆಗುತ್ತೋ ದೇವರೇ ಬಲ್ಲ ಎಂದು ಬಿಜೆಪಿಯವರ ಜನ್ಮ ಜಾಲಾಡಿದರು.

ಬೆಂಗಳೂರಿನ ಸಂಸದರಾದ ಪಿ.ಸಿ.ಮೋಹನ್, ತೇಜಸ್ವಿ ಸೂರ್ಯ ಸರ್ಕಾರದ ಕಡೆ ಬೆರಳು ತೋರಿಸುತ್ತಾರೆ. ರಾಜ್ಯದಲ್ಲಿ ಬಿಜೆಪಿಯ 17 ಜನ ಸಂಸದರಿದ್ದಾರೆ. ನಾಲ್ಕು ಜನ ಕೇಂದ್ರಮಂತ್ರಿಗಳಿದ್ದಾರೆ. ಯಾರೊಬ್ಬರೂ ಕರ್ನಾಟಕದ ಅಭಿವೃದ್ಧಿ ಪರವಾಗಿ ಚಿಂತನೆ ನಡೆಸುತ್ತಿಲ್ಲ. ಬೊಮ್ಮಾಯಿ, ಶೆಟ್ಟರ್ ಮುಖ್ಯಮಂತ್ರಿಯಾಗಲು ಅನರ್ಹರಿದ್ದರೂ ಅವರನ್ನು ಬಿಜೆಪಿಯವರು ಸಿಎಂ ಮಾಡಿದ್ರು. ಮೆಟ್ರೋ ನಿರ್ವಹಣೆ ಕೇಂದ್ರ ಸರ್ಕಾರ ನಿಯೋಜಿಸಿದ ಮಂಡಳಿಯಿಂದ ನಡೆಯುತ್ತದೆ. ಅದಕ್ಕಾಗಿ ಓರ್ವರು ಸಮಿತಿ ಅಧ್ಯಕ್ಷರಿರುತ್ತಾರೆ. ಅವರೇ ದರ ನಿಗದಿ ಮಾಡುತ್ತಾರೆ. ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ರಮಣಾರೆಡ್ಡಿ, ಮದ್ರಾಸ್ ಹೈಕೋರ್ಟ್‌ನ ಹಿಂದಿನ

(2ನೇ ಪುಟ ನೋಡಿ)

## ಕೃತಕ ಬುದ್ಧಿಮತ್ತೆ ಮಾನವನನ್ನು ಮೀರಿಸಲು ಸಾಧ್ಯವಿಲ್ಲ:ಡಾ.ಅಜಯ್ ಸಿಂಗ್



ಕಲಬುರಗಿ,ಫೆ.17:ವಿಶ್ವದಾದ್ಯಂತ ಚರ್ಚೆಗೆಕಾರಣವಾಗಿರುವಕೃತಕ ಬುದ್ಧಿಮತ್ತೆಮಾನವನನ್ನುಮೀರಿಸಲು ಸಾಧ್ಯವಿಲ್ಲ. ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಸಹ ಮಾನವನ ಸೃಷ್ಟಿಯೇ ಆಗಿದೆ ಎಂಬುದನ್ನು ಯಾರು ಮರೆಯಬಾರದು ಎಂದು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಹೇಳಿದರು.

ಸೋಮವಾರ ಇಲ್ಲಿನ ಶರಣಬಸವವಿಶ್ವವಿದ್ಯಾಲಯದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ಆಯೋಜಿಸಿದ "ಕಲ್ಯಾಣ ಕರ್ನಾಟಕ ಮೀಡಿಯಾ ಹಬ್ಬ-2025"ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಈ ಮೂರು ಕ್ಷೇತ್ರ ಸರಿಯಾದ ದಿಕ್ಕಿನಲ್ಲಿ ಸಾಗಬೇಕಾದಲ್ಲಿ ಮಾಧ್ಯಮ ಅಂಗ ತುಂಬಾ ಎಚ್ಚರಿಕೆಯಿಂದ ಕೆಲಸ ಮಾಡಬೇಕಾಗುತ್ತದೆ. ಇಂತಹ ಮಾಧ್ಯಮ ಕ್ಷೇತ್ರಕ್ಕೆ ಕಾಲಿಡುತ್ತಿರುವ ಪತ್ರಿಕೋದ್ಯಮ ವಿದ್ಯಾರ್ಥಿಗಳು ಓದುವ ಅಭ್ಯಾಸ ಹೆಚ್ಚಿಸಿಕೊಳ್ಳಬೇಕು. ಪುಸ್ತಕದಿಂದ ಜ್ಞಾನಾರ್ಜನೆ ಪಡೆದಾಗ ಮಾತ್ರ ಪರಿಪೂರ್ಣರಾಗುತ್ತೀರಿ ಮತ್ತು ನಿಮ್ಮಲ್ಲಿ ಪ್ರಶ್ನೆ ಕೇಳುವ ಧೈರ್ಯ ಬರುತ್ತೆ ಎಂದರು.

ಕಲ್ಯಾಣ ಕರ್ನಾಟಕ ವಿಭಾಗದ ಸಮಗ್ರಅಭಿವೃದ್ಧಿಗೆಮಂಡಳಿಯು ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ, ಕಲ್ಯಾಣ ಪಥ, ಪ್ರಜಾ ಸೌಧ ನಿರ್ಮಾಣದಂತಹ ಅನೇಕ ಅಭಿವೃದ್ಧಿಪರ ಕೆಲಸಗಳನ್ನು ಮಾಡುತ್ತಿದ್ದು, ಮುಂದಿನ ದಿನದಲ್ಲಿ ಅದರ ಫಲಿತಾಂಶ ಕಾಣಬಹುದಾಗಿದೆ ಎಂದ ಅವರು, ಸಣ್ಣ ಪತ್ರಿಕೆಗಳಿಗೆ ಪ್ರೋತ್ಸಾಹದ ಜಾಹೀರಾತು ಮಂಡಳಿಯಿಂದ ನೀಡುವ ಕುರಿತು ಸಿ.ಎಂ. ಜೊತೆಗೆ ಚರ್ಚಿಸಲಾಗುವುದು ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಕಲಬುರಗಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಪೂಜ್ಯ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿ ಅವರು ಮಾತನಾಡಿ,

(2ನೇ ಪುಟ ನೋಡಿ)

## ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ಬಿಆರ್ ಪಾಟೀಲ್ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಫೆ.17:ಇತ್ತೀಚೆಗಷ್ಟೇ ಮುಖ್ಯಮಂತ್ರಿಗಳ ರಾಜಕೀಯ ಸಲಹೆಗಾರ ಹುದ್ದೆಗೆ ರಾಜೀನಾಮೆ ನೀಡಿದ್ದ ಸಿಎಂ ಸಿದ್ದರಾಮಯ್ಯ ಅವರ ಆಪ್ತ ಹಾಗೂ ಆಳಂದ ಕಾಂಗ್ರೆಸ್ ಶಾಸಕ ಬಿಆರ್ ಪಾಟೀಲ್ ಅವರನ್ನು ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ. ಅಲ್ಲದೆ ಬಿಆರ್ ಪಾಟೀಲ್ ಅವರಿಗೆ ಸಂಪುಟ ದರ್ಜೆ ಸ್ಥಾನಮಾನ ನೀಡಲಾಗಿದೆ. ಆಳಂದ ಶಾಸಕ ಬಿ ಆರ್ ಪಾಟೀಲ್ ಅವರನ್ನು ಯೋಜನೆ,



ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಉಪಾಧ್ಯಕ್ಷರಾಗಿ ನೇಮಕ ಮಾಡುವುದರ ಜೊತೆಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನ ಮತ್ತು ಎಲ್ಲಾ ಸೌಲಭ್ಯಗಳೊಂದಿಗೆ ತಕ್ಷಣದಿಂದ ಜಾರಿಗೆ ಬರುವಂತೆ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ಫೆಬ್ರವರಿ 1 ರಂದು ಸಿಎಂ ರಾಜಕೀಯ ಸಲಹೆಗಾರ ಹುದ್ದೆಗೆ ನಾನು ರಾಜೀನಾಮೆ ನೀಡಿದ್ದೇನೆ. ರಾಜೀನಾಮೆ ಪತ್ರವನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಈಗಾಗಲೇ ತಲುಪಿಸಿದ್ದೇನೆ ಎಂದು ಬಿಆರ್ ಪಾಟೀಲ್ ಅವರು ಮಾಧ್ಯಮಕ್ಕೆ ತಿಳಿಸಿದ್ದರು.

ಆದರೆ ರಾಜೀನಾಮೆಗೆ ಕಾರಣ ಏನು ಎಂಬ ಪ್ರಶ್ನೆಗೆ, ನಾನಾಗಿಯೇ ರಾಜೀನಾಮೆ ನೀಡಿದ್ದೇನೆ ಎಂದು ಹೇಳಿದ್ದರು. ಆದರೆ ಬಿಆರ್ ಪಾಟೀಲ್ ಅವರ ದಿಢೀರ್ ನಿರ್ಧಾರ ಅಚ್ಚರಿಗೆ ಕಾರಣವಾಗಿತ್ತು.

## ಶೀಘ್ರವೇ ಗ್ಯಾರಂಟಿ ಹಣ ಬಿಡುಗಡೆ:ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು: ಫೆ 17: ಗ್ಯಾರಂಟಿ ಹಣ ಬಿಡುಗಡೆ ಆಗದೇ ಇರೋ ಬಗ್ಗೆ ಗೊತ್ತಿಲ್ಲ. ಆದರೆ ಗ್ಯಾರಂಟಿ ಯೋಜನೆ ಯಾವುದೇ ಕಾರಣಕ್ಕೂ ನಿಲ್ಲಿಸಲ್ಲ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದ್ದಾರೆ.

5 ತಿಂಗಳಿನಿಂದ ಅನ್ನಭಾಗ್ಯದ



ಹಣ 3 ತಿಂಗಳಿಂದ ಗೃಹಲಕ್ಷ್ಮಿ ಹಣ ಬಾರದ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಹಣ ಪಾವತಿ ಮಾಡದೇ ಹೋದರೇ ಪಾವತಿ ಮಾಡುತ್ತೇವೆ. ಆದರೇ ಗ್ಯಾರಂಟಿ ನಿಲ್ಲಿಸೋ ಪ್ರಶ್ನೆಯೇ ಇಲ್ಲ ಎಂದರು.ಹಣ ಬಿಡುಗಡೆ ಪೆಂಡಿಂಗ್ ಇರುವ ಬಗ್ಗೆ ನನಗೆ ಗೊತ್ತಿಲ್ಲ. ಕೂಡಲೇ ಹಣ ಬಿಡುಗಡೆ ಮಾಡಿಸುತ್ತೇನೆ ಎಂದು ಭರವಸೆ ಕೊಟ್ಟರು.

## ಮಾನಸಿಕ ಸದೃಢತೆಗೆ ಕ್ರೀಡೆ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು.ಫೆ17:ವ್ಯಕ್ತಿಯು ದೈನಂದಿನವಾಗಿ ಕ್ರಿಯಾಶೀಲತೆ ಹಾಗೂ ಉತ್ಸಾಹದಿಂದ ಕಾರ್ಯನಿರ್ವಹಿಸಲು, ದೈಹಿಕ ಹಾಗೂ ಮಾನಸಿಕ ಸದೃಢತೆ ಕಾಪಾಡಿಕೊಳ್ಳಲು ಕ್ರೀಡೆ ಸಹಕಾರಿಯಾಗಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಪಂಚಾಯತ್ ವತಿಯಿಂದ ಫೆ.17ರ ಸೋಮವಾರದಂದು ನಗರದ ಕೃಷಿ ವಿವಿಯ ಕ್ರೀಡಾಂಗಣದಲ್ಲಿ ನಡೆದ 2024-25ನೇ ಸಾಲಿನ ನೌಕರರ ವಾರ್ಷಿಕ ಕ್ರೀಡಾ-ಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾರ್ವಜನಿಕಸೇವೆಯಲ್ಲಿರುವವರು ಸಂಯಮದಿಂದ ಹಾಗೂ ಹೆಚ್ಚು ಕ್ರಿಯಾಶೀಲವಾಗಿ ಕಾರ್ಯನಿರ್ವಹಣೆ ಮಾಡಲು ಮಾನಸಿಕ ಆರೋಗ್ಯವು ಪ್ರಮುಖವಾಗಿದೆ. ಮಾನಸಿಕ ಆರೋಗ್ಯ ಕಾಯ್ದುಕೊಳ್ಳಲು ದಿನನಿತ್ಯದ ಜೀವನ ಶೈಲಿಯಲ್ಲಿ ದೈಹಿಕ ಚಟುವಟಿಕೆಗಳಿಗೂ ಒತ್ತು ಕೊಡಬೇಕು ಎಂದರು.

ಪ್ರೀತಿ, ವಿಶ್ವಾಸದಿಂದ ಅಸಾಧ್ಯವಾದುದನ್ನು ಸಾಧ್ಯವಾಗಿಸಬಹುದು. ಭಿನ್ನಾಭಿಪ್ರಾಯ ಇರುವ ಮನಸುಗಳು ಗುಂಪಾಗಿ ಕ್ರೀಡೆಯಲ್ಲಿ ತೊಡಗಿದಾಗ ಭಿನ್ನಾಭಿಪ್ರಾಯ ಬಿಟ್ಟು ಗೆಲುವು ಸಾಧಿಸಬೇಕೆಂಬ ಮನೋಭಾವದಿಂದ ಉತ್ತಮ ಸಾಧನೆ ಮಾಡಲು ಸಹಕಾರಿಯಾಗಲಿದೆ. ಇಂತಹ ಕ್ರೀಡಾಕೂಟಗಳ ಆಯೋಜನೆಯಿಂದ ಇಲಾಖಾ ನೌಕರರಲ್ಲಿ ಕ್ರಿಯಾಶೀಲತೆ

(2ನೇ ಪುಟ ನೋಡಿ)

## ಎಲ್ಲ ಇಲಾಖೆಗಳು ಮಕ್ಕಳ ಹಕ್ಕು ರಕ್ಷಣೆಗೆ ಬದ್ಧರಾಗಲಿ:ಶಶಿಧರ ಕೋಸಂಬೆ



ಮಲ್ಲಮ್ಮನುಡಿವಾರ್ತೆಬೀದರ: ಫೆ.17: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ವ್ಯಾಪ್ತಿಯ ಎಲ್ಲ ಇಲಾಖೆ ಅಧಿಕಾರಿಗಳು ಮಕ್ಕಳ ಹಕ್ಕು ಉಲ್ಲಂಘನೆಯಾದಲ್ಲಿ ತಕ್ಷಣವೇ ಸ್ಪಂದಿಸಿ ಮಕ್ಕಳ ಸ್ನೇಹಿಯಾಗಿ ಕಾರ್ಯನಿರ್ವಹಿಸಲಿ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಕರೆ ನೀಡಿದರು.

ಜಿಲ್ಲಾ ಪಂಚಾಯತನಲ್ಲಿಂದು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗ ಬೆಂಗಳೂರು, ಮಕ್ಕಳ ರಕ್ಷಣಾ ನಿರ್ದೇಶನಾಲಯ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮಂಡಳಿ, ಮಕ್ಕಳ ಅಭಿವೃದ್ಧಿ ಶಾಲಾ ಶಿಕ್ಷಣ ಇಲಾಖೆ ಹಾಗೂ

(2ನೇ ಪುಟ ನೋಡಿ)

## ಬಲವಂತದ ಸಾಲ ವಸೂಲಾತಿ ಸುಗ್ರೀವಾಜ್ಞೆ ಕಟ್ಟುನಿಟ್ಟಿನ ಜಾರಿಗೆ ಕ್ರಮ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17-ಸಾಲ ವಸೂಲಾತಿ ಸಂದರ್ಭದಲ್ಲಿ ಸಾಲ ಪಡೆದವರಿಗೆ ಯಾವುದೇ ಕಿರುಕುಳ ಉಂಟಾಗಬಾರದೆಂಬ ಉದ್ದೇಶದಿಂದ ಜಾರಿಗೆ ತರಲಾದ ಸುಗ್ರೀವಾಜ್ಞೆಯನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜರುಗಿದ ಮೈಕ್ರೋ ಫೈನಾನ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್ ಹಾವಳಿ ತಡೆಗೆ ಸರಕಾರ ಫೆಬ್ರವರಿ 15 ರಂದು ಸುಗ್ರೀವಾಜ್ಞೆ ಹೊರಡಿಸಿದ್ದು, ಜಿಲ್ಲೆಯಲ್ಲಿರುವ

(2ನೇ ಪುಟ ನೋಡಿ)

## ಸಾಲದ ಬಾಧೆಗೆ ಬೇಸತ್ತು ನೇಕಾರ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17-ಸಾಲದ ಬಾಧೆಯಿಂದಾಗಿ ನೇಕಾರನೋರ್ವ ನೇಣಿಗೆ ಶರಣಾದ ಘಟನೆ ಜಿಲ್ಲೆಯ ಬನಹಟ್ಟಿಯಲ್ಲಿ ಪಟ್ಟಣದಲ್ಲಿ ರವಿವಾರ ನಡೆದಿದೆ.

ಬನಹಟ್ಟಿನಗರದ ಅಶೋಕ ಕಾಲೋನಿಯ ಸಂಗಮೇಶ ದೇವೇಂದ್ರಪ್ಪಮುರಗೋಡ(45) ಆತ್ಮಹತ್ಯೆ ಮಾಡಿಕೊಂಡಿದ್ದು, ಪವರಲೂಮ್ ನೇಯ್ಗೆ ಮಾಡುತ್ತಿದ್ದ ಈತ ತನಗೆ ಸಿಗುವ ಪಗಾರದಲ್ಲಿ ಕುಟುಂಬ ನಿರ್ವಹಣೆ ಮಾಡುವುದಕ್ಕೆ ಸಾಧ್ಯವಾಗದ ಕಾರಣಕ್ಕೆ ಈ ನಿರ್ಧಾರಕ್ಕೆ ಬಂದಿದ್ದಾನೆ ಎನ್ನಲಾಗಿದೆ.

ಸಹಕಾರಿ ಸಂಘ ಹಾಗೂ ಕೆಲವು ಖಾಸಗಿ ವ್ಯಕ್ತಿಗಳಿಂದಲೂ ಸಂಗಮೇಶ ಸಾಲ ಪಡೆದಿದ್ದನು ಎನ್ನಲಾಗಿದ್ದು, ಮಾನಸಿಕವಾಗಿ ಖಿನ್ನತೆಗೆ ಒಳಗಾಗಿ ಕಳೆದ ಕೆಲ ದಿನಗಳಿಂದ ಸರಿಯಾಗಿ ಕೆಲಸ ಮಾಡದೇ ಕುಡಿತದ ಚಟಕ್ಕೂ ಅಂಟಿಕೊಂಡಿದ್ದನು ಎಂದು ಹೇಳಲಾಗಿದೆ.

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಮೀರಿಸಲು ಸಾಧ್ಯವಿಲ್ಲ:ಡಾ.ಅಜಯ್ ಸಿಂಗ್

ಸ್ವಾತಂತ್ರ್ಯ ಪೂರ್ವ ಮತ್ತು ನಂತರದಲ್ಲಿ ಪ್ರದೇಶದ ಅಭಿವೃದ್ಧಿಗೆ ಮಾಧ್ಯಮದ ಕೊಡುಗೆ ಅನನ್ಯವಾಗಿದೆ. ಮಾಧ್ಯಮ ಸಮಾಜದ ಪ್ರತಿಬಿಂಬವಾಗಿದ್ದು, ಯುವ ಉದಯೋನ್ಮುಖ ಪತ್ರಕರ್ತರಿಗೆ ವೇದಿಕೆ ಒದಗಿಸುವ ಮೀಡಿಯಾ ಫೆಸ್ಟ್ ತಮ್ಮ ಸಂಸ್ಥಾನದ ಆವರಣದಲ್ಲಿ ಆಯೋಜಿಸಿರುವುದು ಸ್ವಾಗತಾರ್ಹ ಎಂದ ಅವರು, 1917ರಲ್ಲಿ ಇಲ್ಲಿ ಗ್ರಂಥಾಲಯ ಸ್ಥಾಪಿಸಿ ಸಾರ್ವಜನಿಕರಿಗೆ ಪತ್ರಿಕೆ ಓದುವ ಅವಕಾಶ ಕಲ್ಪಿಸಿದ ಕೀರ್ತಿ ಪೂಜ್ಯ ದೊಡ್ಡಪ್ಪ ಅಪ್ಪ ಅವರಿಗೆ ಸಲ್ಲುತ್ತದೆ. ತಮ್ಮ ಸಂಸ್ಥೆಯಡಿ ಗೋದುತಾಯಿ ಕಾಲೇಜಿನಲ್ಲಿ ಮಹಿಳೆಯರಿಗೆ ಪತ್ರಿಕೋದ್ಯಮ ವಿಷಯ ಮತ್ತು ಇತ್ತೀಚೆಗೆ ಪ್ರತ್ಯೇಕ ಪತ್ರಿಕೋದ್ಯಮ ವಿಭಾಗ ತೆರೆದು ಈ ಭಾಗದ ಮಕ್ಕಳಿಗೆ ಪತ್ರಿಕೋದ್ಯಮ ಕ್ಷೇತ್ರಕ್ಕೆ ಕಾಲಿಡಲು ಶರಣಬಸವ ವಿ.ವಿ. ಶ್ರಮಿಸುತ್ತಿದೆ ಎಂದರು.

ವಿದ್ಯಾರ್ಥಿಗಳಲ್ಲಿ ಹಿಂಜರಿಕೆ ಬೇಡ: ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷೆ ಆಯೇಷಾ ಖಾನಂ ಅವರು ಮಾತನಾಡಿ, ಅಕಾಡೆಮಿಯು ಎಸ್.ಸಿ.ಪಿ-ಟಿ.ಎಸ್.ಪಿ ಹಾಗೂ ಲಿಂಗಾನುಪಾತ ಅನುದಾನದಡಿ ಮಹಿಳಾ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಅಪ್ರೆಂಟಿಸ್ ತರಬೇತಿ ನೀಡಲಾಗುತ್ತಿದ್ದು, ಈ ಭಾಗದ ಅಭ್ಯರ್ಥಿಗಳು ಹೆಚ್ಚು ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸಿಲ್ಲ. ಪತ್ರಿಕೋದ್ಯಮ ವಿದ್ಯಾರ್ಥಿಗಳಲ್ಲಿ ಹಿಂಜರಿಕೆ ಬೇಡ, ಪ್ರಶ್ನೆ ಕೇಳಲು ಧೈರ್ಯ ತೋರಬೇಕು. ಪ್ರದೇಶದ ವಿದ್ಯಾರ್ಥಿಗಳು ಸಂಕುಚಿತ ಮನೋಭಾವನೆಯಿಂದ ಹೊರಬನ್ನಿ ಎಂದರು.

ವಿಶ್ವಕ್ಕೆ ಪ್ರಜಾಪ್ರಭುತ್ವ ಸಾರಿದ ಕಲಬುರಗಿ ನೆಲದಲ್ಲಿ ಮಾಧ್ಯಮ ಅಕಾಡೆಮಿಯು ಪ್ರಥಮ ಬಾರಿಗೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಮೀಡಿಯಾ ಫೆಸ್ಟ್ ಆಯೋಜಿಸಿದೆ. ಅಕಾಡೆಮಿಯನ್ನು ಡಿಜಿಟಲೀಕರಣ ಮಾಡುವ ಉದ್ದೇಶ ಹೊಂದಿದ್ದು, ಇತ್ತೀಚೆಗೆ ಅಕಾಡೆಮಿಯಿಂದ ನೀಡಲಾಗುವ ವಾರ್ಷಿಕ ಪ್ರಶಸ್ತಿ ಮೊತ್ತ ಸಹ ಹೆಚ್ಚಳ ಮಾಡಲಾಗಿದೆ. ಗ್ರಾಮೀಣ ಭಾಗದ ಪತ್ರಕರ್ತರಿಗೆ ವೃತ್ತಿ ಕೌಶಲ್ಯ ಹೆಚ್ಚಿಸಲು ತರಬೇತಿ ಆಯೋಜಿಸಲು ಸಣ್ಣ ಪತ್ರಿಕೆಗಳ ಬೆಳವಣಿಗೆ ಕುರಿತು ಚಿಂತನೆ ನಡೆಸಲಾಗುತ್ತಿದೆ ಎಂದು ತಮ್ಮ ಆಶಯ ಭಾಷಣದಲ್ಲಿ ತಿಳಿಸಿದರುಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಮಾತನಾಡಿ, ಸಮಾಜದ ಕನ್ನಡಿಯೇ ಮಾಧ್ಯಮ. ವಿಶ್ವದಾದ್ಯಂತ ಪ್ರತಿದಿನ ಆಗು ಹೊಗುವ ಸುದ್ದಿಯನ್ನು, ಕಲೆ, ಸಂಸ್ಕೃತಿ, ಇತಿಹಾಸವನ್ನು, ನೈಜ ಘಟನಾವಳಿಗಳನ್ನು ಸಾರ್ವಜನಿಕರಿಗೆ ತಲುಪಿಸುವ ಮಹತ್ವದ ಜವಾಬ್ದಾರಿ ಪತ್ರಕರ್ತರ ಮೇಲೆ ಇದೆ. ಸಾಮಾಜಿಕ ಸಮಸ್ಯೆಗಳನ್ನು ಸರ್ಕಾರದ ಗಮನ ಸೆಳೆಯುವ ಪತ್ರಕರ್ತನಾದವನಿಗೆ ಮಾನವ ಸ್ಪರ್ಶಿ ಇರಬೇಕಾದದ್ದು, ಅತೀ ಅವಶ್ಯಕ ಎಂದು ಅವರು ಅಭಿಪ್ರಾಯಪಟ್ಟರು.

ಮಾಧ್ಯಮ ಸಾಮಾಜಿಕ ಹೊಣೆಗಾರಿಕೆ ನಿಭಾಯಿಸಲಿ: ಕೊಪ್ಪಳ ವಿಶ್ವವಿದ್ಯಾಲಯದ ಉಪ ಕುಲಪತಿ ಬಿ.ಕೆ. ರವಿ ಮಾತನಾಡಿ, ಇತ್ತೀಚೆಗೆ ಮಾಧ್ಯಮಗಳು ಮನೋರಂಜನೆ ಸುದ್ದಿಗೆ ಹೆಚ್ಚು ಮಹತ್ವ ನೀಡುತ್ತಿರುವುದರಿಂದ ಅಭಿವೃದ್ಧಿ ಪರ, ಸಮಾಜ ಮುಖಿಯ ಸುದ್ದಿಗಳು ದೂರವಾಗುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದ ಅವರು ಇಂದಿಗೂ ನಮ್ಮ ರಾಜ್ಯದಲ್ಲಿ ಅಪೌಷ್ಠಿಕತೆ, ಶಾಲೆಯಿಂದ ಹೊರಗುಳಿದ ಮಕ್ಕಳ ಸಂಖ್ಯೆ ಹೆಚ್ಚಿದೆ. ಬಾಲ ವಿವಾಹದಂತಹ ಸಾಮಾಜಿಕ ಪಿಡುಗುಗಳು ಕಾಡುತ್ತಿವೆ. ಇದನ್ನೆಲ್ಲ ನಿರ್ಮೂಲನೆ ಮಾಡಬೇಕಿರುವುದರಿಂದ ಮನೋರಂಜನೆ ಜೊತೆಗೆ ಸಮಾಜಮುಖಿ ಸುದ್ದಿಗಳಿಗೂ ಮಾಧ್ಯಮಗಳು ಹೆಚ್ಚು ಆದ್ಯತೆ ನೀಡಬೇಕಾಗಿದೆ. ಈ ನಿಟ್ಟಿನಲ್ಲಿ ಮಾಧ್ಯಮ ಕಾವಲುಗಾರನಾಗಿ ಸಾಮಾಜಿಕ ಹೊಣೆಗಾರಿಕೆ ಪ್ರದರ್ಶಿಸಬೇಕಿದೆ ಎಂದರು.ಆರೋಗ್ಯಕರ ಮಾಧ್ಯಮ ಕ್ಷೇತ್ರಕ್ಕೆ ಈ ರೀತಿಯ ಮೀಡಿಯಾ ಫೆಸ್ಟ್ ರಾಜ್ಯದಲ್ಲಿ ಎಲ್ಲಾ ವಿಭಾಗದಲ್ಲಿ ಮತ್ತು ರಾಜಧಾನಿಯಲ್ಲಿ ನಡೆಸಬೇಕೆಂದು ಒತ್ತಾಯ ಮಾಡಿದ ಪ್ರೊ ಬಿ.ಕೆ. ರವಿ ಅವರು, ಜಾಗತಿಕ ಮಾಧ್ಯಮದಲ್ಲಿ ಇಂದು ಭಾರತ ಅಗ್ರಗಣ್ಯ ಸ್ಥಾನ ಪಡೆದುಕೊಂಡಿದೆ. ಅಮೆರಿಕಾ, ಚೀನಾ, ಜಪಾನ್, ದಕ್ಷಿಣ ಕೋರಿಯಾ ದೇಶಗಳು ಮನೋರಂಜನೆಯಲ್ಲಿ ಇಲ್ಲಿ ಹೂಡಿಕೆ ಮಾಡುತ್ತಿದ್ದಾರೆ. ಇದಕ್ಕೆ ಕಾರಣ ಇಲ್ಲಿ ದಿನದಿಂದ ದಿನಕ್ಕೆ ಅಳವಡಿಸಿಕೊಳ್ಳುತ್ತಿರುವ ತಂತ್ರಜ್ಞಾನ. ಹೀಗಾಗಿ ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯವಿದೆ ಎಂದ ಅವರು, ತಂತ್ರಜ್ಞಾನದಲ್ಲಿಯೇ ಮಾರು ಹೋಗದಿರಿ ಎಂಬ ಎಚ್ಚರಿಕೆಯ ಸಂದೇಶವನ್ನು ವಿದ್ಯಾರ್ಥಿಗಳಿಗೆ ನೀಡಿದರು.ಕಾರ್ಯಕ್ರಮದಲ್ಲಿ ಶರಣಬಸವ ವಿಶ್ವವಿದ್ಯಾಲಯದ ಉಪ ಕುಲಪತಿ ಡಾ. ಅನಿಲಕುಮಾರ ಬಿಡವೆ, ಕುಲಸಚಿವ ಡಾ. ಎಸ್.ಜಿ. ಡೊಳ್ಳೆಗೌಡರ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಜಂಟಿ ನಿರ್ದೇಶಕರಾದ ಮಂಜುನಾಥ ಡೊಳ್ಳಿನ, ಸಿದ್ದೇಶ್ವರಪ್ಪ ಜಿ.ಬಿ., ಉಪನಿರ್ದೇಶಕರಾದ ರಾಮಲಿಂಗಪ್ಪ ಬಿ.ಕೆ., ಜಡಿಯಪ್ಪ ಗೆದ್ಲಗಟ್ಟಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಭವಾನಿ ಸಿಂಗ್, ಕಲಬುರಗಿ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ, ವಿಶ್ವವಿದ್ಯಾಲಯದ ಪ್ರೊ.ವಿ.ಟಿ.ಮೇತ್ರೆ, ಅಲ್ಲಮಪ್ರಭು ದೇಶಮುಖ, ಸಂಜಯಗೌಡ ಹೊಸಮನಿ ಮತ್ತಿತರರು ಇದ್ದರು.

ಶರಣಬಸವ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಮುಖ್ಯಸ್ಥ ಪ್ರೊ. ಟಿ.ವಿ.ಶಿವಾನಂದನ್ ಅವರು ಸರ್ವರನ್ನು ಸ್ವಾಗತಿಸಿದರು. ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಸಹನಾ ಮಾಜಿ ವಂದಿಸಿದರು. ಮಾಧ್ಯಮ ಅಕಾಡೆಮಿ ಸದಸ್ಯೆ ಮತ್ತು ಕಾರ್ಯಕ್ರಮದ ಸಂಯೋಜಿಕಿ ರಶ್ಮಿ ಎಸ್. ನಿರೂಪಿಸಿದರು.

ಎರಡು ದಿನಗಳ ಕಾಲ ಶರಣಬಸವ ವಿ.ವಿ.ಯಲ್ಲಿ ನಡೆಯುವ ಮೀಡಿಯಾ ಫೆಸ್ಟ್‌ನಲ್ಲಿ ಕಲಬುರಗಿ ಮತ್ತು ಬೆಳಗಾವಿ ವಿಭಾಗದ ಪತ್ರಿಕೋದ್ಯಮ ಅಭ್ಯರ್ಥಿಗಳು ಭಾಗವಹಿಸಿದ್ದು, ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

## ಸುಗ್ರೀವಾಜ್ಞೆ ಕಟ್ಟುನಿಟ್ಟಿನ ಜಾರಿಗೆ ಕ್ರಮ : ಡಿಸಿ ಜಾನಕಿ

ಮೈಕ್ರೋ ಫೈನಾನ್ಸ್ ಸಂಸ್ಥೆಗಳು, ಗಿರವಿದಾರರು, ಲೇವಾದೇವಿದಾರರು ಸೇರಿದಂತೆ ಇತರೆ ಸಾಲ ನೀಡಿಕೆ ಏಜೆನ್ಸಿಗಳು ಸುಗ್ರೀವಾಜ್ಞೆ ಜಾರಿಯಾದ ದಿನಾಂಕದಿಂದ 30 ದಿನಗಳ ಒಳಗಾಗಿ ಜಿಲ್ಲೆಯ ನೋಂದಣಿ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿ ನೋಂದಣಿ ಮಾಡಿಕೊಳ್ಳತಕ್ಕದ್ದು. ಒಂದು ವರ್ಷದ ಅವಧಿಗೆ ನೋಂದಣಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿಗಳು ನೋಂದಣಿ ಪ್ರಾಧಿಕಾರಿಯಾಗಿದ್ದು, ನೋಂದಣಿ ಪ್ರಾಧಿಕಾರದಿಂದ ಈ ಸುಗ್ರೀವಾಜ್ಞೆಯಡಿ ನೋಂದಣಿ ಪಡೆಯದೇ ಯಾವುದೇ ಸಾಲಗಳನ್ನು ಮಂಜೂರು ಮಾಡತಕ್ಕದ್ದಲ್ಲ. ಅಲ್ಲದೇ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅಥವಾ ಸಾಲ ನೀಡಿಕೆ ಏಜೆನ್ಸಿಗಳು ಅಥವಾ ಲೇವಾದೇವಿದಾರರ ನೋಂದಣಿಯನ್ನು ಪ್ರಾಧಿಕಾರವು ರದ್ದುಗೊಳಿಸಬಹುದು ಇಲ್ಲದೇ ರದ್ದುಪಡಿಸಲು ಶಿಫಾರಸ್ಸು ಮಾಡಬಹುದಾಗಿದೆ. ಸುಗ್ರೀವಾಜ್ಞೆಯನ್ನು ಉಲ್ಲಂಘಿಸಿದಲ್ಲಿ 10 ವರ್ಷಗಳ ಕಾರಾಗ್ರಹವಾಸ ಹಾಗೂ 5 ಲಕ್ಷ ರೂ.ಗಳವರೆಗೆ ದಂಡ ವಿಧಿಸಲಾಗುತ್ತದೆ. ಈ ಆಧ್ಯಾದೇಶದಡಿಯಲ್ಲಿ ಅಪರಾಧಗಳು ಜಾಮೀನು ರಹಿತವಾಗಿರುತ್ತದೆ ಎಂದು ಅವರು ತಿಳಿಸಿದರು. ಮೈಕ್ರೋ ಫೈನಾನ್ಸ್ ಸಂಸ್ಥೆ, ಸಾಲ ನೀಡಿಕೆ ಏಜೆನ್ಸಿ ಅಥವಾ ಲೇವಾದೇವಿದಾರರು ತ್ರೈಮಾಸಿಕ ಮತ್ತು ವಾರ್ಷಿಕ ತಖ್ತೆಯನ್ನು ಸಲ್ಲಿಸಲು ವಿಫಲವಾದಲ್ಲಿ ಆರು ತಿಂಗಳುಗಳ ಕಾರಾಗ್ರಹವಾಸದೊಂದಿಗೆ 10 ಸಾವಿರ ರೂ.ಗಳಿಗೆ ವಿಸ್ತರಿಸಬಹುದಾದ ದಂಡ ಹಾಗೂ ಶಿಕ್ಷೆ ಎರಡನ್ನು ವಿಧಿಸಬಹುದಾಗಿದೆ. ಈ ಸುಗ್ರೀವಾಜ್ಞೆ ಆರ್.ಬಿ.ಐನೊಂದಿಗೆ ನೋಂದಾಯಿಸಲಾದ ಯಾವುದೇ ಬ್ಯಾಂಕಿಂಗ್ ಅಥವಾ ಬ್ಯಾಂಕಿಂಗೇತರ ಹಣಕಾಸು ಕಂಪನಿಗೆ ಅನ್ವಯಿಸತಕ್ಕದ್ದಲ್ಲವೆಂದು ತಿಳಿಸಿದರು.

ಸೆಕ್ಷನ್ 7(3)ರಡಿ ಪರಿಣಾಮಕಾರಿ ಬಡ್ಡಿದರ, ಸಾಲಕ್ಕೆ ಲಗತ್ತಾಗಿರುವ ಷರತ್ತು ಮತ್ತು ನಿಬಂಧನೆಗಳು, ಸ್ವೀಕರಿಸಿದ ಕಂತು ಮತ್ತು ಮರುಪಾವತಿ ಹಿಂಬರಹಗಳು ಸೇರಿದಂತೆ ಇತರೆ ಮಾಹಿತಿಗಳನ್ನು ಕನ್ನಡದಲ್ಲಿಯೇ ಸಾಲಗಾರರಿಗೆ ನೀಡಬೇಕು. ಅಲ್ಲದೇ ಪೊಲೀಸ್ ಉಪ ಅಧೀಕ್ಷಕರ ದರ್ಜೆಗೆ ಕಡಿಮೆಯಲ್ಲದ ಪೊಲೀಸ್ ಅಧಿಕಾರಿಯು ಸ್ವತಃ ಪ್ರಕರಣವನ್ನು ದಾಖಲಿಸಿಕೊಳ್ಳಬಹುದಾಗಿದೆ. ಅಲ್ಲದೇ ವಿವಾದಗಳನ್ನು ಇತ್ಯರ್ಥಪಡಿಸಲು ಸರ್ಕಾರವು ಅಧಿಸೂಚನೆ ಮೂಲಕ ಒಂಬುಡ್ಸಪರ್ಸನ್ ನೇಮಕ ಮಾಡಲಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಸಹಕಾರ ಇಲಾಖೆಯ ಉಪನಿಭಂದಕ ದಾನಯ್ಯ ಹಿರೇಮಠ, ಜಿಲ್ಲಾ ಅಗ್ರಣಿ ಬ್ಯಾಂಕಿನ ವ್ಯವಸ್ಥಾಪಕ ರಾಜಕುಮಾರ ಹೂಗಾರ ಸೇರಿದಂತೆ ಜಿಲ್ಲೆಯ ಎಲ್ಲ ಮೈಕ್ರೋ ಫೈನಾನ್ಸ್ ಸಂಸ್ಥೆ, ಲೇವಾದೇವಿ, ಗಿರಿವಿದಾರರ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಬದ್ಧರಾಗಲಿ:ಶಶಿಧರ ಕೋಸಂಬೆ

ಜಿಲ್ಲಾ ಮಹಿಳಾ ರಕ್ಷಣಾ ಘಟಕ, ಬೀದರ ಆಶ್ರಯದಲ್ಲಿಂದ ಮಕ್ಕಳ ಹಕ್ಕು ರಕ್ಷಣೆ ಹಿನ್ನೆಲೆಯಲ್ಲಿ ಆಯೋಜಿಸಿದ ಮಕ್ಕಳೊಂದಿಗೆ ಸಂವಾದ ಮತ್ತು ಅಹವಾಲು ಸ್ವೀಕಾರ ಕಾರ್ಯಾಲಯದಲ್ಲಿ ಅವರು ಮಾತನಾಡುತ್ತಿದ್ದರು.ಮಕ್ಕಳ ಹಕ್ಕು ರಕ್ಷಣೆ ಹಾಗೂ ಉಲ್ಲಂಘನೆ ಪ್ರಕರಣಗಳ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲಿ ಜಾಗೃತಿ ಹಾಗೂ ಸಂವಾದ ಕಾರ್ಯಕ್ರಮವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಎಲ್ಲ ಅಧಿಕಾರಿಗಳು ಮಕ್ಕಳ ಹಕ್ಕುಗಳ ರಕ್ಷಣೆಗೆ ಬದ್ಧರಾಗಬೇಕೆಂದು ಅವರು ತಿಳಿಸಿದರು.ದೇಶದಲ್ಲಿ ಒಟ್ಟು ಜನಸಂಖ್ಯೆಯ ಒಟ್ಟು ಶೇ.40 ರಷ್ಟು ಮಕ್ಕಳಿದ್ದಾರೆ. ಪ್ರತಿ ಮಗುವಿನ ರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಮಕ್ಕಳ ರಕ್ಷಣೆಗಾಗಿ 12 ವಿವಿಧ ಕಾಯ್ದೆಗಳಿವೆ. ಪ್ರತಿ ಮಗುವಿನ ಮಕ್ಕಳ ಬಾಲ್ಯ ಜೀವನ ಸುಖ, ಸಂತೋಷ, ಗೌರವದಿಂದ ಜೀವಿಸುವುದು ಮಕ್ಕಳ ಹಕ್ಕು ಆಗಿದೆ. ಆದರೂ ಸಹ ಹಲವೆಡೆ ಮಕ್ಕಳ ಹಕ್ಕು ಉಲ್ಲಂಘನೆಯಾಗುತ್ತಿದೆ. ಬಾಲ್ಯ ವಿವಾಹ, ಬಾಲ ಕಾರ್ಮಿಕ ಪ್ರಕರಣಗಳು ಈಗಲೂ ಕಾಣುತ್ತೇವೆ. ವರದಿಯೊಂದರ ಪ್ರಕಾರ ದೇಶದಲ್ಲಿ ಒಂದು ನಿಮಿಷಕ್ಕೆ ಬಾಲ್ಯ ವಿವಾಹ ಆಗುತ್ತಿವೆ. 1.5 ಲಕ್ಷ ಬಾಲಕಿ ಗರ್ಭಿಣಿ ಈ ವರ್ಷ ದಾಖಲಾಗಿವೆ. 59 ಸಾವಿರ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು ಇದ್ದರೂ ಸಹ ಇಂತಹ ಅನಿಷ್ಟ ಪದ್ದತಿಗಳು ಜಾರಿಯಲ್ಲಿರುವುದು ಶೋಚನೀಯ ಎಂದು ಕಳವಳ ವ್ಯಕ್ತಪಡಿಸಿದರು.

ಆಯೊಗವು ಮಕ್ಕಳ ರಕ್ಷಣೆಗೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಉಲ್ಲಂಘನೆ ಕಂಡು ಬಂದಲ್ಲಿ ತಕ್ಷಣವೇ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಕೋಸಂಬೆ ಹೇಳಿದರು. ಪ್ರತಿ ವಸತಿ ಶಾಲೆಯಲ್ಲಿ ಮಕ್ಕಳ ಸಲಹಾ ಪೆಟ್ಟಿಗೆ ತೆರೆಯುವಂತೆ ಸಂಬಂಧಿಸಿದ ಅಧಿಕಾರಿಗಳು ಅವರು ತಿಳಿಸಿದರು.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಕಾಶ ಬನಸೋಡೆ ಮಾತನಾಡಿ, ಸಂವಿಧಾನದಲ್ಲಿ ಮಕ್ಕಳ ರಕ್ಷಣೆ ತಿಳಿಸಲಾಗಿ ಕಾನೂನು ಸೇವೆಯು ಸಹ ಮಕ್ಕಳ ಹಕ್ಕು ಉಲ್ಲಂಘನೆ ಹಾಗೂ ರಕ್ಷಣೆಗೆ ಕ್ರಮ ವಸಹಿಸಲಾಗಿದೆಯೆಂದರು.ಮಕ್ಕಳ ಪರವಾಗಿ ಅನೇಕ ಕಾನೂನುಗಳಿದ್ದರೂ, ರಕ್ಷಣಾ ಘಟಕಗಳಿದ್ದರೂ ಸಹ ಅನೇಕ ಪ್ರಕರಣಗಳು ದಾಖಲಾಗುತ್ತಿವೆ. ಬೀದರ ಜಿಲ್ಲೆಯಲ್ಲಿ ಅನೇಕ ಬಾಲ್ಯವಿವಾಹ ತಡೆಯಲಾಗಿದೆ. ಅನೇಕ ಕಡೆ ಬಾಲ ಕಾರ್ಮಿಕರನ್ನು ರಕ್ಷಿಸಲಾಗಿದೆ, ಮಕ್ಕಳಿಗೆ ಶಿಕ್ಷಣದ ಹಕ್ಕು ದೊರೆಯಬೇಕು, ಬಡತನ ನಿರುದ್ಯೋಗದಿಂದ ಅನೇಕ ಸಮಸ್ಯೆಗಳು ಉದ್ಭವವಾಗುತ್ತಿದೆ. ಲೈಂಗಿಕ ದೌರ್ಜನ್ಯ ಪ್ರಕರಣಗಳು ಸಹ ದಾಖಲಾಗಿವೆ. ಮಕ್ಕಳ ಹಕ್ಕು ರಕ್ಷಣೆ ಪ್ರತಿಯೊಬ್ಬ ಅಧಿಕಾರಿಯ ಜವಾಬ್ದಾರಿ ಎಂದರು.ಮಕ್ಕಳೊಂದಿಗೆ ಜರುಗಿದ ಸಂವಾದಲ್ಲಿ ವಿದ್ಯಾರ್ಥಿಗಳು ಹೇಳಿದ ಸಮಸ್ಯೆಗಳಿಗೆ ಸ್ಥಳದಲ್ಲೇ ಬಗೆಹರಿಸಲಾಯಿತು. ಗಾದಗಿ ಶಾಲೆಯ ಸೋಹೇಲ್ ವಿದ್ಯಾರ್ಥಿ 1098 ಸಹಾಯವಾಣಿಗೆ ಕರೆ ಮಾಡಿದರೂ ತಕ್ಷಣ ಪ್ರತಿಕ್ರಿಯೆ ನೀಡಲಿಲ್ಲ ಎಂದು ತಿಳಿಸಿದ. ಕಾಡಗಾಂವ ಶಾಲೆಯ ವಿದ್ಯಾರ್ಥಿ ತಮ್ಮ ಶಾಲೆಯ ಹತ್ತಿರ ಬಸ್ ನಿಲ್ಲಿಸದ ಕಾರಣಕ್ಕೆ 1098ಕ್ಕೆ ಕರೆ ಮಾಡಿದಾಗ ನೀವು ಬಸ್ ಡಿಪೋಗೆ ಹೋಗಿ ತಿಳಿಸಿರಿ ಎಂದರು. ಇದಕ್ಕೆ ಪ್ರತಿಕ್ರಿಯಿಸಿದ ಶಶಿಧರ ಕೋಸಂಬೆ ಮಕ್ಕಳ ಶಿಕ್ಷಣಕ್ಕೆ ತೊಂದ-ರೆಯಾಗದಂತೆ ಶಾಲೆ ಹತ್ತಿರ ಬಸ್ ನಿಲ್ಲಿಸುವಂತೆ ರಸ್ತೆ ಸಾರಿಗೆ ಸಂಸ್ಥೆಯ ಅಧಿಕಾರಿಗೆ ಸೂಚಿಸಿದರು. ಧನ್ನೂರಿನ ವಿಜಯಲಕ್ಷ್ಮೀ ಬಾಲ್ಯವಿವಾಹ ಹಾಗೂ ಲಿಂಗ ತಾರತಮ್ಯ ಬಗ್ಗೆ ಪ್ರಶ್ನೆ ಕೇಳಿ ತಣಿಕಾ ಅಧಿಕಾರಿಗಳು ಸರಿಯಾಗಿ ಕಾರ್ಯ ಮಾಡದೇ ಇರುವ ಬಗ್ಗೆ ತಿಳಿಸಿದರು.ಈ ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಅಧ್ಯಕ್ಷರಾದ ರಜಿಯಾ ಬಳಬಟ್ಟಿ, ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ, ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಗುರುರಾಜ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಸಲೀಂ ಪಾಶಾ, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೊಗದ ಮಾಜಿ ಸದಸ್ಯರಾದ ರಾಘವೇಂದ್ರ, ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿ ಸದಸ್ಯರುಗಳು ಇಲಾಖೆಯ ಗೌರಿಶಂಕರ ಹಾಗೂ ಇಲಾಖೆಯ ಸಿಬ್ಬಂದಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ವಿವಿಧ ಶಾಲೆಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಕ್ರೀಡೆ ಸಹಕಾರಿ

ಮೂಡಲು ಸಹಕಾರಿಯಾಗಿ ಉತ್ತಮ ಪ್ರಗತಿಗೆ ಪೂರಕವಾಗುತ್ತದೆ ಎಂದರು.ಪಿಡಿಓಗಳು ಸಹ ಅತ್ಯಂತ ಒತ್ತಡದ ವಾತಾವರಣದಲ್ಲಿ ಕೆಲಸ ಮಾಡುತ್ತಾರೆ. ಒಂದು ಜಿಲ್ಲೆಗೆ ಜಿಲ್ಲಾಧಿಕಾರಿಗಳ ಜವಾಬ್ದಾರಿ ಹೇಗಿರುತ್ತೋ ಅದೇ ರೀತಿ ಪಿಡಿಓಗಳ ಜವಾಬ್ದಾರಿ ಇರುತ್ತದೆ. ಗ್ರಾಮದಲ್ಲಿ ರಸ್ತೆ, ಅಂಗನವಾಡಿಗಳ ನಿರ್ವಹಣೆಯಲ್ಲಿ ಅವರ ಪಾತ್ರ ದೊಡ್ಡದಾಗಿದೆ. ಅವರ ಕಾರ್ಯಕ್ಕೆ ಮತ್ತಷ್ಟು ಉತ್ತೇಜನೆ ನೀಡಬೇಕಿದೆ. ರಾಯಚೂರ ಜಿಲ್ಲೆಯಲ್ಲಿ ಪಿಡಿಓ ಅವರು ಉತ್ತಮವಾಗಿ ಕೆಲಸ ಮಾಡುತ್ತಾರೆ. ತೆರಿಗೆ ಸಂಗ್ರಹ ಸೇರಿದಂತೆ ನಾನಾ ಕಾರ್ಯಚಟುವಟಿಕೆಯಲ್ಲ ಸಹ ನಾವು ಮುಂಚೂಣಿಯಲ್ಲಿದ್ದೇವೆ. ಕ್ರೀಡಾಕೂಟ ಮುಕ್ತಾಯದ ನಂತರ ವಾಪಸ್ಸು ತಮ್ಮ-ತಮ್ಮ ಕಾರ್ಯ ಸ್ಥಾನಕ್ಕೆ ಹೋದಾಗ ಹೆಚ್ಚಿನ ಹುಮ್ಮಸ್ಸಿನಿಂದ, ಸ್ಫೂರ್ತಿಯಿಂದ ತಾವೆಲ್ಲ ಕೆಲಸ ಮಾಡಬೇಕೆಂದರು.

8 ತಂಡಗಳು, 600 ಅಧಿಕಾರಿ ಭಾಗಿ: ಎರಡು ದಿನಗಳ ಕಾಲ ನಡೆಯುವ ಕ್ರೀಡಾಕೂಟದಲ್ಲಿ ಕಬ್ಬಡ್ಡಿ, ಖೋಖೋ, ವಾಲಿಬಾಲ್, ಚೆಸ್, ಬ್ಯಾಡ್ಮಿಂಟನ್, ಲಾಂಗ್ ಜಂಪ್, ಶಾಟಪುಟ್, ಡಿಸ್ಕಸ್ ಥ್ರೋ, ಜಾವಲಿನ್ ಥ್ರೋ, ರನ್ನಿಂಗ್ ಸೇರಿದಂತೆ ವಿವಿಧ ಸ್ಪರ್ಧೆಗಳು ನಗರದ ಕೃಷಿ ವಿಶ್ವವಿದ್ಯಾಲಯದ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಜಿಲ್ಲೆಯ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್ ಇಲಾಖೆ ಒಳಗೊಂಡ 8 ತಂಡಗಳ ಸುಮಾರು 600 ಅಧಿಕಾರಿ-ನೌಕರರು ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿಗಳಾದ ಶಶಿಕಾಂತ್ ಶಿವಪುರೆ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಶರಣಬಸವರಾಜ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಯುವಜನ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿರೇಶ್ ನಾಯಕ ಸೇರಿದಂತೆ ಇತರರು ಇದ್ದರು.

## ಸಾಲದ ಬಾಧೆಗೆ ಬೇಸತ್ತು ನೇಕಾರ ಆತ್ಮಹತ್ಯೆ

ರವಿವಾರ ಸಂಜೆ 7 ಗಂಟೆ ಹೊತ್ತಿಗೆ ಕುಡಿದ ಅಮಲಿನಲ್ಲಿ ತಮ್ಮ ಮನೆಯ ಪತ್ರಾಸ ಶೆಡ್‌ನ ಎಂಗಲ್ಲಿಗೆ ಹಗ್ಗ ಹಾಕಿ ಕುತ್ತಿಗೆಗೆ ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆಂದು ಆತನ ಪತ್ನಿ ಶಾಂತಾ ಪೋಲಿಸರಿಗೆ ನೀಡಿದ ದೂರಿನಲ್ಲಿ ತಿಳಿಸಿದ್ದಾಳೆ.


## ಸಬ್ಸಿಡಿ ನೀಡಲಿ - ರಾಮಲಿಂಗಾರೆಡ್ಡಿ

ನ್ಯಾಯಮೂರ್ತಿ ಆರ್.ತಾರಿಣಿ, ಸತ್ಯೇಂದ್ರಪಾಲ್ ಸಿಂಗ್ ಈ ಮಂಡಳಿಯಲ್ಲಿದ್ದಾರೆ. ಅರ್ಬನ್ ಡೆವಲಪ್‌ಮೆಂಟ್ ನ ಕಾರ್ಯದರ್ಶಿ ಅವರು ಮೆಟ್ರೋ ಮಂಡಳಿ ಅಧ್ಯಕ್ಷರಾಗಿರುತ್ತಾರೆ. ಇವರೆಲ್ಲ ಸೇರಿ ಮೆಟ್ರೋ ದರ ನಿಗದಿ ಮಾಡಿರುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಜನರ ಹಿತದೃಷ್ಟಿಯಿಂದ ಕೇಂದ್ರಕ್ಕೆ ಪತ್ರ ಬರೆದು ದರ ಕಡಿಮೆ ಮಾಡುವಂತೆ ಮನವಿ ಮಾಡಿದ್ದಾರೆ. ಬಿಜೆಪಿಯವರು ಮೂರು ಬಿಟ್ಟವರು ಊರಿಗೆ ದೊಡ್ಡವರು ಎನ್ನುವಂತೆ ವರ್ತಿಸುತ್ತಿದ್ದಾರೆ ಎಂದು ಕಾಲೆಳೆದರು. ಮೆಟ್ರೋ ದರ ಪರಿಷ್ಕರಣೆಗೆ ಒತ್ತಾಯಿಸಿ ಈಗಾಗಲೇ ಕಾಂಗ್ರೆಸ್ ಪಕ್ಷದ ಯುವ ಘಟಕ ಮತ್ತು ಮಹಿಳಾ ಘಟಕಗಳು ಪ್ರತಿಭಟನೆ ನಡೆಸಿವೆ. ದರ ಏರಿಕೆ ವಾಪಸ್ಸು ಪಡೆಯುವಂತೆ ಒತ್ತಾಯ ಮಾಡಿವೆ. ವಾಣಿಜ್ಯ ತೆರಿಗೆಯಿಂದ 4.5 ಲಕ್ಷ ಕೋಟಿ ಆದಾಯ ಕರ್ನಾಟಕದಿಂದ ಕೇಂದ್ರಕ್ಕೆ ರವಾನೆ ಆಗುತ್ತಿದೆ. ಇದರಲ್ಲಿ ಕರ್ನಾಟಕದ ಅಭಿವೃದ್ಧಿಗೆ ಕೇಂದ್ರ ಸಹಕರಿಸುತ್ತಿಲ್ಲ. ಮೆಟ್ರೋ ಅಭಿವೃದ್ಧಿಗೆ ನಾವು ಕೋಟ್ಯಾಂತರ ಹಣ ನೀಡುತ್ತೇವೆ. ಕೇಂದ್ರದಿಂದ ನಮಗೆ ಯಾವುದೇ ಸಪೋರ್ಟ್ ಸಿಗುತ್ತಿಲ್ಲ. ಮನಮೋಹನ್ ಸಿಂಗ್ ಅವಧಿಯಲ್ಲಿ ಬೆಂಗಳೂರಿಗೆ ಮೆಟ್ರೋ ತರಲಾಗಿದೆ. ದೇಶದಲ್ಲಿ ಮೆಟ್ರೋ ಹೊಂದಿರುವ ಎಲ್ಲ ರಾಜ್ಯಗಳಿಗೂ ಒಂದೇ ಮಾನದಂಡ ಅನುಸರಿಸಬೇಕು. ಬುರುಡೆ ಪಕ್ಷದವರು ಮೆಟ್ರೋ ತಂದಿದ್ದೇ ನಾವು ಎಂದು ಪ್ರತಿದಿನ ಪೋಸ್ ಕೊಡುತ್ತಿದ್ದಾರೆ ಎಂದು ಮಾತಿನಿಂದ ಬಿಜೆಪಿಗೆ ತಿವಿದಿರು.

## ಮಾ.7ರಂದು ರಾಜ್ಯ ಬಜೆಟ್

ಎಂದಿಗೂ ಹಿಂದೆ ಬಿದ್ದಿಲ್ಲ ಎಂದು ಅವರು ಪ್ರತಿಪಾದಿಸಿದರು.ಬೆಲೆ ಏರಿಕೆಯಿಂದಾಗಿ ತಮ್ಮ ಮೇಲಿನ ಅಪಾರ ನಿರೀಕ್ಷೆಗಳ ಕುರಿತ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, "ಬೆಲೆ ಏರಿಕೆಯ ಸಮಸ್ಯೆಯನ್ನು ಪರಿಹರಿಸುವತ್ತ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೆಲಸ ಮಾಡಬೇಕು. ಈ ವಿಷಯದಲ್ಲಿ ಕೇಂದ್ರ ಸರ್ಕಾರಕ್ಕೆ ಹೆಚ್ಚಿನ ಜವಾಬ್ದಾರಿ ಇದೆ. ನಮ್ಮಿಂದ ಸಾಧ್ಯವಾದದ್ದನ್ನು ನಾವು ಮಾಡುತ್ತೇವೆ." ಕರ್ನಾಟಕದಲ್ಲಿ ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಯನ್ನು ರಾಜ್ಯವು ಎಷ್ಟು ವೇಗವಾಗಿ ಅನುಷ್ಠಾನಗೊಳಿಸುತ್ತಿದೆಯೋ ಅದಕ್ಕೆ ಅನುಗುಣವಾಗಿ ಕೇಂದ್ರ ಸರ್ಕಾರವು ತನ್ನ ಪಾಲು ಹಣವನ್ನು ಬಿಡುಗಡೆ ಮಾಡುತ್ತಿಲ್ಲ ಎಂದು ಸಿದ್ದರಾಮಯ್ಯ ಆರೋಪಿಸಿದರು.ಮೆಟ್ರೋ ರೈಲು ದರ ಏರಿಕೆಗೆ ಸಂಬಂಧಿಸಿದಂತೆ, ದರ ನಿಗದಿ ಸಮಿತಿಯನ್ನು ಕೇಂದ್ರ ಸರ್ಕಾರ ನೇಮಿಸುತ್ತದೆ ಎಂದು ಅವರು ಹೇಳಿದರು.

## ಪರೀಕ್ಷೆ ಬರೆದ 2856 ವಿದ್ಯಾರ್ಥಿಗಳು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.17: ಪಟ್ಟಣದ ಚನ್ನಬಸವೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಭಾನುವಾರ ಸ್ಕಾಲರ್‌ಶಿಪ್ ಪ್ರವೇಶ ಪರೀಕ್ಷೆ ನಡೆದವು.

ಜಿಲ್ಲೆಯ ವಿವಿಧ ಭಾಗಗಳಿಂದ 2856 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆಯುವ 30 ವಿದ್ಯಾರ್ಥಿಗಳಿಗೆ ಉಚಿತ ಎರಡು ವರ್ಷ ಪಿಯು ಶಿಕ್ಷಣ ಮತ್ತು ವಸತಿ ಸೌಲಭ್ಯ ಕಲ್ಪಿಸಲಾಗುತ್ತದೆ.

ನಂತರದಲ್ಲಿ 31 ರಿಂದ 100 ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕದಲ್ಲಿ ಶೇ.75 ರಷ್ಟು ರಿಯಾಯಿತಿ, 101 ರಿಂದ 200 ವಿದ್ಯಾರ್ಥಿಗಳಿಗೆ ಶೇ.50 ರಷ್ಟು ಮತ್ತು 201 ರಿಂದ 300 ವಿದ್ಯಾರ್ಥಿಗಳಿಗೆ ಕಾಲೇಜು ಶುಲ್ಕದಲ್ಲಿ ಶೇ.25 ರಷ್ಟು ರಿಯಾಯಿತಿ ನೀಡಲಾಗುತ್ತಿದೆ.

ಹಾಗಾಗಿ ಎಸ್ಸೆಸ್ಸೆಲ್ಸಿ ವ್ಯಾಸಂಗ ಮಾಡುತ್ತಿರುವ ಸರಕಾರಿ ಮತ್ತು ಖಾಸಗಿ ಶಾಲೆಯ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು.

ಶುಭ ಹಾರೈಕೆ :

ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ಸಂಸ್ಥೆಯ ಅಧ್ಯಕ್ಷ ಈಶ್ವರ ಖಂಡ್ರೆ, ಕಾರ್ಯದರ್ಶಿ ಸಾಗರ ಖಂಡ್ರೆ, ನಿರ್ದೇಶಕಿ ಡಾ.ಗೀತಾ ಈಶ್ವರ ಖಂಡ್ರೆ, ಆಡಳಿತಾಧಿಕಾರಿ ಅಂಕುಶ ಢೋಲೆ, ಪ್ರಾಚಾರ್ಯರಾದ ಉದಯಕುಮಾರ ಕಲ್ಯಾಣೆ, ಮೀನಾಕುಮಾರಿ ಪಾಟೀಲ್, ಡಾ.ರಮೇಶ ಪಾಟೀಲ್, ಕಮಲಾ ಸಿರ್ಸೆ, ಲಕ್ಷ್ಮಿಕಾಂತ ನಾಟೇಕರ್ ಸೇರಿದಂತೆ ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ.



ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶುಲ್ಕರಹಿತ ಮತ್ತು ರಿಯಾಯತಿ ಶುಲ್ಕದಲ್ಲಿ ಎರಡು ವರ್ಷ ಪಿಯುಸಿ ಶಿಕ್ಷಣ ನೀಡಲಾಗುತ್ತಿದೆ. ಜಿಲ್ಲೆಯ ವಿದ್ಯಾರ್ಥಿಗಳು ಸದುಪಯೋಗ ಪಡೆದು ಕೊಳ್ಳಬೇಕು.

-ಸಾಗರ ಖಂಡ್ರೆ ಕಾರ್ಯದರ್ಶಿಗಳು
ಶಾಂತಿವರ್ಧಕ ಶಿಕ್ಷಣ ಸಂಸ್ಥೆ
ಭಾಲ್ಕಿ

## ವೈಭವದ ಕಮತಗಿ ಹುಚ್ಚೇಶ್ವರ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17-ಜಿಲ್ಲೆಯ ಹುನಗುಂದ ತಾಲೂಕಿನ ಕಮತಗಿಯ ಹೊಳೆ ಹುಚ್ಚೇಶ್ವರ ರಥೋತ್ಸವ ಸೋಮವಾರ ಸಂಭ್ರಮದಿಂದ ಜರುಗಿತು.

ಬೆಳಿಗ್ಗೆ ರಥದ ಬಂಗಾರದ ಕಳಸದ ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಅತ್ಯಂತ ವೈಭವದಿಂದ ನಡೆಯಿತು. ಬಾಜಾ, ಭಜಂತ್ರಿ ಸೇರಿ ಸಕಲ ವಾದ್ಯ ವೈಭವಗಳೊಂದಿಗೆ ನಡೆದ ಮೆರವಣಿಗೆಯಲ್ಲಿ ಸಹಸ್ರಾರು ಜನ ಪಾಲ್ಗೊಂಡಿದ್ದರು. ಸಾಯಂಕಾಲ 6 ಗಂಟೆಗೆ ಹೊಳೆ ಹುಚ್ಚೇಶ್ವರ ಮಹಾರಥೋತ್ಸವ ನಡೆಯಿತು. ಶ್ರೀಮಠದ ಪೂಜ್ಯರಾದ ಹೊಳೆ ಹುಚ್ಚೇಶ್ವರ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ನಾಡಿನ ಅನೇಕ ಜನ ಹರ ಗುರು ಚರಮೂರ್ತಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದು ರಥೋತ್ಸವಕ್ಕೆ ಚಾಲನೆ ನೀಡಿದರು.

ರಥದ ಬೀದಿಯ ಇಕ್ಕೆಲಗಳಲ್ಲಿ ಹಾಗೂ ಸುತ್ತಲಿನ ಪ್ರದೇಶದಲ್ಲಿ ನಿಂತಿದ್ದ ಅಪಾರ ಸಂಖ್ಯೆಯ ಭಕ್ತರು ರಥ-ಕ್ಕೆ ಹೂವು, ಹಣ್ಣು, ಉತ್ತತ್ತಿ ಎಸೆದು ಹರಕೆ ತೀರಿಸಿದರು. 'ಹುಚ್ಚೇಶ್ವರ ಮಹಾರಾಜಕೀಜೈ..' ಉದ್ಘೋಷದೊಂದಿಗೆ ವೈಭವದ ರಥೋತ್ಸವದ ಸನ್ನಿವೇಶವನ್ನು ಕಣ್ತುಂಬಿಕೊಂಡರು.

# ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸಿ - ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸಿ ಅವರನ್ನು ಮುಖ್ಯ ವಾಹಿನಿಗೆ ತರುವ ಕಾರ್ಯವಾಗಬೇಕು ಎಂದು ಸಂಸದ ಸಾಗರ ಖಂಡ್ರೆ ಅಭಿಪ್ರಾಯಪಟ್ಟರು.

ಪಟ್ಟಣದ ಸತ್ಯಸಾಯಿ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣದಿಂದಲೇ ಎಲ್ಲವೂ ಸಾಧ್ಯ, ಹೀಗಾಗಿ ಶಾಲಾ ಪರಿಸರದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ,ಅವರನ್ನು ಪ್ರೋತ್ಸಾಹಿಸಿ ಮುಖ್ಯ ವಾಹಿನಿಗೆ ತರುವ ಕಾರ್ಯ ಶಿಕ್ಷಕರದ್ದಾಗಿರುತ್ತದೆ. ಹೀಗಾಗಿ ಶಿಕ್ಷಕರು ಮಕ್ಕಳ ಪ್ರತಿಭೆಯನ್ನು ಗುರುತಿಸಿ ಅವರನ್ನು ಪ್ರೊತ್ಸಾಹಿಸಬೇಕು. ಈ ಭಾಗದ ವಿದ್ಯಾರ್ಥಿಗಳು ತುಂಬಾ ಪ್ರತಿಭಾವಂತರು,ಅವರಿಗೆ ಉತ್ತಮ ಮಾರ್ಗದರ್ಶನದ ಅವಶ್ಯಕತೆ ಇದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ಮಾಡಿ, ಅವರಲ್ಲಿ ಯಶಸ್ಸು ಕಂಡು ಕೊಳ್ಳುವ ಕಾರ್ಯವಾಗಬೇಕು ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಮಾತನಾಡಿ, ಶಿಕ್ಷಕರು ನಿರಂತರ ಅಭ್ಯಾಸ ಮಾಡಬೇಕು. ಮಕ್ಕಳ ಮನಸ್ಸನ್ನು ಅರಿತು ಪಾಠ ಮಾಡಬೇಕು. ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳು ಪರೀಕ್ಷೆಯನ್ನು ಹಬ್ಬದಂತೆ ಸಂಭ್ರಮಿಸಬೇಕು. ಉತ್ತಮ ರೀತಿಯಿಂದ ಅಭ್ಯಾಸ ಮಾಡಿ ಪರೀಕ್ಷೆ ಎದುರಿಸಿ ಎಂದು ಸಲಹೆ ನೀಡಿದರು.

ಡಿವಾಯ್ ಎಸ್ ಪಿ ಶಿವಾನಂದ ಪವಾಡಶೆಟ್ಟಿ ಮಾತನಾಡಿ, ಸತ್ಯಸಾಯಿ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಪ್ರತಿವರ್ಷ ಉತ್ತಮ ಅಂಕ ಗಳಿಸಿ ಮುನ್ನಡೆಯುತ್ತಿರುವುದು ಪ್ರಶಂಶನೀಯ ಕಾರ್ಯವಾಗಿದೆ.ಈ ಭಾಗದ ಫಲಿತಾಂಶ ಹೆಚ್ಚಿಸುವಲ್ಲಿ ಇಲ್ಲಿಯ ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಶ್ರಮ ಅಡಗಿದೆ ಎಂದು ಹೇಳಿದರು.

ಸತ್ಯಸಾಯಿ ಪಬ್ಲಿಕ್ ಶಾಲೆಯ ಅಧ್ಯಕ್ಷ ಚಂದ್ರಶೇಖರ ಎಮ್ಮೆ ಅಧ್ಯಕ್ಷತೆವಹಿಸಿ ಮಾತನಾಡಿದರು. ಪ್ರಾಂಶುಪಾಲೆ ನಿರ್ಮಲಾ ತಿವಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜ್ಯೋತಿ ಎಮ್ಮೆ ಶಿಕ್ಷಣ ಸಂಸ್ಥೆಯ ಬಗ್ಗೆ ವಿವರಣೆ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಮಲ್ಲಿಕಾರ್ಜುನ ಎಮ್ಮೆ, ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಸಹದೇವ ಗೌಡಗಾವೆ, ಸಿಆರ್ ಪಿ ಅಂಬರೀಶ ಖಂಡ್ರೆ, ರಾಜಗುರು ಮಹಾಗಾವೆ ಉಪಸ್ಥಿತರಿದ್ದರು.

# ಮಕ್ಕಳು ಜೀವನದಲ್ಲಿ ನಿರ್ದಿಷ್ಟ ಗುರಿ ಹೊಂದಬೇಕು: ಮಹಾಲಿಂಗ ದೇವರು




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಗುರುಕುಲ ಶಾಲೆಯ ಶಿಕ್ಷಣ ಅದ್ಭುತವಾಗಿದೆ ಅಷ್ಟೇ ಸಂಸ್ಕಾರಯುತ ಶಿಕ್ಷಣ ಕೊಡುವಲ್ಲಿ ಹಿರೇಮಠ ಸಂಸ್ಥಾನದ ಕೊಡುಗೆ ಅಪಾರವಾಗಿದೆ ಎಂದು ಪರಿಸರ ಸಂರಕ್ಷಣೆ ವೇದಿಕೆ ರಾಜ್ಯ ಕಾರ್ಯದರ್ಶಿ ಸಂಗಮೇಶ ಜವಾದಿ ನುಡಿದರು. ತಾಲೂಕಿನ ಕಂದಗೋಳ ಗ್ರಾಮದ ಡಾ. ಚನ್ನಬಸವ ಪಟ್ಟದ್ದೇವರು ಗುರುಕುಲ ಶಾಲೆಯ ಆವರಣದಲ್ಲಿ ಆಯೋಜಿಸಲಾಗಿದ್ದ ಹತ್ತನೇ ತರಗತಿಯ ಮಕ್ಕಳ ಬೀಳ್ಕೊಡುಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಭಾವನಾತ್ಮಕ ಪ್ರಪಂಚವನ್ನು ಬೆಳೆಸಿಕೊಳ್ಳುವುದರ ಮೂಲಕ ಮಕ್ಕಳು ಜೀವನವನ್ನು ಸುಂದರವಾಗಿ ಇರಿಸಿಕೊಳ್ಳಬೇಕು. ಅಂಕಗಳ ಜೊತೆಗೆ ಜೀವನಮೌಲ್ಯಗಳು ಅತ್ಯಗತ್ಯ. ಕಠಿಣ ಪರಿಸ್ಥಿತಿಯನ್ನು ಎದುರಿಸುವ ಛಲವನ್ನು ಮಕ್ಕಳು ಬೆಳೆಸಿಕೊಳ್ಳಬೇಕು. ಮಕ್ಕಳು ಮತ್ತು ಕಲಿತ ಶಾಲೆಯ ಸಂಬಂಧ ಮತ್ತು ಕೊಂಡಿ ಎಂದಿಗೂ ಕಳಚಬಾರದು. ಅದು ಮುಂದುವರಿಯುತ್ತಾ ಸಾಗಬೇಕು. ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಸಮಾಜದ ಆಧಾರಸ್ತಂಭವಾಗಬೇಕು ಎಂದು ಶುಭ ಹಾರೈಸಿದರು. ಜ್ಞಾನ, ಬುದ್ಧಿವಂತಿಕೆ, ಚಾರಿತ್ರ್ಯ ಮತ್ತು ಧೈರ್ಯಕ್ಕಾಗಿ ಶಿಕ್ಷಣ ಎಂಬ ಶಾಲೆಯ ಧ್ಯೇಯವಾಕ್ಯವನ್ನು ಎತ್ತಿಹಿಡಿಯುವಂತೆ ಮಕ್ಕಳಿಗೆ ಕರೆಯನ್ನು ನೀಡಿದರು. ದಿವ್ಯ ಸಾನಿಧ್ಯ ವಹಿಸಿದ್ದ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಭಾಲ್ಕಿಯ ಕಾರ್ಯದರ್ಶಿ ಪೂಜ್ಯ ಮಹಾಲಿಂಗದೇವರು ಮಾತನಾಡಿ ಮಕ್ಕಳು ಜೀವನದಲ್ಲಿ ನಿರ್ದಿಷ್ಟ ಗುರಿಯನ್ನು ಹೊಂದಬೇಕು. ಗುರಿ ಈಡೇರಿಕೆಗೆ ಕಠಿಣ ಶ್ರಮ ಹಾಕಬೇಕು. ದುಶ್ಚಟಗಳಿಂದ ದೂರ ಇರಬೇಕು. ಹಿರಿಯರಿಗೆ -ಶಿಕ್ಷಕರಿಗೆ ಗೌರವ ನೀಡಬೇಕು. ಮಕ್ಕಳು ಮೊಬೈಲ್ ಗಳಿಗೆ ಬಲಿಯಾಗಬಾರದು. ಮಕ್ಕಳು ಇಷ್ಟಪಡುವ ಕೋರ್ಸ್ ಆಯ್ಕೆ ಮಾಡಿಕೊಳ್ಳಲು ಪಾಲಕರು ಮುಕ್ತ ಅವಕಾಶ ನೀಡಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಸ್ಥಾನಿಕ ಕಮಿಟಿಯ ಅಧ್ಯಕ್ಷ ಶರಣ ಮಾಣಿಕರಾವ ಹೌಶೆಟ್ಟಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶರಣ ಬಂಡೆಪ್ಪ ಮೂಲಗೆ, ಗೌರಮ್ಮ ಪೊಲೀಸ್ ಪಾಟೀಲ್, ಪಾಂಡುರಂಗ ಹಿರೇಬೈ, ಶಿವಶರಣಪ್ಪ ಪಾಟೀಲ್ ಮುಂತಾದವರು ಹಾಜರಿದ್ದರು. ಮುಖ್ಯಗುರುಗಳಾದ ರೇಖಾ ಮಂಜುನಾಥ್ ಚಾಳಕನವರ್ ರವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಹತ್ತನೇ ತರಗತಿಯ ಮಕ್ಕಳು ಅವರ ತಂದೆ ತಾಯಿಗಳ ಪಾದ ಪೂಜೆ ಮಾಡಿ ಅವರ ಆಶೀರ್ವಾದ ಪಡೆದರು. ನಂತರ ಪ್ರಾಥಮಿಕ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿದ್ಯಾರ್ಥಿ ನಾಗರಾಜ್ ಕಲ್ಲಪ್ಪ ದೇವಣಿ ಸ್ವಾಗತಿಸಿದರು. ವಿದ್ಯಾರ್ಥಿನಿ ಪ್ರಜ್ಞಾ ಮಾಣಿಕ್ ನಿರೂಪಿಸಿದರು. ಮಹಾನಂದ ರಾಜಕುಮಾರ ವಂದಿಸಿದರು. ಕಾರ್ಯಕ್ರಮದಲ್ಲಿ ಪಾಲಕರು, ಶಿಕ್ಷಕರು, ವಿಧ್ಯಾರ್ಥಿಗಳು, ಗಣ್ಯರು, ಮಾತೆಯರು, ಮಕ್ಕಳು ಉಪಸ್ಥಿತರಿದ್ದರು.



ಬಸವಕಲ್ಯಾಣ :- ಇಲ್ಲಿನ ಥೇರ ಮೈದಾನದ ಸಭಾಭವನದ ಆವರಣದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವದ ನಿಮಿತ್ತವಾಗಿ ಮಾರಾಟ ಮಳಿಗೆಗಳಲ್ಲಿ ಕಾಯಕ ದೊಂದಿಗೆ ಮೇಕೆ ಉಣ್ಣೆಯಿಂದ ಟೋಪಿಗೆಗಳನ್ನು ಮಾಡುತ್ತಿರುವ ಹುಲಗುತ್ತಿ ಗ್ರಾಮದ ಕಾಶಪ್ಪ ಮೈಲಾರೆ ಯವರೂಂದಿಗೆ ನಮ್ಮ ಪ್ರತಿನಿಧಿಯೊಂದಿಗೆ ಮಾತನಾಡಿ ಈ ಉದ್ಯೋಗವು ನಮ್ಮ ತಾತ ಮುತ್ತಾತನಿಂದ ಬಂದಿದೆ ಎಂದ ಅವರು ಇಂಥಹ ಕೈ ಕಸಬುಗಳ ಉದ್ಯೋಗಕ್ಕೆ ಮಹತ್ವ ನೀಡಿದರೆ ನಮಂಹತವರಿಗೆ ಸಹಾಯ ಮಾಡಿದಂತೆ ಎಂದರು. ಈ ಸಂದರ್ಭದಲ್ಲಿ ಶಿವಪೂರ ಗ್ರಾಮದ ನಾಗನಾಥ ಮೇತ್ರೆ. ಹುಲೆಪ್ಪ ಭುರೆ ಕಿಟ್ಟಾ. ಪತ್ರಕರ್ತ ನಾಗಪ್ಪ ನಿಣ್ಣೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಾಡಿನ ಒಳತಿಗಾಗಿ

## ಪುಣ್ಯ ಕ್ಷೇತ್ರವಾದ ಪ್ರಯಾಗರಾಜ್‌ಕ್ಕೆ ಪ್ರಯಾಣ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಇಡಿ ಜಗತ್ತಿನಲ್ಲಿಯೇ ಅತಿದೊಡ್ಡ ಧಾರ್ಮಿಕ ಕಾರ್ಯಕ್ರಮ ಎಂಬ ಹೆಸರಿಗೆ ಖ್ಯಾತಿಯಾದ ತ್ರಿವೇಣಿ ಸಂಗಮಗಳ ಪುಣ್ಯ-ಕ್ಷೇತ್ರ, 144 ವರ್ಷಗಳಿಗೆ ಒಮ್ಮೆ ನಡೆಯುವ ಉತ್ತರ ಪ್ರದೇಶದ ಪುಣ್ಯಕ್ಷೇತ್ರದ ಪ್ರಯಾಗರಾಜನ ತ್ರಿವೇಣಿ ಸಂಗಮಕ್ಕೆ ಪಟ್ಟಣದ ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಅಶೋಕ ಸ್ವಾಮಿ ಅವರ ನೇತೃತ್ವದಲ್ಲಿ ವೆಂಕಟ ಪೂಜಾರಿ, ರಾಜಕುಮಾರ ಆರ್. ಹಡಪದ, ನರೇಂದ್ರರೆಡ್ಡಿ ರಾಂಪುರ, ಧರ್ಮರೆಡ್ಡಿ ಚಿಂಚೋಳಿ, ಶಕೀಲ್ ಅಲ್ಲೂರ್, ಜಗನಾಥ ಗೋಣಗಿ, ಸೂರ್ಯಕಾಂತ ಸಂಗೊಳ್ಳಗಿ ಇವರುಗಳು ಪ್ರಯಾಗರಾಜ್ ಪುಣ್ಯ ಕ್ಷೇತ್ರಕ್ಕೆ ತೆರಳಿ ಗಂಗಾ ಯಮುನಾ ಸರಸ್ವತಿ ಸಂಗಮದಲ್ಲಿ ತ್ರೀವೇಣಿ ಸಂಗಮದಲ್ಲಿ ಸ್ನಾನ ಮಾಡಿ ನಾಡಿನ ಒಳತಿಗಾಗಿ ವಿಶೇಷ ಪೂಜೆ ಸಲ್ಲಿಸಿ ದರ್ಶನ ಪಡೆಯಲಿದ್ದೇವೆ ಎಂದು ಹಿರಿಯ ಮುಖಂಡ ಅಶೋಕ ಸ್ವಾಮಿ ತಿಳಿಸಿದ್ದಾರೆ.

# ಬಸವಾದಿ ಶಿವಶರಣರು ಕಾಯಕಕ್ಕೆ ಮಹತ್ವ ನೀಡಿದರು.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ 17. ಇಲ್ಲಿನ ಥೇರ ಮೈದಾನದ ಸಭಾಭವನದ ಆವರಣದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವದ ನಿಮಿತ್ತವಾಗಿ ಎರಡನೇ ದಿವಸದ ಸಮಾರಂಭದಲ್ಲಿ ವೇದ ಮೂರ್ತಿ ಮಲ್ಲಯ್ಯ ಶಾಸ್ತ್ರಿ ಅವರಿಂದ ಪುರಾಣ ಪ್ರವಚನದಲಿ ಮಾತನಾಡಿ ಕಾಯಕವು ಸತ್ಯಶುದ್ಧವಾಗಿರ ಬೇಕು ಆದರೆ ಇತ್ತೀಚಿನ ದಿನಗಳಲ್ಲಿ ಕಾಯಕವು ಮೋಸ ವಂಚನೆಯಿಂದ ಕೂಡಿದೆ ಇದು ಕಾಯಕಕ್ಕೆ ಸೂಕ್ತವಿಲ ಎಂದರು. ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು. ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ. ನಿವೃತ್ತ ಜಿಲ್ಲಾ ಉಪ ಕಾರ್ಯನಿರ್ವಾಹಕ ಅಧಿಕಾರಿಗಳಾದ ಬಿ. ಕೆ. ಹಿರೇಮಠ. ವೀರಣ್ಣ ಎಸ್. ಶೀಲವಂತ. ಪಿ. ಎಸ್. ಐ. ಸುರೇಶ. ಸುರೇಶ ಸ್ವಾಮಿ. ಮಲ್ಲಿನಾಥ ಹಿರೇಮಠ ಹಾರಕೂಡ. ಅಪ್ಪಣ್ಣ ಜನವಾಡ. ಪ್ರೊ. ರುದ್ರೇಶ ಸ್ವಾಮಿ ಗೋರ್ಟಾ. ದೀಲಿಪ ಕುಮಾರ್ ಸ್ವಾಮಿ ರಾಜೇಶ್ವರ. ಶಿಕ್ಷಣ ಇಲಾಖೆಯ ಸಿ. ಆರ್ ಸಿ. ಗಳಾದ ಗಿರಿಧರ ಧಾನುರೆ. ನಾಸಿರ ಪಟೇಲ್. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ದಿನ ವಿಡಿ ವಿವಿಧ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಮುಖ್ಯಗುರುಗಳಾದ ರಮೇಶ ರಾಜೋಳೆ ಸಂಚಾಲನೆ ನಿರ್ವಹಿಸಿದರು.

# ಶ್ರೀ ಚೆನ್ನಬಸವ ಕಾಯಕ ರತ್ನ ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:-ಇಲ್ಲಿನ ಥೇರ ಮೈದಾನದ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವದ ಕಾರ್ಯಕ್ರಮದಲ್ಲಿ ಬಿದಿಕಲಾವಿದರಾದ ರಾಜಕುಮಾರ ನಾಗೇಶ್ವರ ಅವರಿಗೆ ಶ್ರೀ ಚೆನ್ನಬಸವ ಕಾಯಕ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ಈ ವೇಳೆ ಹಾರಕೂಡ ಸಂಸ್ಥಾನ ಹಿರೇಮಠದ ಪೀಠಾಧಿಪತಿಗಳಾದ ಪರಮಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು. ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿ. ಸಾಯಗಾಂವದ ಪೂಜ್ಯ ಶ್ರೀ ಶಿವಾನಂದ ದೇವರು. ಹರಳಯ್ಯಗವಿಯ ಪೂಜ್ಯ ಶ್ರೀ ಡಾ. ಗಂಗಾಂಬಿಕಾ ಅಕ್ಕ. ಬಸವರಾಜ ಪಾಟೀಲ ಸೇಡಂ. ಶಾಸಕರಾದ ಶರಣು ಸಲಗರ್. ಸಿದ್ರಾಮ್ ಗುದಗೆ. ಮೆಘರಾಜ ನಾಗರಾಳೆ. ಮಲ್ಲಿನಾಥ ಹಿರೇಮಠ. ಅಪ್ಪಣ್ಣ ಜನವಾಡಕರ್. ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



ಬಸವಕಲ್ಯಾಣ :- ಇಲ್ಲಿನ ಥೇರ ಮೈದಾನದ ಸಭಾಭವನದ ಆವರಣದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವದ ನಿಮಿತ್ತವಾಗಿ ಬಂದಂಹತ ಭಕ್ತಾದಿಗಳಿಗೆ ಉತ್ತಮ ರೀತಿಯಲ್ಲಿ ಧಾಸೊಹ ವ್ಯವಸ್ಥೆ ಮಾಡಿರುವ ಚಿತ್ರದಲ್ಲಿ ಕಾಣಬಹುದು. (ಮಲ್ಲಮ್ಮ ನುಡಿ ಚಿತ್ರ)

# ಸೇಡಂ ಸರಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಪ್ರವೇಶ ಅಭಿಯಾನ ಕಾರ್ಯಾಗಾರ.




ಮಲ್ಲಮ್ಮ ನುಡಿ ವಾರ್ತೆ

ಸೇಡಂ : ಫೆ. 17-. ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆದೇಶದಂತೆ ಸರಕಾರಿ ಪದವಿ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ಹೆಚ್ಚಿಸುವ ಉದ್ದೇಶದೊಂದಿಗೆ 2025-26ನೇ ಸಾಲಿನಲ್ಲಿ ಪ್ರವೇಶಾತಿ ಅಭಿಯಾನ ಮತ್ತು ಕಾರ್ಯಾಗಾರವನ್ನು

ದಿನಾಂಕ :11-02-2025 ರಿಂದ 14-02-2025 ರವರೆಗೆ ಕೈಗೊಳ್ಳಲಾಯಿತು. ಸೇಡಂ ನಗರದಲ್ಲಿರುವ ಸರಕಾರಿ ಪದವಿ ಪೂರ್ವ ಕಾಲೇಜು ಸೇಡಂ. ಗ್ರಾಮೀಣ ಪ್ರದೇಶದಲ್ಲಿರುವ ಸರಕಾರಿ ಪದವಿ ಪೂರ್ವ ಕಾಲೇಜು ರುದ್ನೂರು.ಸರಕಾರಿ ಪದವಿ ಪೂರ್ವ ಕಾಲೇಜು ಮುಧೋಳ.ಸರಕಾರಿ ಪದವಿ ಪೂರ್ವ ಕಾಲೇಜು ಮಳಖೇಡ . ಕಾಲೇಜುಗಳಿಗೆ ಭೇಟಿ ನೀಡಿ ದ್ವಿತೀಯ ವರ್ಷ ಪಿಯುಸಿ ಕಲಾ, ವಾಣಿಜ್ಯ, ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಗೆ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಲಭ್ಯವಿರುವ ಕೋರ್ಸ್ ಗಳು ಮತ್ತು ಅವುಗಳಿಂದ ದೊರಕುವ ಉದ್ಯೋಗಾವಕಾಶಗಳ ಬಗ್ಗೆ ಹಾಗೂ ಗುಣಮಟ್ಟದ ಕಲಿಕೆಗಾಗಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಲಭ್ಯವಿರುವ ಸೌಲಭ್ಯಗಳ ಬಗ್ಗೆ ತಿಳಿಸಿ ದಾಖಲಾತಿ ಪಡಿಯುವಂತೆ ಮನವರಿಕೆ ಮಾಡಿಕೊಡಲಾಯಿತು. ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಪಂಡಿತ ಬಿ. ಕೆ ಅವರು ತಿಳಿಸಿದರು.

ಪ್ರಸ್ತುತ ಕಾಲೇಜಿನ ಕಲಾ ವಿಭಾಗದ ಕೋರ್ಸ್ ಗಳಾದ ಬಿ.ಎ, ವಿಜ್ಞಾನ ವಿಭಾಗದ ಕೋರ್ಸ್ ಗಳಾದ ಬಿ.ಎಸ್.ಸಿ , ಬಿ.ಸಿ.ಎ ,ವಾಣಿಜ್ಯ ವಿಭಾಗದ ಕೋರ್ಸ್ ಗಳಾದ ಬಿಕಾಂ, ಬಿ.ಎಫ್ ಎಸ್ ಐ, ಇವುಗಳ ಕುರಿತು ಮಾಹಿತಿ ನೀಡಲು ಸಮಿತಿ ರಚನೆ ಮಾಡಲಾಯಿತು.ಈ ಅಭಿಯಾನದ ಸಮಿತಿ ಸಂಯೋಜಕರು ಹಾಗೂ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಮಲ್ಲಿಕಾರ್ಜು ಮುಗಳಿ. ಡಾ.ಶಾಕೇರಾ ತನ್ವೀರ್. ಡಾ.ಶಂಕರ ಬತ್ತಾಸಿ. ನೇತೃತ್ವ ವಹಿಸಿದ್ದರು. ಅಭಿಯಾನ ಸಮಿತಿ ಸದಸ್ಯರು ಹಾಗೂ ಕಾಲೇಜಿನ ಪ್ರಾದ್ಯಾಪಕರುಗಳಾದ ಡಾ. ಸಂತೋಷ್ ಸಿಂಗ ಬಯಾಸ್, ಶ್ರೀ ಉಮರಸಾಹೇಬ ಮಸಳಿ, ಡಾ.ಕೌಸರ್ ಫಾತಿಮಾ,ಶ್ರೀ ವಾಮನ ಗಾಜರೆ, ಶ್ರೀ ಮಾಹೇಬೂಬ ಪಾಷಾ, ಡಾ.ವಿನಯ ಕಣ್ಣೂರು , ಡಾ.ಚಂದ್ರಶೇಖರ ಚಿಕ್ಕೆಗೌಡ, ಡಾ.ಫರಹಾನ ಫರ್ವಿನ್,

ಡಾ.ಗಾಯತ್ರಿದೇವಿ ಎಮ್ ಕೆ,

ಡಾ. ನಿಲಕಮಲ,

ಶ್ರೀ ತ್ರಿವಿಕ್ರಮ, ಶ್ರೀ ಬಸವರಾಜ ಕೋನೆರಿ, ಡಾ.ವಿಲಾಸ ಸಾಳುಂಕೆ,

ಡಾ. ರಾಜೀವ ಮಠ,ಡಾ. ಸುಕನ್ಯಾ,ಶ್ರೀಮತಿ ಪ್ರೀತಿ, ಕುಮಾರಿ ಜಯಾನಂದ, ಹಾಗೂ ಅತಿಥಿ ಉಪನ್ಯಾಸಕರು ಈ ಅಭಿಯಾನದಲ್ಲಿ ಭಾಗವಹಿಸಿದ್ದರು.

## ಕ್ರೀಡಾ ವಿಜ್ಞಾನ ಮತ್ತು ತಳಮಟ್ಟದ ಅಭಿವೃದ್ಧಿಯಲ್ಲಿ ಪ್ರವರ್ತಕ ರಾಜ್ಯವಾದ ನಮ್ಮ ಕರ್ನಾಟಕ:

ಕ್ರೀಡಾಪಟುಗಳ ಅಭಿವೃದ್ಧಿ ಕಾರ್ಯಕ್ರಮಗಳಲ್ಲಿ ಕ್ರೀಡಾ ವಿಜ್ಞಾನವನ್ನು ಸಂಯೋಜಿಸಿದ ರಾಷ್ಟದ ಆರಂಭಿಕ ರಾಜ್ಯಗಳಲ್ಲಿ ನಮ್ಮ ಕರ್ನಾಟಕ ಒಂದಾಗಿದೆ. ಈ ಮೂಲಕ ಕರ್ನಾಟಕ ಕ್ರೀಡಾ ಅಭಿವೃದ್ಧಿಗೆ ಪ್ರಗತಿಪರ ವಿಧಾನವನ್ನು ನಿರಂತರವಾಗಿ ಪ್ರದರ್ಶಿಸಿದೆ. ಇಲಾಖೆಯ (ಡಿವೈಇಎಸ್) ನೇತೃತ್ವದ ರಾಜ್ಯದ ಪ್ರಯತ್ನಗಳು 2016ರಲ್ಲಿ ಪ್ರಾರಂಭವಾದವು. ಅಂದಿನಿಂದ ಕ್ರೀಡಾ ಗಾಯಾ ನಿರ್ವಹಣೆ, ಕಾರ್ಯಕ್ಷಮತೆ ವರ್ಧನೆ, ಪೋಷಣೆ ಮತ್ತು ಕ್ರೀಡಾ ಮನೋವಿಜ್ಞಾನದಂತಹ ವೈಜ್ಞಾನಿಕ ವಿಧಾನದ ವಿವಿಧ ಅಂಶಗಳನ್ನು ಅಳವಡಿಸಿಕೊಳ್ಳಲು ವಿಸ್ತರಿಸಿದೆ. ಈ ಪ್ರಯತ್ನಗಳ ಜೊತೆಗೆ ರಾಜ್ಯವು ತಳಮಟ್ಟದ ಕ್ರೀಡಾ ಪ್ರತಿಭೆಗಳನ್ನು ಗುರುತಿಸುವುದು ಮತ್ತು ಕ್ರೀಡಾ ಅಭಿವೃದ್ಧಿಗೆ ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಗಮನಾರ್ಹವಾಗಿ ಗಮನ ಹರಿಸಿದೆ.

# ಸೇಡಂ ಸರಕಾರಿ ಪ್ರಥಮ ದರ್ಜೆ ಕಾಲೇಜಿನಿಂದ ಪ್ರವೇಶ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಸೇಡಂ : ಫೆ. 17: ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಆದೇಶದಂತೆ ಸರಕಾರಿ ಪದವಿ ಕಾಲೇಜುಗಳಲ್ಲಿವಿದ್ಯಾರ್ಥಿಗಳ ದಾಖಲಾತಿ ಪ್ರಮಾಣ ಹೆಚ್ಚಿಸುವ ಉದ್ದೇಶದೊಂದಿಗೆ 2025–26 ನೇ ಸಾಲಿನಲ್ಲಿ ಪ್ರವೇಶಾತಿ ಅಭಿಯಾನ ಮತ್ತು ಕಾರ್ಯಾಗಾರವನ್ನು ದಿನಾಂಕ :11–02–2025 ರಿಂದ 14–02–2025 ರವರೆಗೆ ಕೈಗೊಳ್ಳಲಾಯಿತು. ಸೇಡಂ ನಗರದಲ್ಲಿರುವ ಸರಕಾರಿ ಪದವಿ ಪೂರ್ವ ಕಾಲೇಜು ಸೇಡಂ. ಗ್ರಾಮೀಣ ಪ್ರದೇಶದಲ್ಲಿರುವ ಸರಕಾರಿ ಪದವಿ ಪೂರ್ವ ಕಾಲೇಜು ರುದ್ನೂರು.ಸರಕಾರಿ ಪದವಿ ಪೂರ್ವ ಕಾಲೇಜು ಮುಧೋಳ.ಸರಕಾರಿ ಪದವಿ ಪೂರ್ವ ಕಾಲೇಜು ಮಳಖೇಡ .ಕಾಲೇಜುಗಳಿಗೆ ಭೇಟಿ ನೀಡಿ ದ್ವಿತೀಯ ವರ್ಷ ಪಿಯುಸಿ ಕಲಾ, ವಾಣಿಜ್ಯ, ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಗೆ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಲಭ್ಯವಿರುವ ಕೋರ್ಸ್ ಗಳು ಮತ್ತು ಅವುಗಳಿಂದ ದೊರಕುವ ಉದ್ಯೋಗಾವಕಾಶಗಳ ಬಗ್ಗೆ ಹಾಗೂ ಗುಣಮಟ್ಟದ ಕಲಿಕೆಗಾಗಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂ ನಲ್ಲಿ ಲಭ್ಯವಿರುವ ಸೌಲಭ್ಯಗಳ ಬಗ್ಗೆ ತಿಳಿಸಿ ದಾಖಲಾತಿ ಪಡಿಯುವಂತೆ ಮನವರಿಕೆ ಮಾಡಿಕೊಡಲಾಯಿತು. ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಪಂಡಿತ ಬಿ. ಕೆ ಅವರು ತಿಳಿಸಿದರು.ಪ್ರಸ್ತುತ ಕಾಲೇಜಿನ ಕಲಾ ವಿಭಾಗದ ಕೋರ್ಸ್ ಗಳಾದ ಬಿ.ಎ,ವಿಜ್ಞಾನ ವಿಭಾಗದ ಕೋರ್ಸ್ ಗಳಾದ ಬಿ.ಎಸ್.ಸಿ ,ಬಿ.ಸಿ.ಎ ,ವಾಣಿಜ್ಯ ವಿಭಾಗದ ಕೋರ್ಸ್ ಗಳಾದ ಬಿಕಾಂ, ಬಿ.ಎಫ್ ಎಸ್ ಐ, ಇವುಗಳ ಕುರಿತು ಮಾಹಿತಿ ನೀಡಲು ಸಮಿತಿ ರಚನೆ ಮಾಡಲಾಯಿತು.ಈ ಅಭಿಯಾನದ ಸಮಿತಿ ಸಂಯೋಜಕರು ಹಾಗೂ ಕಾಲೇಜಿನ ಪ್ರಾಧ್ಯಾಪಕರಾದ ಡಾ. ಮಲ್ಲಿಕಾರ್ಜುನ ಮುಗಳಿ. ಡಾ.ಶಾಕೇರಾ ತನ್ವೀರ್. ಡಾ.ಶಂಕರ ಬತ್ತಾಸಿ. ನೇತೃತ್ವ ವಹಿಸಿದ್ದರು.ಅಭಿಯಾನ ಸಮಿತಿ ಸದಸ್ಯರು ಹಾಗೂ ಕಾಲೇಜಿನ ಪ್ರಾಧ್ಯಾಪಕರುಗಳಾದ ಡಾ. ಸಂತೋಷ್ ಸಿಂಗ ಬಯಾಸ್, ಶ್ರೀ ಉಮರ ಸಾಹೇಬ ಮಸಳಿ, ಡಾ.ಕೌಸರ್ ಫಾತಿಮಾ,ಶ್ರೀ ವಾಮನ ಗಾಜರೆ, ಶ್ರೀ ಮಾಹೇಬೂಬ ಪಾಷಾ, ಡಾ.ವಿನಯ ಕಣ್ಣೂರು , ಡಾ.ಚಂದ್ರಶೇಖರ ಚಿಕ್ಕೆಗೌಡ, ಡಾ.ಫರಹಾನ ಫರ್ವಿನ್, ಡಾ.ಗಾಯತ್ರಿದೇವಿ ಎಮ್ ಕೆ, ಡಾ. ನಿಲಕಮಲ,ಶ್ರೀ ತ್ರಿವಿಕ್ರಮ, ಶ್ರೀ ಬಸವರಾಜ ಕೋನೆರಿ, ಡಾ.ವಿಲಾಸ ಸಾಳುಂಕೆ,ಡಾ. ರಾಜೀವ ಮಠ,ಡಾ. ಸುಕನ್ಯಾ, ಶ್ರೀಮತಿ ಪ್ರೀತಿ, ಕುಮಾರಿ ಜಯಾನಂದ, ಹಾಗೂ ಅತಿಥಿ ಉಪನ್ಯಾಸಕರು ಈ ಅಭಿಯಾನದಲ್ಲಿ ಭಾಗವಹಿಸಿದ್ದರು .

# ಮುಗಳೊಳ್ಳಿಯಲ್ಲಿ ಸರಸ್ವತಿ ಮೂರ್ತಿ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17–ತಾಲೂಕಿನ ಮುಗಳೊಳ್ಳಿಯ ಕರ್ನಾಟಕ ಪಬ್ಲಿಕ್ ಶಾಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಸೋಮವಾರ ಸರಸ್ವತಿದೇವಿ ಮೂರ್ತಿ ಪ್ರತಿಷ್ಠಾಪನೆ ಮಾಡಲಾಯಿತು.

ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಎಚ್.ಆರ್.ಹಡಪದ ಅವರು ತಯಾರಿಸಿ ಕೊಡುಗೆ–ಯಾಗಿ ಕೊಟ್ಟಿರುವ ಸರಸ್ವತಿ ದೇವಿಯ ಮೆರವಣಿಗೆ ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ವೈಭವದಿಂದ ಜರುಗಿತು.

ಸಕಲವಾದ್ಯಮೇಳಗಳೊಂದಿಗೆ ನಡೆದ ಮೆರವಣಿಗೆಯಲ್ಲಿ ಶಾಲೆಯ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ವಿಭಾಗದ 250 ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಪೂರ್ಣಕುಂಭ ಹಾಗೂ ಕಳಸಾರತಿಯೊಂದಿಗೆ ಪಾಲ್ಗೊಂಡಿದ್ದರು. ನಂತರ ಕಾಲೇಜಿನ ಆವರಣದಲ್ಲಿ ಶಿಲ್ಪಿ ಮೌನೇಶ ಬಡಿಗೇರ ಪೂಜಾ ಕೈಂಕರ್ಯಗಳನ್ನು ನೆರವೇರಿಸಿ ಸರಸ್ವತಿ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಿದರು.

ಗ್ರಾಮದ ಪ್ರಮುಖರಾದ ಎಚ್.ಆರ್.ಹಡಪದ, ಬಿ.ಎಸ್.ಭಜನ್ನವರ, ಸಿದ್ದಪ್ಪ ಸುನಗದ, ಕಾಳಪ್ಪ ತಳವಾರ, ರಂಗಪ್ಪ ಮೇಟಿ, ಶಮಸುದ್ದೀನ ಬೆನಕಟ್ಟಿ, ಬ್ರಹ್ಮಲಿಂಗ ತಳವಾರ, ಬಸಪ್ಪ ಕೇಸನೂರ, ರಂಗಪ್ಪ ಮೆಡ್ಲಿ, ಸುರೇಶ ಮಿಕ್ಕಲ್, ಕಾಲೇಜಿನ ಪ್ರಾಚಾರ್ಯ ಎಸ್. ಎಸ್.ಬಿರಾದಾರ, ಪ್ರೌಢಶಾಲಾ ಮುಖ್ಯೋಪಾಧ್ಯಾಯ ಸಿದ್ದು ಪಾಟೀಲ, ಪ್ರಾಥಮಿಕ ವಿಭಾಗದ ಮುಖ್ಯಗುರು ಸೋಮಸಿಂಗ್ ಲಮಾಣಿ ಹಾಗೂ ಶಿಕ್ಷಕ ಸಿಬ್ಬಂದಿ ಪಾಲ್ಗೊಂಡಿದ್ದರು.

# ಬಾಗಲಕೋಟೆ ಜಿಲ್ಲೆಯಲ್ಲಿ

## ಉದ್ಯಮಗಳ ಸ್ಥಾಪನೆಗೆ ಆದ್ಯತೆ ನೀಡಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17–ರಾಜ್ಯ ಸರ್ಕಾರ 'ಇನ್ವೆಸ್ಟ್ ಕರ್ನಾಟಕ' ಮೂಲಕ ಕೈಗಾರಿಕೆ ಸ್ಥಾಪಿಸಿ ಉದ್ಯೋಗಸೃಷ್ಠಿಗೆ ಮುಂದಾಗಿದ್ದು, ಮುಳುಗಡೆಯ ಬಾಗಲಕೋಟೆ–ವಿಜಯಪುರ ಜಿಲ್ಲೆಗಳಲ್ಲೂ ಬೃಹತ್ ಉದ್ಯಮಗಳನ್ನು ಸ್ಥಾಪಿಸಲು ವಿಶೇಷ ಆದ್ಯತೆ ನೀಡಬೇಕು ಎಂದು ಕಾಂಗ್ರೆಸ್ ಪಕ್ಷದ ಜಿಲ್ಲಾಧ್ಯಕ್ಷ ಎಸ್.ಜಿ.ನಂಜಯ್ಯನಮಠ ಹೇಳಿದ್ದಾರೆ.

ನಗರದಲ್ಲಿ ರವಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು,ಉತ್ತರ ಕರ್ನಾಟಕ ಭಾಗಕ್ಕೂ ಅದರಲ್ಲೂ ಬಾಗಲಕೋಟೆ–ವಿಜಯಪುರ ಜಿಲ್ಲೆಗಳಲ್ಲಿ ಔದ್ಯೋಗಿಕರಣದ ಹೊಸ ಯುವ ಆರಂಭವಾಗಬೇಕು. ಈ ಮೂಲಕ ಸಂತ್ರಸ್ಥರಿಗೆ ಉದ್ಯೋಗಾವಕಾಶಗಳು ದೊರೆಯಬೇಕು ಎಂದರು.

ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲರು ಹಿಂದೆ ನೀರಾವರಿ ಸಚಿವರಾಗಿ ಈ ಭಾಗಕ್ಕೆ ಉತ್ತಮ ಕೆಲಸ ಮಾಡಿದ್ದು, ಈಗ ಕೈಗಾರಿಕೆ ಸಚಿವರಾಗಿರುವ ಹಿನ್ನೆಲೆಯಲ್ಲಿ ಅವಳಿ ಜಿಲ್ಲೆಗಳಲ್ಲಿ ಉದ್ಯಮ ಸ್ಥಾಪಿಸಲು ಆದ್ಯತೆ ನೀಡಬೇಕು. ಉದ್ದಿಮೆದಾರರು ಉತ್ತರ ಕರ್ನಾಟಕದತ್ತ ಬಂದು ಉದ್ಯಮಗಳನ್ನು ಸ್ಥಾಪಿಸುವುದಕ್ಕೆ ಅವರಿಗೆ ಸರ್ಕಾರ ಕೆಲ ರಿಯಾಯತಿ ನೀಡಿ ಆಕರ್ಷಿಸುವ ನಿಟ್ಟಿನಲ್ಲಿ ಹೆಚ್ಚಿನ ಪ್ರಯತ್ನ ಮಾಡಬೇಕು. ಪಾಟೀಲರು ಗಟ್ಟಿ ಹೆಜ್ಜೆಯನ್ನು ಇಟ್ಟು ಈ ಭಾಗದಲ್ಲೂ ಕೈಗಾರಿಕೆಗಳ ಯುಗವನ್ನು ಆರಂಭಿಸಬೇಕು ಎಂದು ನಂಜಯ್ಯನಮಠ ಹೇಳಿದರು.

ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ 11 ಲಕ್ಷ ಕೋಟಿ ರೂ. ಬಂಡವಾಳ ಹೂಡಿಕೆ ಆಗಿದೆ. ಬಾಗಲಕೋಟೆ–ವಿಜಯಪುರ ಭಾಗದಲ್ಲಿ ಸಾಕಷ್ಟು ಬರಡು ಭೂಮಿ ಇದ್ದು ಕೈಗಾರಿಕೆ ಸ್ಥಾಪನೆಗೆ ಜಾಗೆಯ ಕೊರತೆಯೂ ಆಗುವುದಿಲ್ಲ. ಹೀಗಾಗಿ ಕೋಲ್ಡ್ ಸ್ಟೋರೇಜ್ ಘಟಕ ಸೇರಿ ಸಣ್ಣ ಹಾಗೂ ದೊಡ್ಡ ಉದ್ಯಮಗಳು ಈ ಭಾಗದಲ್ಲಿ ಬಂದರೆ ಸಂತ್ರಸ್ಥರ ಬದುಕು ಹಸನಾಗುತ್ತದೆ. ಇದನ್ನು ಸಚಿವ ಪಾಟೀಲರು ಅರಿತು ಸಂತ್ರಸ್ಥರ ಬದುಕಿಗೆ ಬೆಳಕಾಗಬೇಕು ಎಂದರು.

ಸರ್ಕಾರ ಈ ಬಾರಿಯ ಬಜೆಟ್ನಲ್ಲಿ ಯುಕೆಪಿ ಯೋಜನೆಗೆ ಸೂಕ್ತ ಅನುದಾನ ಒದಗಿಸಬೇಕು. ಈ ಹಿಂದೆ ಬಜೆಟ್ನಲ್ಲಿ ಘೋಷಣೆ ಮಾಡಿರುವ ಸರ್ಕಾರಿ ಮೆಡಿಕಲ್ ಕಾಲೇಜು ಸ್ಥಾಪನೆಗೂ ಮುಂದಾಗಬೇಕು. ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಪೂರಕವಾದ ಯೋಜನೆಗಳು ಅನುಷ್ಠಾನಕ್ಕೆ ಬರಬೇಕು. ಜನತೆಗೆ ಕೊಟ್ಟ ಮಾತು ಉಳಿಸಿಕೊಳ್ಳುವಲ್ಲಿ ಬಜೆಟ್ನಲ್ಲಿ ಘೋಷಿಸಿದ ಅಂಶಗಳು ಜಾರಿಯಾಗಬೇಕು ಎಂದ ನಂಜಯ್ಯನಮಠ, ಈ ನಿಟ್ಟಿನಲ್ಲಿ ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಾಗುವುದು ಎಂದು ತಿಳಿಸಿದರು.

ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಅಧ್ಯಕ್ಷ ನಾಗರಾಜ ಹದ್ಲಿ,ಮುಖಂಡರಾದ ಶ್ರೀನಿವಾಸ ಬಳ್ಳಾರಿ, ರಾಜು ಮನ್ನಿಕೇರಿ ಇದ್ದರು.

# ವೆಂಕಮ್ಮ ಯಡಹಳ್ಳಿ ನಿಧನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ:ಫೆ.17:ಮೂಲತ: ಬೆನಕಟ್ಟಿ ಗ್ರಾಮದವರಾದ ಬಾಗಲಕೋಟೆ ನವನಗರದ 50ನೇ ಸೆಕ್ಟರ್ ನಿವಾಸಿ ವೆಂಕಮ್ಮ ಕೃಷ್ಣಪ್ಪ ಯಡಹಳ್ಳಿ (90) ಸೋಮವಾರ ಬೆಳಿಗ್ಗೆ ನಿಧನರಾದರು.

ಮೃತರಿಗೆ ಹಿರಿಯ ನ್ಯಾಯವಾದಿ ಎಸ್.ಕೆ.ಯಡಹಳ್ಳಿ ಸೇರಿ ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಮೃತರ ಅಂತ್ಯಕ್ರಿಯೆ ಬಾಗಲಕೋಟೆಯ ನವನಗರದ ರುದ್ರಭೂಮಿಯಲ್ಲಿ ಮಧ್ಯಾಹ್ನ ಜರುಗಿತು.

# ಜಿಲ್ಲಾ ಮಟ್ಟದ ರನ್ನ ರಥಯಾತ್ರೆಗೆ ಸಚಿವ ತಿಮ್ಮಾಪೂರ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17–ಮುಧೋಳದಲ್ಲಿ ಮೂರು ದಿನಗಳ ಕಾಲ ನಡೆಯಲಿರುವ ರನ್ನವೈಭವ–2025ರ ಕಾರ್ಯಕ್ರಮದ ಹಿನ್ನೆಲೆಯಲ್ಲಿ ನಗರದಲ್ಲಿ ಸೋಮವಾರ ನಡೆದ ಜಿಲ್ಲಾ ಮಟ್ಟದ ರನ್ನ ರಥಯಾತ್ರೆಗೆ ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಮುಖ್ಯ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ರಥಯಾತ್ರೆಗೆ ಪೂಜೆ ಸಲ್ಲಿಸಿ, ಚಾಲನೆ ನೀಡಿ ಮಾತನಾಡಿದ ಸಚಿವರು, ಕವಿ ಚಕ್ರವರ್ತಿ ರನ್ನನ ಗತವೈಭವ ಸಾರುವ ನಿಟ್ಟಿನಲ್ಲಿ ರಥಯಾತ್ರೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ತಾಲೂಕಾ ಮಟ್ಟದ ರಥಯಾತೆ–್ರಗೆ ಈಗಾಗಲೇ ಚಾಲನೆ ನೀಡಲಾಗಿದೆ. ರಾಜ್ಯ ಮಟ್ಟದ ರಥಯಾತ್ರೆಗೆ ಫೆಬ್ರವರಿ 19 ರಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆಂದು ತಿಳಿಸಿದರು.

ರನ್ನಕವಿಯ ಭಾವಚಿತ್ರ ಹೊತ್ತ ರಥ ನಗರದ ನಾನಾ ಕಡೆ ಸಂಚರಿಸಿತು. ವಿವಿಧ ಜಾನಪ ಕಲಾತಂಡಗಳು ಪಾಲ್ಗೊಂಡಿದ್ದವು.ಕಾರ್ಯಕ್ರಮದಲ್ಲಿ ಬಾಗಲಕೋಟೆ ಶಾಸಕ ಎಚ್.ವಾಯ್.ಮೇಟಿ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕು–ರೇರ, ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ, ಉಪ ಕಾರ್ಯದರ್ಶಿ ಎನ್. ವಾಯ್.ಬಸರಿಗಿಡದ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಹಾಗೂ ರನ್ನನ ಅಭಿಮಾನಿಗಳು ಪಾಲ್ಗೊಂಡಿದ್ದರು.

ರನ್ನರಥಯಾತ್ರೆ ಸೋಮವಾರ ಬಾಗಲಕೋಟೆ,ಬೇವಿನಮಟ್ಟಿ, ಶಿರೂರ, ಕಮತಗಿಯಲ್ಲಿ ಸಂಚರಿಸಿದರೆ, 18 ರಂದು ಅಮೀನಗಡ, ಸೂಳೇಭಾವಿ, ಗುಡೂರ, ಪಟ್ಟದಕಲ್ಲ, ನಂದಿಕೇಶ್ವರ, ರಾಘಾಪೂರ, ಗುಳೇದಗುಡ್ಡ, 19 ರಂದು ಬಾದಾಮಿ, ಹಲಕುರ್ಕಿ ಕ್ರಾಸ್, ಕೆರೂರ, ಗದ್ದನಕೇರಿ, ಬೀಳಗಿ, 20 ರಂದು ಬೀಳಗಿ, ಸಿದ್ದಾಪೂರ, ತೆಗ್ಗಿ, ಯಡಹಳ್ಳಿ, ಅಮಲಝರಿ, ಕೊಣ್ಣೂರ, ಹುಲ್ಯಾಳ. 21 ರಂದು ಜಮಖಂಡಿ ಯಲ್ಲಟ್ಟಿ, ರಬಕವಿ–ಬನಹಟ್ಟಿ,ಹನಗಂಡಿ, ತೇರದಾಳ, ಗೊಲಭಾವಿ, ಚಿಮ್ಮಡ, ಮಹಾಲಿಂಗಪೂರ, ರನ್ನ ಬೆಳಗಲಿ ಹಾಗೂ ಮುಧೋಳದಲ್ಲಿ ಸಂಚರಿಸಲಿದೆ.

# ಸರ್ಕಾರದ ಯೋಜನೆಗಳು ಮಕ್ಕಳಿಗೆ ದೊರೆಯಲಿ:ಬಿಇಓ ಬಡದಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17–ಶಾಲಾ ಎಸ್ ಡಿಎಂಸಿಯ ಸಹಕಾರದೊಂದಿಗೆ ಸರ್ಕಾರದ ಎಲ್ಲ ಯೋಜನೆಗಳನ್ನು ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ತಲುಪಿಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ ಎಂದು ಬಾಗಲಕೋಟೆ ಬಿಇಓ ಎಂ.ಎಸ್.ಬಡದಾನಿ ಹೇಳಿದರು.

ಸ್ಥಳೀಯ ಸೀತಿಮನಿ(ಆರ್. ಎಸ್) ಕೆಬಿಎಚ್ ಪಿಎಸ್ ಶಾಲೆಯಲ್ಲಿ ಜರುಗಿದ ರಾಂಪುರ ವಲಯ ಕ್ಲಸ್ಟರ ವ್ಯಾಪ್ತಿಯ ಶಾಲೆಗಳ ಶಿಕ್ಷಕರ ಗುರುಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ಮಕ್ಕಳ ಕಲಿಕೆಯ ಕಾಳಜಿಯ ಜೊತೆ ಇಲಾಖೆ ತಮಗೆ ವಹಿಸಿರುವ ಜವಾಬ್ದಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ಹೇಳಿದ ಬಡದಾನಿ, ತಾಲೂಕಿನಲ್ಲಿ ವಲಯವಾರು ಪ್ರತಿ ಶನಿವಾರದಂದು ಗುರುಸ್ಪಂದನ ಕಾರ್ಯಕ್ರಮ ಏರ್ಪಡಿಸಿ ಶಿಕ್ಷಕರಿಗೆ ದೊರಕಬೇಕಾದ ಸೌಲಭ್ಯಗಳನ್ನು ಒದಗಿಸುವುದಲ್ಲದೇ, ಬಾಕಿ ಇರುವ ಕಾರ್ಯಗಳನ್ನು ಪೂರ್ಣಗೊಳಿಸಲಾಗುವುದು. ಇದಕ್ಕೆ ಸಂಘಟನೆಗಳ ಸಹಕಾರವೂ ಬೇಕು ಎಂದು ಹೇಳಿದರು.

ರಾಂಪುರ ಕ್ಲಸ್ಟರ ವ್ಯಾಪ್ತಿಯ ಬೇವೂರು,ರಾಂಪುರ,ಗುಳಬಾಳ, ಸುತಗುಂಡಾರ ಹಾಗೂ ನಾಯನೇಗಲಿ ವ್ಯಾಪ್ತಿಯ 165 ಜನ ಶಿಕ್ಷಕರ ಸೇವಾ ಪುಸ್ತಕಗಳನ್ನು ನೀಡಿ ಬಾಕಿ ಉಳಿದ ಕಾರ್ಯಗಳನ್ನು ಪೂರ್ಣಗೊಳಿಸಲಾಯಿತು.

ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಬಿ.ಬಳ್ಳಾರಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದು, ಅಧ್ಯಕ್ಷತೆಯನ್ನು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ವಾಯ್.ಡಿ.ಕಿರಸೂರ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶಿಕ್ಷಕರ ವಿವಿಧ ಸಂಘಟನೆಗಳ ಪ್ರಮುಖರಾದ ಲಕ್ಷ್ಮಣ ಯಂಕಂಚಿ, ಸಂಜೀವ ಸತರಡ್ಡಿ, ಎಂ.ಎ.ಸೌದಾಗರ, ಗೋಪಾಲ ನೀಲನಾಯಕ, ಬಿ.ಟಿ.ಕೋವಳ್ಳಿ, ಪಾಂಡುರಂಗ ಸನ್ನಪ್ಪನವರ, ಎಚ್.ಬಿ.ಹಾಲಿಗೇರಿ, ಎಚ್.ಟಿ.ಕೊಡ್ಡಣ್ಣವರ, ಶಿಕ್ಷಣ ಇಲಾಖೆಯ ಎಚ್.ಕೆ.ಗುಡೂರ, ಆರ್.ಆರ್.ಪಾಟೀಲ, ಎಸ್. ಎಸ್.ಬೆಣ್ಣೂರ, ಹಸ್ಮತಬಿ, ಹೂಗಾರ ಹಾಗೂ ಕಚೇರಿ ಸಿಬ್ಬಂದಿ ಎಸ್.ವಾಯ್.ಕೊಳಚಿ, ಬಿ.ಎ.ಸವಣೂರ, ದೊಡಮನಿ, ಘಂಟಿ ಅತಿಥಿಗಳಾಗಿದ್ದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕರಾದ ಆರ್.ಎಚ್. ಏಳಬಣವಿ, ಎಸ್.ಎಂ.ಕಾವಳ್ಳಿ, ಎಸ್.ಎಸ್.ಹಳ್ಳದ, ವಾಯ್. ಎಂ.ಮಂಗಳಗೌರಿ ಅವರನ್ನು ಸತ್ಕರಿಸಲಾಯಿತು. ರಾಂಪುರ ವಲಯದ ಸಂಘಟನೆಗಳ ಪದಾಧಿಕಾರಿಗಳಾದ ವಿ.ಎಚ್. ಕುಲಕರ್ಣಿ, ಎ.ಜಿ.ಕೋತಿನ, ಬಿ.ಆರ್.ಶೆಟ್ಟಿ, ಎಸ್.ಎಸ್. ಮಜ್ಜಗಿ, ಮಲ್ಲಿಕಾರ್ಜುನ ಎಂ.ಬಿ., ಬಿ.ಜಿ.ಶಿರೂರ, ಎಂ.ಎಂ.ಹಣಗಿ, ಎಂ.ಬಿ.ನುಗ್ಲಿ, ಸುನೀಲ ಪಾಟೀಲ, ಅಶೋಕ ದೊಡಮನಿ, ಪಿ.ಡಿ.ಉದಗಟ್ಟಿ, ಎಚ್.ಎನ್.ಬಿರಾದಾರ, ಎಸ್.ಎಸ್. ಚಲುಮಿ, ಎಂ.ಎ.ಹೊನ್ನುಟಗಿ ಪಾಲ್ಗೊಂಡಿದ್ದರು.

# ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸಿ: ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಫೆ.17:ಪ್ರತಿಭಾನ್ವಿತ ಮಕ್ಕಳನ್ನು ಪ್ರೋತ್ಸಾಹಿಸಿ ಅವರನ್ನು ಮುಖ್ಯ ವಾಹಿನಿಗೆ ತರುವ ಕಾರ್ಯವಾಗಬೇಕು ಎಂದು ಸಂಸದ ಸಾಗರ ಖಂಡ್ರೆ ಅಭಿಪ್ರಾಯಪಟ್ಟರು.

ಪಟ್ಟಣದ ಸತ್ಯಸಾಯಿ ಪಬ್ಲಿಕ್ ಶಾಲೆಯಲ್ಲಿ ಆಯೋಜಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣದಿಂದಲೇ ಎಲ್ಲವೂ ಸಾಧ್ಯ, ಹೀಗಾಗಿ ಶಾಲಾ ಪರಿಸರದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ, ಅವರನ್ನು ಪ್ರೋತ್ಸಾಹಿಸಿ ಮುಖ್ಯ ವಾಹಿನಿಗೆ ತರುವ ಕಾರ್ಯ ಶಿಕ್ಷಕರದ್ದಾಗಿರುತ್ತದೆ. ಹೀಗಾಗಿ ಶಿಕ್ಷಕರು ಮಕ್ಕಳ ಪ್ರತಿಭೆಯನ್ನು ಗುರುತಿಸಿ ಅವರನ್ನು ಪ್ರೋತ್ಸಾಹಿಸಬೇಕು. ಈ ಭಾಗದ ವಿದ್ಯಾರ್ಥಿಗಳು ತುಂಬಾ ಪ್ರತಿಭಾವಂತರು, ಅವರಿಗೆ ಉತ್ತಮ ಮಾರ್ಗದರ್ಶನದ ಅವಶ್ಯಕತೆ ಇದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಉತ್ತಮ ಮಾರ್ಗದರ್ಶನ ಮಾಡಿ, ಅವರಲ್ಲಿ ಯಶಸ್ಸು ಕಂಡು ಕೊಳ್ಳುವ ಕಾರ್ಯವಾಗಬೇಕು ಎಂದು ಹೇಳಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ಮಾತನಾಡಿ, ಶಿಕ್ಷಕರು ನಿರಂತರ ಅಭ್ಯಾಸ ಮಾಡಬೇಕು. ಮಕ್ಕಳ ಮನಸ್ಸನ್ನು ಅರಿತು ಪಾಠ ಮಾಡಬೇಕು. ಎಸ್ಎಸ್ಎಲ್ಸಿ ವಿದ್ಯಾರ್ಥಿಗಳು ಪರೀಕ್ಷೆಯನ್ನು ಹಬ್ಬದಂತೆ ಸಂಭ್ರಮಿಸಬೇಕು. ಉತ್ತಮ ರೀತಿಯಿಂದ ಅಭ್ಯಾಸ ಮಾಡಿ ಪರೀ–ಕ್ಷೆ ಎದುರಿಸಿ ಎಂದು ಸಲಹೆ ನೀಡಿದರು. ಡಿವಾಯ್ಎಸ್ಪಿ ಶಿವಾನಂದ ಪವಾಡಶೆಟ್ಟಿ ಮಾತನಾಡಿ, ಸತ್ಯಸಾಯಿ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ಪ್ರತಿವರ್ಷ ಉತ್ತಮ ಅಂಕ ಗಳಿಸಿ ಮುನ್ನಡೆಯುತ್ತಿರುವುದು ಪ್ರಶಂಶನೀಯ ಕಾರ್ಯವಾಗಿದೆ. ಈ ಭಾಗದ ಫಲಿತಾಂಶ ಹೆಚ್ಚಿಸುವಲ್ಲಿ ಇಲ್ಲಿಯ ವಿದ್ಯಾರ್ಥಿಗಳ ಮತ್ತು ಶಿಕ್ಷಕರ ಶ್ರಮ ಅಡಗಿದೆ ಎಂದು ಹೇಳಿದರು.

ಸತ್ಯಸಾಯಿ ಪಬ್ಲಿಕ್ ಶಾಲೆಯ ಅಧ್ಯಕ್ಷ ಚಂದ್ರಶೇಖರ ಎಮ್ಮೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರಾಂಶುಪಾಲೆ ನಿರ್ಮಲಾ ತಿವಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜ್ಯೋತಿ ಎಮ್ಮೆ ಶಿಕ್ಷಣ ಸಂಸ್ಥೆಯ ಬಗ್ಗೆ ವಿವರಣೆ ನೀಡಿದರು. ಕಾರ್ಯಕ್ರಮದಲ್ಲಿ ಡಾ. ಮಲ್ಲಿಕಾರ್ಜುನ ಎಮ್ಮೆ, ಇಸಿಓ ಮಲ್ಲಿಕಾರ್ಜುನ ಕನ್ನಾಳೆ, ಸಹದೇವ ಗೌಡಗಾವೆ, ಸಿಆರ್ಪಿ ಅಂಬರೀಶ ಖಂಡ್ರೆ, ರಾಜಗುರು ಮಹಾಗಾವೆ ಉಪಸ್ಥಿತರಿದ್ದರು.

# ಸಂತ ಸೇವಾಲಾಲರು ಶ್ರಮ ಸಮುದಾಯದ ಬೆಳಕು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.17–ಚಾರಿತ್ರಿಕ ಯುಗಪುರುಷ ಸಂತ ಸೇವಾಲಾಲರು ಶ್ರಮ ಸಮುದಾಯದ ಬೆಳಕಾಗಿದ್ದಾರೆ ಎಂದು ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಹೇಳಿದ್ದಾರೆ.

ಕಾಲೇಜಿನ ಆವರಣದಲ್ಲಿ ಶನಿವಾರ ನಡೆದ ಸಂತ ಸೇವಾಲಾಲರ 286 ನೇ ಜಯಂತಿ ಕಾರ್ಯಕ್ರಮದಲ್ಲಿ ಸೇವಾಲಾಲರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿ, ಶ್ರಮ ಸಮುದಾಯದ ಶ್ರಮಿಕ ಕುಟುಂಬದಲ್ಲಿ ಹುಟ್ಟಿದ ಸಂತ ಸೇವಾಲಾಲರು ಸಮಾಜಕ್ಕೆ ಅಪಾರ ಕೊಡುಗೆ ನೀಡಿದ್ದಾರೆ ಎಂದರು.

ಬಂಜಾರ ಸಮುದಾಯದಲ್ಲಿ ಹುಟ್ಟಿದ ಸೇವಾಲಾಲರು ಸಾಂಸ್ಕೃತಿಕ, ಚಾರಿತ್ರಿಕ ಪುರುಷರೆನಿಸಿಕೊಂಡು ಸಮುದಾಯದ ಆರಾಧ್ಯ ದೈವರಾಗಿದ್ದಾರೆ. ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಬೋಧಕ, ಬೋಧಕೇತರ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಫೆಬ್ರವರಿ 19 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.17–ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆಗ್ರಾಮೀಣ ವಿಭಾಗ–1ರ ವತಿಯಿಂದ 110/33/11 ಕೆವ್ಹಿ ಆಳಂದ, ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೋಗುವ 33 ಕೆ.ವಿ ಈ ಕೆಳಕಂಡ 11ಕೆ.ವಿ ಫೀಡರ್ ವ್ಯಾಪ್ತಿಯ ಎಲ್ಲಾ ಗ್ರಾಮಗಳು ಮತ್ತು ಇತರೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ನಿರ್ವಹಣಾಕಾರ್ಯಕೈಗೊಂಡಿರುವ ಪ್ರಯುಕ್ತ ಇದೇ ಫೆಬ್ರವರಿ 19 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಈ ಉಪ–ವಿತರಣಾ ಕೇಂದ್ರಗಳ ಮೇಲೆ ಬರುವ ಎಲ್ಲಾ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

110/11 ಕೆವಿ ಆಳಂದ ವಿದ್ಯುತ್ ವಿತರಣಾ ಕೇಂದ್ರ: ಎಫ್–1 ಆಳಂದ ಟೌನ್, ಎಫ್–2 ಆಳಂದ (ವಾಟರ್ ಸಪ್ಲೈ), ಎಫ್–3 ಭೂಸನೂರ (ಐಪಿ ಸೆಟ್), ಎಫ್–4 ಹನುಮಾನ ಟೆಂಪಲ್. ಎಫ್–5 ಕಿಣ್ಣಿಸುಲ್ತಾನ (ಎನ್‌ಜೆವೈ), ಎಫ್–6 ಖಾನಾಪೂರ (ಐಪಿ ಸೆಟ್), ಎಫ್–7 ಹೆಬಳಿ (ಐಪಿ ಸೆಟ್), ಎಫ್–8–ತೆಲೆಕೋಣಿ (ಐಪಿ ಸೆಟ್) ಹಾಗೂ ಎಫ್–9 ರಮೇಶ ತಾಂಡಾ (ಐಪಿ ಸೆಟ್) ಫೀಡರಗಳ ಮೇಲೆ ಬರುವ ಗ್ರಾಮಗಳಾದಹೆಬಳಿ,ಮೋರಿಸಾಬ ತಾಂಡಾ,ಗುಳ್ಳೊಳಿ,ಗುಳ್ಳೊಳಿ ತಾಂಡಾ, ಜಿರೊಳ್ಳಿ, ಜಿರೊಳ್ಳಿ ತಾಂಡಾ, ಸಂಗೋಳಿ(ಜೆ), ಹೆಬಳಿ ತಾಂಡಾ, ಮಟಕಿ ತಾಂಡಾ, ತೀರ್ಥ ತಾಂಡಾ, ಅಪ್ಪತಾ ತಾಂಡಾ,ಪಿಎನ್‌ತಾಂಡಾ ಐಪಿ, ಪಾರ್ದಿ ತಾಂಡಾ, ಸೀಡಪಾರ್ಮ ತಾಂಡಾ , ಹನುಮಾನಗರ ತಾಂಡಾ, ತೆಲಕೋಣಿ, ಕಿಣ್ಣಿಸುಲ್ತಾನ, ಸಾಲೆಗಾಂವ, ಚಿತಲಿ.

33/11 ಕೆ.ವಿ.ತಡಕಲ ವಿದ್ಯುತ್ ವಿತರಣಾ ಕೇಂದ್ರ: ಎಫ್–1 ಮುನ್ನೋಳ್ಳಿ,ಎಫ್–2 ತಡಕಲ ಐಪಿ, ಎಫ್–3 ದೇಗಾಂವ ಎನ್‌ಜೆವೈ,ಎಫ್–4 ಕಣಮಸ್ ಐಪಿ, ಎಫ್–5 ಬೆಳಮಗಿ ಐಪಿ ಹಾಗೂ ಎಫ್–6 ನಸೀರವಾಡಿ ಎನ್‌ಜೆವೈ.

33/11 ಕೆ.ವಿ ಖಜೂರಿ ವಿದ್ಯುತ್ ವಿತರಣಾ ಕೇಂದ್ರ: ಎಫ್–1 ಜವಳಗಾ ಎನ್‌ಜೆವೈ, ಎಫ್–2 ತಡೋಳಾ ಎಫ್–3 ಸೀರೂರ ಎಫ್–4 ಹೂದಲೂರ, ಎಫ್–5 ರುದ್ರವಾಡಿ, ಎಫ್–6 ಖಜೂರಿ ಹಾಗೂ ಎಫ್–7ಕೊತ್ತನ ಹಿಪ್ಪರಗಾ.

33/11 ಕೆ.ವಿ ಸರಸಂಬಾ ವಿದ್ಯುತ್ ವಿತರಣಾ ಕೇಂದ್ರ: ಎಫ್–1ಸಾವಳೇಶ್ವರ ಐಪಿ, ಎಫ್–2ಅಂಬೇವಾಡ ಎನ್‌ಜೆವೈ, ಎಫ್–4ಕಾಮನಳ್ಳಿ ಎನ್‌ಜೆವೈ, ಎಫ್–1 ನಿರಗುಡಿ ಎನ್‌ಜೆವೈ, ಎಫ್–3 ಹಿರೋಳ್ಳಿ ಐಪಿ. ಎಫ್–5ಸರಸಂಬಾ ಐಪಿ ಹಾಗೂ ಎಫ್–6 ಚಿಂಚೋಳಿ ಐಪಿ.

33/11 ಕೆ.ವಿ.ಜಿಡಗಾ ವಿದ್ಯುತ್ ವಿತರಣಾ ಕೇಂದ್ರ: ಎಫ್–4 ಜಿಡಗಾ (ಐಪಿ ಸೆಟ್) ಜಮಗಾ(ಜೆ), ಜಿಡಗಾ, ಮೋಘಾ(ಬಿ).ಮೋಘಾ(ಕೆ), ಈಕ್ಕಳಕಿ ಹಾಗೂ ಅಲ್ಲಾಪೂರ.

## ನಗರಸಭೆ ವ್ಯಾಪ್ತಿಯಲ್ಲಿ ಬರುವ ಯೋಜನೆಗಳಿಗೆ ಕ್ಯಾರೆ ಎನ್ನದ ಅಧಿಕಾರಿಗಳು ಎಚ್ಚೆತ್ತುಕೊಂಡು ಸೂಕ್ತ ಕ್ರಮ ಕೈಗೊಳ್ಳಿ ಪ್ರದೀಪ ಅಣಬಿ ಎಚ್ಚರಿಕೆ.




ನಗರಸಭೆ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಯಲ್ಲಿ ಡಿವೆಟರ್ ಕಾಮಗಾರಿಯನ್ನು ಆಮೆಗತೆಯಲ್ಲಿ ಸಾಗುತ್ತಿದ್ದು. ಅದಕ್ಕೆ ಬಳಸುವ ಮರಳು ಹಾಗೂ ಸಿಮೆಂಟ್ರಾ ಬಳಕೆಯಾಗುತ್ತಿಲ್ಲ. ಹೆದ್ದಾರಿಯಲ್ಲಿ ಕೆಲವು ನಿಯಮಗಳನ್ನು ಪಾದಾಚಾರಿಗಳಿಗೆ ಹಾಗೂ ಸಂಚಾರಿ ವಾಹನಗಳಿಗೆ ತೆ–ಊಂದರೆಯಾಗದಂತೆ ಸರ್ಕಾರದ ನಿಯಮಗಳನ್ನು ಪಾಲನೆ ಮಾಡದೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಜೊತೆ ಸೇರಿ ಸಾರ್ವಜನಿಕರೇ ಜೊತೆ ಚೆಲ್ಲಾಟವಾಡುತ್ತಿದ್ದಾರೆ ಕೂಡಲೇ ಇಂಥ ನತದೃಷ್ಟ ಅಧಿಕಾರಿಗಳು ವಿರುದ್ಧ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸುತ್ತೇವೆ.

ನಿದ್ದೆಯಿಂದ ಎಚ್ಚೆತ್ತುಕೊಂಡು ರಾಜ್ಯ ಹೆದ್ದಾರಿಯಲ್ಲಿ ನಡೆಯುವ ಕಾಮಗಾರಿಗಳನ್ನು ಕೆಲವು ನಿಯಮಗಳನ್ನು ಪಾಲಿಸಿ ರಸ್ತೆ ಮೇಲೆ ಓಡಾಡುತ್ತಿರುವ ಬೈಕ್ ಸವಾರರು ಅಂಗೈಯಲ್ಲಿ ಜೀವ ಹಿಡಿದುಕೊಂಡು ಹೋಗುವ ಪರಿಸ್ಥಿತಿ ಎದುರಾಗಿದೆ. ವಿಪರಿತ ಧೂಳಿನಿಂದ ಬೈಕ್ ಸವಾರರು ಕಣ್ಣಿಗೆ ಹಾಗೂ ಮೂಗಿಗೆ ಬಟ್ಟೆ ಕಟ್ಟಿಕೊಂಡು ತಿರುಗಾಡುವ ಪರಿಸ್ಥಿತಿ ಎದುರಾಗಿದೆ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವಂತೆ ಪ್ರದೀಪ್ ಅಣಬಿ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ ಇಲ್ಲವಾದರೆ ಉಗ್ರವಾದ ಹೋರಾಟ ಮಾಡುವುದಾಗಿ ಪತ್ರಿಕೆಗೆ ತಿಳಿಸಿದ್ದಾರೆ.

ಶಹಾಪೂರ ತಾಲೂಕಿನಾದ್ಯಂತ ಜೆಜಿಎಂ ಕಾಮಗಾರಿ ಹಳ್ಳ ಹಿಡಿದಿದೆ ದುಡ್ಡು ಮಾತ್ರ ಗುತ್ತಿಗೆದಾರ ಜೇಬಿಗೆ

# ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಅಧಿಕಾರಿಗಳಿಗೆ ಅಮಾನತು ಮಾಡಿ ಪ್ರದೀಪ್ ಅಣಬಿ ಆಕ್ರೋಶ.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ ತಾಲೂಕಿನ ಅತ್ಯಂತ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆ ಅಡಿಯಲ್ಲಿ ಬರುವ ಜೆಜಿಎಂ ಕಾಮಗಾರಿಯನ್ನು ಸಂಪೂರ್ಣ ಹಳ್ಳ ಹಿಡಿದು ಸಾರ್ವಜನಿಕರ ದುಡ್ಡು ಗುತ್ತಿಗೆದಾರರ ಪಾಲಾಗಿದ್ದು ಜೊತೆಗೆ ಅಧಿಕಾರಿಗಳ ಶಾಮಿಯಲಾಗಿದ್ದು ಮೇಲ್ನೋಟಕ್ಕೆ ಕಂಡು ಬಂದಿರುತ್ತದೆ.

ಈಗಾಗಲೇ ಬೇಸಿಗೆ ದಿನಗಳು ಆರಂಭವಾಗಿದ್ದು.

ಜನರಿಗೆ ನೀರಿನ ಅಹಂಕಾರ ಹೆಚ್ಚಾಗುತ್ತಿದ್ದು ಕೇಂದ್ರದ ಮಹತ್ವಾಕಾಶಯೋಜನೆಯಾಗಿದ್ದ ಬಿಜಿಎಂ ಕಾಮಗಾರಿಯನ್ನು ಸಂಪೂರ್ಣ ಹಳ್ಳ ಹಿಡಿಸಿರಿದ್ದು ಗುತ್ತಿಗೆದಾರರು ಹಾಗೂ ಅಧಿಕಾರಿಗಳು ಕೂಡಲೆ ಅಂತ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತು ಮಾಡುವಂತೆ ಪ್ರದೀಪ್ ಅಣಬಿ ಸರ್ ಎಂ ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕ ಸಂಘಟನೆಯ ಅಧ್ಯಕ್ಷರು ಆಗ್ರಹಿಸಿದ್ದಾರೆ.

ಶಹಾಪೂರ ತಾಲೂಕಿನ ವನದುರ್ಗ ಗ್ರಾಮದ 9489.15ಇದ್ದು ಗುತ್ತಿಗೆದಾರ ಶ್ರೀ ತಾಲೂಕಿನ ವನದುರ್ಗ ಗ್ರಾಮದಲ್ಲಿ ಅಂದಾಜು ಮೊತ್ತ ರಾಮರಾವ್ ಕುಲ್ಕರ್ಣಿ,ಶಾರದಳ್ಳಿ ಇದ್ದು ಆಗ್ರಿಮೆಂಟ್ ಸಂಖ್ಯೆ: 103/ ದಿನಾಂಕ: 21–08–2024 ಇದ್ದು ಒಟ್ಟು

1087ಇದ್ದುಮುಕ್ತಾಯಗೊಂಡು ಪೈಪಲೈನ್ 29729 ಹೊಂದಿದ್ದು ಒಟ್ಟು ಎಫ್. ಎಸ್.ಟಿಸಿ ಸಂಖ್ಯೆ:

ಎಫ್.ಎಸ್.ಟಿಸಿ ಸಂಖ್ಯೆ 1087 ಹೊಂದಿದ್ದು ಒಟ್ಟು ಖರ್ಚು 397.88ಕೋಟಿ ಹೊಂದಿದ್ದು ಕಾಮಗಾರಿ ಮುಕ್ತಾಯಗೊಂಡಿದೆ ಗ್ರಾಮ ಪಂಚಾಯತಗೆಹಸ್ತಾಂತರಗೊಂಡಿದೆ ಮತ್ತು ಹರ್ ಗರ್ ಜಲ್ ಪೂರ್ಣಗೊಂಡಿರುತ್ತದೆ

ಎಂದಿರುತ್ತಾರೆ .

ಶಹಾಪೂರ ತಾಲೂಕಿನ ಅಣಬಿ ಗ್ರಾಮದಲ್ಲಿ ಒಟ್ಟು ಎಫ್.ಎಸ್.ಟಿಸಿ ಸಂಖ್ಯೆ: 993 ಎಂಇದ್ದು ಅಂದಾಜು ಮೊತ್ತ 46.88ಕೋಟಿ ಎಂದಿದ್ದು ಗುತ್ತಿಗೆದಾರ ಶ್ರೀ ರಾಮರಾವ್ ಕುಲ್ಕರ್ಣಿ ಶಾರದಳ್ಳಿ: ಇದ್ದು ಪ್ರಗತಿ ವರದಿಯಲ್ಲಿ

ಎಸ್ಟಿಮೇಟ್ ಸಂಖ್ಯೆ ಮತ್ತು ದಿನಂಕ ಖಾಲಿ ಎಂದು ದಾಖಲೆ ಹೇಳುತ್ತದ ಒಟ್ಟು ಪೈಪಲೈನ್ 12,730/–

ವ್ಯಕ್ತಿಯಗೊಂಡ ಒಟ್ಟು ಖರ್ಚು 230.34ಕೋಟಿ ಎಂದು ಮತ್ತು ಕಾಮಗಾರಿ ಮುಕ್ತಾಯಗೊಂಡಿದೆ ಎಂದಿರುತ್ತದೆ.

ಈ ರೀತಿಯಾಗಿ ಅಧಿಕಾರಿಗಳು ಕಾಮಗಾರಿಯನ್ನು ಹಸ್ತಾಂತರ ತೆಗೆದುಕೊಳ್ಳುತ್ತಾರೆ.

ತಾಲೂಕಿನ ಅತ್ಯಂತ ಯಾವ ಹಳ್ಳಿಗೂ ಜೆಜಿಎಂ ಕಾಮಗಾರಿಯು ಸಂಪೂರ್ಣ ಹಳ್ಳ ಹಿಡಿದಿದ್ದು ಯಾವ ಮನೆಗೂ ಕೂಡ ನೀರು ಬಂದಿರುವದಿಲ್ಲ . ಇದಕ್ಕೆ ಅಧಿಕಾರಿಗಳೇ ನೇರವನೇ ಇಂತಹ ಅಧಿಕಾರಿಗಳನ್ನು ಅಮನಾಥ ಮಾಡುವಂತೆ ಪ್ರತಿಭಟನೆ ನಡೆಸಿದ್ದರು

ನಿಂಗಣ್ಣ ಕದ್ರಾಪುರ್ ದಲಿತ ಮತ್ತು ಮೈನಾರಿಟಿ ಜಿಲ್ಲಾಧ್ಯಕ್ಷರು ಸ್ನೈಲ್ ತಿಮ್ಮಪುರಿ ಜಲ ಉಪಾಧ್ಯಕ್ಷರು. ಸುನಿಲ್ ಹಳೆ ಸಾಗರ್. ಬಸವರಾಜ್ ನಾಟೇಕಾರ್ ಆಖಖ ತಾಲೂಕ ಅಧ್ಯಕ್ಷರು ಶಹಾಪುರ್. ನಾಗು ಯಜ್ಞದೊಡ್ಡಿ. ಹನುಮಂತ ಪರಶುರಾಮ್ ಸಿಂಗನಹಳ್ಳಿ ರಾಜು ಗೋಗಿ ಮೌನೇಶ್ ಜಾರಕಿಹೊಳಿ ವಿಶ್ವ ರಾಜ ಭೋಜಪ್ಪ ಮುಂಡಾಸ್ ಮರಿಯಪ್ಪ ಗೋಲಗೇರಿ ಸೋಪಣ್ಣ ಗೋಲಗೇರಿ ಅಮ್ಲಪ್ಪ ಮದ್ನಾಳ ಅಂಬರೀಶ್ ಶಿರವಾಳ ಸೇರಿದಂತ ಇನ್ನೂ ಭಾಗವಹಿಸಿದರು.

# ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ರಸ್ತೆ ಸುರಕ್ಷತಾ ಕಾಲ್ನಡಿಗೆ ಜಾಥಾ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 17– ರಾಷ್ಟ್ರೀಯ ರಸ್ತೆ ಸುರಕ್ಷತಾ ಕಾರ್ಯಕ್ರಮದ ಅಂಗವಾಗಿ ರಾಯಚೂರಿನಪ್ರಾದೇಶಿಕಸಾರಿಗೆ ಇಲಾಖೆಯು ಫೆ.17ರಂದು ಹಮ್ಮಿಕೊಂಡ ರಸ್ತೆ ಸುರಕ್ಷತಾ ಕಾಲ್ನಡಿಗೆಜಾಥಾಕ್ಕೆಗೌರವಾನ್ವಿತ ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಮುಖ್ಯ ನ್ಯಾಯಿಕ ದಂಡಾಧಿಕಾರಿಗಳಾದ ಸಿದ್ದರಾಮಪ್ಪಕಲ್ಯಾಣರಾವ್ ಅವರು ಹಾಗೂ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಚಾಲನೆ ನೀಡಿದರು. ಈ ವೇಳೆ ಗೌರವಾನ್ವಿತ ನ್ಯಾ.ಸಿದ್ದರಾಮಪ್ಪ ಕಲ್ಯಾಣರಾವ್ ಅವರು ಮಾತನಾಡಿ, ಮಾನವ ಜೀವನವು ಅತ್ಯಂತ ಮೌಲ್ಯಯುತವಾದುದಾಗಿದೆ. ಅಪಘಾತಗಳಿಂದದೂರವಿರುವುದು ಮತ್ತು ಸುರಕ್ಷಿತ ಜೀವನ ನಡೆಸುವುದು ಸಹ ಜೀವನದಲ್ಲಿ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ವಾಹನ ಚಾಲನೆ ಮಾಡುವಾಗ ಜಾಗರೂಕತೆ ವಹಿಸಬೇಕು ಎಂದು ಸಲಹೆ ಮಾಡಿದರು.

ಅವಸರವೇ ಅಪಘಾತಕ್ಕೆ ಮೂಲ ಕಾರಣ ಎಂಬುದನ್ನು ಅರಿಯಬೇಕು. ಒತ್ತಡದಲ್ಲಿ, ಅವಸರದಲ್ಲಿ ವಾಹನಗಳನ್ನು ಚಾಲನೆ ಮಾಡಬಾರದು. ರಸ್ತೆ ನಿಯಮಗಳನ್ನ ತಪ್ಪದೇ ಪಾಲನೆ ಮಾಡಬೇಕು. ನಾವಷ್ಟೇ ಅಲ್ಲ, ಇತರರು ಸಹ ರಸ್ತೆಯ ಮೇಲೆ ಸುರಕ್ಷಿತವಾಗಿ ಸಂಚರಿಸುವಂತೆ ಸಹಕಾರ ನೀಡಬೇಕು ಎಂದು ಸಲಹೆ ಮಾಡಿದರು.

ಸಮಾರಂಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಾ.ದಂಡಪ್ಪ ಬಿರಾದಾರ ಅವರು ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ, ಆರ್.ಟಿ.ಓ ಅಧಿಕಾರಿ ದೇವಿಂದ್ರಪ್ರಸಾದ್, ಹಿರಿಯ ಮೋಟಾರು ವಾಹನ ನಿರೀಕ್ಷಕರಾದ ಮಂಜುನಾಥ ಕೊರವಿ, ಮೋಟಾರು ವಾಹನ ನಿರೀಕ್ಷಕರಾದ ರಾಕೇಶ್, ಪ್ರವೀಣ, ಆರ್‌ಟಿಓ ಅಧೀಕ್ಷಕರಾದ ಮಂಜುನಾಥ, ಜಿನತ್ ಸಾಜಿದಾ, ಎಸ್.ಕೆ.ಇ.ಎಸ್ ಪ್ಯಾರಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಬಾಬುರಾವ್ ಶೇಗುಣಸಿ, ಗೃಹರಕ್ಷಕ ದಳದ ಜಂಬಣ್ಣ, ಡ್ರೈವಿಂಗ್ ಸ್ಕೂಲ್ ಅಧ್ಯಕ್ಷರಾದ ಅನ್ವರ್ ಪಾಷಾ, ಲಾರಿ ಅಸೋಶಿಯೇಶನ್ ಅಧ್ಯಕ್ಷರಾದ ಅಜಿಮ್ ಪಾಷಾ ಸೇರಿದಂತೆ ಇತರರು ಇದ್ದರು. ಭಾರತ ಸೇವಾದಳದ ವಿದ್ಯಾಸಾಗರ ಅವರು ಸ್ವಾಗತಿಸಿದರು. ರಾಕೇಶ ಅವರು ಪ್ರಾಸ್ತಾವಿಕ ಮಾತನಾಡಿ ವಂದಿಸಿದರು.

ಜಾಥಾ : ರಸ್ತೆ ಸುರಕ್ಷತಾ ಕಾಲ್ನಡಿಗೆ ಜಾಥಾ ಬೆಳಗ್ಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಆರಂಭವಾಗಿ ನಗರಸಭೆ, ತಹಸೀಲ್ದಾರ ಕಚೇರಿ, ಬಸ್ ನಿಲ್ದಾಣದ ಮೂಲಕ ಅಂಬೇಡ್ಕರ್ ವೃತ್ತ ಪ್ರವೇಶಿಸಿ ಮಹಾತ್ಮ ಗಾಂಧೀಜಿ ಕ್ರೀಡಾಂಗಣಕ್ಕೆ ಬಂದು ಮುಕ್ತಾಯವಾಯಿತು. ಜಾಥಾದಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು, ಎಸ್‌ಕೆ ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು, ಎಲ್ಲ ಚಾಲನಾ ತರಬೇತಿ ಶಾಲೆಯ ಪ್ರಾಚಾರ್ಯರು ಮತ್ತು ಸಿಬ್ಬಂದಿ, ಪ್ರಾದೇಶಿಕ ಸಾರಿಗೆ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗಿಯಾಗಿದ್ದರು.

# ಫೆ.21ಕ್ಕೆ ಹೆಡಗಿಮದ್ರಾ ಜಾತ್ರೆ : ರಾಚನಗೌಡ ಮುದ್ನಾಳ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ತಾಲೂಕಿನ ಹೆಡಗಿಮದ್ರಾ ಶ್ರೀ ಶಾಂತಶಿವಯೋಗೀಶ್ವರ ಜಾತ್ರೆ ಫೆಬ್ರವರಿ21ರಂದುನಡೆಯಲಿದ್ದು, ಅಂದು ಸಂಜೆ 7 ಗಂಟೆಗೆ ಶ್ರೀಮಠದ ಪೀಠಾಧಿಪತಿಗಳಾದ ಶ್ರೀ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯಮಹಾಸ್ವಾಮಿಗಳ ನೇತೃತ್ವದಲ್ಲಿ ಭವ್ಯ ರಥೋತ್ಸವ ಜರುಗಲಿದೆ ಎಂದು ಶ್ರೀಮಠದ ಭಕ್ತರಾದ ರಾಚನಗೌಡ ಮುದ್ನಾಳ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಫೆಬ್ರವರಿ 19ರಿಂದ ಜಾತ್ರೆಯ ಧಾರ್ಮಿಕ ಕಾರ್ಯಕ್ರಮಗಳು ಪ್ರಾರಂಭವಾಗಲಿದ್ದು, ಫೆಬ್ರವರಿ 19ರಂದು ಶ್ರೀಮಠದ ವಿದ್ಯಾ ಸಂಸ್ಥೆಯಾದಎಸ್.ಎಸ್.ವಿದ್ಯಾಪೀಠದ ವಾರ್ಷಿಕೋತ್ಸವ ಕಾರ್ಯಕ್ರಮ, ಫೆಬ್ರವರಿ 20ರಂದು ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ಸಂಜೆ 4 ಗಂಟೆಗೆ ಶ್ರೀಗಳ ಗಂಗಾಸ್ನಾನ ಹೆಡಗಿಮದ್ರಾ ಗ್ರಾಮದಲ್ಲಿ ಪಲ್ಲಕ್ಕಿ ಮೆರವಣಿಗೆ ಶ್ರೀಮಠದ ಪೀಠಾಧಿಪತಿಗಳು ಹಾಗೂ ಭಕ್ತರಿಂದ ತನಾರತಿ ಮಹೋತ್ಸವ ಜರುಗಲಿದೆ, ಫೆ.21ರಂದು ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಬೆಳಗ್ಗೆ 11ಕ್ಕೆ ಗುರುದೀಕ್ಷೆ ನಂತರ ಸಂಜೆ 7 ಗಂಟೆಗೆ ರಥೋತ್ಸವ ನಂತರ ಧರ್ಮ ಸಂಸ್ಕೃತಿ ಉತ್ಸವ ನಂತರ ಖ್ಯಾತ ಸಂಗೀತಗಾರರಿಂದ ಸಂಗೀತ ಕಾರ್ಯಕ್ರಮ ಮತ್ತು ರಸಮಂಜರಿ ಕಾರ್ಯಕ್ರಮ ನಡೆಯಲಿದೆ, ಫೆ.22ರಂದು ಬೃಹತ್ ಜಾನುವಾರು ಜಾತ್ರೆ ನಂತರ ಭಕ್ತರಿಂದ ದೇಸಿಕ್ರೀಡೆಗಳಾದ ಕೈಕುಸ್ತಿ, ಸಂಗ್ರಾಣಿ ಕಲ್ಲು ಎತ್ತುವುದು, ಉಸುಕಿನ ಚೀಲ ಎತ್ತುವುದು ಕಾರ್ಯಕ್ರಮಗಳು ಜರುಗಲಿವೆ ಎಂದು ತಿಳಿಸಿದರು.

ಫೆ.21ರಂದುರಥೋತ್ಸವನಂತರ ನಡೆಯುವಧಾರ್ಮಿಕಸಾಂಸ್ಕೃತಿಕ ಉತ್ಸವ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ರಾಯಚೂರು ಕಿಲ್ಲಾ ಬ್ರಾಹನ್ಮಠದ ಶ್ರೀ ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳು, ದೇವಾಪುರದ ಜಡಿ ಶಾಂತಲಿಂಗೇಶ್ವರ ಮಹಾಸ್ವಾಮಿಗಳು, ಕಲಬುರಗಿಯ ಡಾ:ರಾಜಶೇಖರ ಶಿವಾಚಾರ್ಯ ಸ್ವಾಮಿಗಳು.ಚನದಾಪುರಿಹಿರೇಮಠ ಕಲಬುರ್ಗಿ, ತೊನಸನಳ್ಳಿಯ ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಲಿದ್ದು

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮ ಖಾತೆ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶರಣಬಸಪ್ಪಗೌಡ ದರ್ಶನಾಪೂರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ, ಶಾಸಕರಾದ ಚನ್ನಾರಡ್ಡಿ ಪಾಟೀಲ ತುನ್ನೂರ, ಶರಣಗೌಡ ಕಂದಕೂರ ಅಧ್ಯಕ್ಷತೆವಹಿಸಲಿದ್ದಾರೆ ಎಂದು ತಿಳಿಸಿದರು.

ರಾಚನಗೌಡ ಮುದ್ನಾಳ ಪ್ರಾಸ್ತಾವಿಕ ಮಾತನಾಡಲಿದ್ದು, ಮುಖ್ಯ ಅತಿಥಿಗಳಾಗಿ ಮಹೇಶರಡ್ಡಿಗೌಡ ಮುದ್ನಾಳ, ನಾಗರತ್ನ ಕುಪ್ಪಿ, ಚನ್ನಪ್ಪಗೌಡ ಮೊಸಂಬಿ, ಬಸರಡ್ಡಿಗೌಡ ಅನಪೂರ, ಬಸ್ಸುಗೌಡ ಬಿಳ್ಹಾರ, ವಿನಾಯಕ ಮಾಲಿಪಾಟೀಲ್, ರಾಮರಡ್ಡಿ ಸಾಹು ತಂಗಡಗಿ, ಚಂದ್ರಾಯಗೌಡ ಗೋಗಿ, ಭೀಮನಗೌಡ ಕ್ಯಾತನಾಳ, ಬಸವರಾಜ ಚಂಡ್ರಿಕೆ, ವೆಂಕಟರೆಡ್ಡಿ ಮಾಪಾಟೀಲ್, ಶಿವಕುಮಾರ, ಮಲ್ಲಣ್ಣಗೌಡ ಹಳಮನಿ ಕೌಳೂರು, ಸುಭಾಷ ಕಟಕಟಿ, ಗಿರೀಶ ಮಾಪಾ, ಕೋಟೇಶ್ವರ ರಾಜ್, ಬಸವಂತರೆಡ್ಡಿ ಕಾರಡ್ಡಿ, ನೀಲಕಂಠ ಶಾಪೂರಕರ್, ರಾಜುಗೌಡ ಚಾಮನಾಳ, ಅನೀಲಕುಮಾರ ತಿಮ್ಮಣ್ಣ ಹೆಡಗಿಮದ್ರಾ ಆಗಮಿಸಲಿದ್ದು, ಅಮರಯ್ಯಸ್ವಾಮಿ ಜಾಲಿಬೆಂಚೆ ನಿರೂಪಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಿದ್ದುಗೌಡ ಕಾಮರಡ್ಡಿ, ಸಿದ್ರಾಮರಡ್ಡಿ ಅಣಿಬಿ, ವೀರುಪಾಕ್ಷಯ್ಯಸ್ವಾಮಿ ಹೆಡಗಿಮದ್ರಾ ಸೇರಿದಂತೆ ಭಕ್ತರು ಇದ್ದರು.

## ಫೆ.19ರಂದು ಎಸ್.ಎಸ್.ವಿದ್ಯಾಪೀಠದ 6 ವಾರ್ಷಿಕೋತ್ಸವ

ಫೆ.19ರಂದು ಸಂಜೆ 5 ಗಂಟೆಗೆ ಶ್ರೀಮಠದ ವಿದ್ಯಾ ಸಂಸ್ಥೆಯಾದ ಎಸ್.ಎಸ್.ವಿದ್ಯಾಪೀಠದ ವಾರ್ಷಿಕೋತ್ಸವ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಬಾಳೆಹೊನ್ನೂರು ರಂಭಾಪುರಿ ಪೀಠದ ಶ್ರೀಮದ್ ರಂಭಾಪುರಿ ವೀರಸೋಮೇಶ್ವರ ಜಗದ್ಗುರು ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ಭಗವತ್ಪಾದರು ವಹಿಸಲಿದ್ದು, ದೇವಾಪುರದ ಶ್ರೀ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ನೇತೃತ್ವ ವಹಿಸಲಿದ್ದು, ಹೆಡಗಿಮದ್ರಾ ಶ್ರೀ ಶಾಂತಶಿವಯೋಗಿ ಮಠದ ಪೀಠಾಧಿಪತಿ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯ ಮಹಾಸ್ವಾಮಿಗಳು ಅಧ್ಯಕ್ಷತೆವಹಿಸಲಿದ್ದಾರೆ. ಈ ಕಾರ್ಯಕ್ರಮವನ್ನು ಗಂಗಾವತಿ ಶಾಸಕರಾದ ಗಾಲಿ ಜನಾರ್ಧನ ರಡ್ಡಿ ಹಾಗೂ ಲಕ್ಷ್ಮೀ ಅರುಣಾರಡ್ಡಿ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಬಿ.ಜೆ.ಪಿ ಮುಖಂಡರಾದ ರಾಚನಗೌಡ ಮುದ್ನಾಳ, ಮಹೇಶರಡ್ಡಿಗೌಡ ಮುದ್ನಾಳ, ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ್, ಶ್ರೀ ವೇ.ಮೂ ಮಹಂತಯ್ಯ ಸ್ವಾಮಿ ಹಿರೇಮಠ ಹೆಡಗಿಮದ್ರಾ, ಖ್ಯಾತ ವೈದ್ಯರಾದ ಡಾ॥ ಸಿ.ಎಮ್. ಪಾಟೀಲ್, ಬಸವರಾಜ ಪಾಟೀಲ್ ಬಿಳ್ಹಾರ್, ಮೆಹಪೂಜ್ ಆಲಿಖಾನ್, ಶೇಖರಗೌಡ ದಮ್ಮೂರು, ಜಿಲ್ಲಾ ನ್ಯಾಯವಾದಿಗಳ ಸಂಘ ಯಾದಗಿರಿ ಜಿಲ್ಲಾಧ್ಯಕ್ಷರಾದ ಸಿ.ಎಸ್ ಮಾಲಿ ಪಾಟೀಲ್, ಯಾದಗಿರಿ ಆರ್ಯಭಟ್ಟ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಅಧ್ಯಕ್ಷರಾದ ಸುಧಾಕರ ರೆಡ್ಡಿ ಅನಪೂರ್, ಎಇಇ ಶಿವರಾಜ ಪಾಟೀಲ್ ಚಂದ್ರಲಾಂಭ ದೇವಸ್ಥಾನ ಟ್ರಸ್ಟ್ ಸನ್ನತಿಯ ಮಲ್ಲಿನಾಥಗೌಡ ಮಾಲಿಪಾಟೀಲ್, ಬಸವರಾಜ ಶಿವರಾಯ ಯಲ್ಲೇರಿ, ಚಂದ್ರಪ್ಪ ಗುಂಜನೂರ್, ದೇವಿಂದ್ರಪ್ಪ ಕಲಾಲ್ ಭಾಗವಹಿಸಲಿದ್ದಾರೆ ಎಂದರು.

ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ

# ಶಾಲೆಗಳಲ್ಲಿ ಮಕ್ಕಳ ರಕ್ಷಣಾ ನೀತಿ ಅನುಷ್ಠಾನಗೊಳಿಸಿ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ17–ಜಿಲ್ಲೆಯ ಎಲ್ಲಾ ಖಾಸಗಿ ಹಾಗೂ ಸರಕಾರಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ–2016ಅನ್ನು ಕಡ್ಡಾಯ ಅನುಷ್ಠಾನಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಕೆ.ನಾಗನಗೌಡ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಫೆ.17ರ ಸೋಮವಾರ ದಂದು ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇ–ರಿಯ ಸಭಾಂಗಣದಲ್ಲಿ ನಡೆದ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಶಾಲಾ ವಾಹನಗಳ ಅಪಘಾತ ಪ್ರಕರಣಗಳು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳು, ಹಾಗೂ ಇತರೆ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳು ವರದಿ ಆಗುತ್ತಿದ್ದು, ಅಧಿಕಾರಿಗಳು ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಆಯೋಗ–ಕ್ಕೆ ವರದಿ ಸಲ್ಲಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಶಾಲೆಗಳು ವಸತಿ ನಿಲಯಗಳಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಮಕ್ಕಳ ರಕ್ಷಣೆಯನ್ನು ಖಾತ್ರಿಪಡಿಸಿಕೊಳ್ಳುವುದು ಕಡ್ಡಾಯವಾಗಿದೆ. ಪ್ರತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಮಕ್ಕಳ ಸಹಾಯವಾಣಿ ಮತ್ತು ಪೊಲೀಸ್ ಸಹಾಯವಾಣಿಯನ್ನು ಕಡ್ಡಾಯವಾಗಿ ಬರೆಸಬೇಕು. ಹಾಗೂ ಮಕ್ಕಳ ಸುರಕ್ಷತಾ ನೀತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕು. ಮಕ್ಕಳ ಸುರಕ್ಷತಾ ವಿಷಯದಲ್ಲಿ ಯಾವುದೇ ನಿರ್ಲಕ್ಷ್ಯ ತೋರಿದಲ್ಲಿ ಅಂತಹ ಅಧಿಕಾರಿಗಳ ಮೇಲೆ ಶಿಸ್ತುಕ್ರಮ ಕೈಗೊಳ್ಳಲಾಗುವುದು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಎಚ್ಚರಿಸಿದರು. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಶಾಲಾ ವಾಹನಗಳ ಸುರಕ್ಷತೆಯನ್ನು ಕಾಲ–ಕಾಲಕ್ಕೆ ಪರಿಶೀಲನೆ ನಡೆಸಬೇಕು. ಗ್ರಾಮಿಣ ಪ್ರದೇಶದಲ್ಲಿ ಬಸ್ ವ್ಯವಸ್ಥೆ ಇಲ್ಲದ ಕಡೆ ಮಕ್ಕಳು ನಡೆದು–ಕೊಂಡು ಹೋಗುತ್ತಾರೆ. ಅಂತಹ ಕಡೆ ಕೂಡಲೇ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಸೂಚಿಸಿದರು. ಇತ್ತೀಚಿನ ದಿನಗಳಲ್ಲಿ ಗರ್ಭಿಣಿ ಮತ್ತು ಬಾಣಂತಿಯರ ಸಾವುಗಳು ಸಂಭವಿಸುತ್ತಿದ್ದು, ಅದನ್ನು ತಡೆಯಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಮಾತನಾಡಿ, ಮಕ್ಕಳ ಸುರಕ್ಷತೆಗೆ ಸಂಬಂಧಿಸಿದಂತೆ ಯಾವುದೇ ಸಂದರ್ಭದಲ್ಲಿ ಪೊಲೀಸ್ ಇಲಾಖೆಯ ಸಹಕಾರ ಬೇಕಾದಲ್ಲಿ ಅಗತ್ಯ ಸಹಕಾರ ನೀಡಲು ಪೊಲೀಸ್ ಇಲಾಖೆ ಸದಾ ಸಿದ್ದ ಇರುತ್ತದೆ. ಯಾವುದೇ ಇಲಾಖೆಯ ಅಧಿಕಾರಿಗಳು ಅಗತ್ಯವಿದ್ದರೆ ನೇರವಾಗಿ ಮಾತನಾಡಿ ಗಮನಕ್ಕೆ ತರಬಹುದು ಎಂದರು.

ಇದೇ ಸಂದರ್ಭದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ. ಹರೀಶ್, ಮಕ್ಕಳ ವಿಶೇಷ ಪೊಲೀಸ್ ಘಟಕದ ಡಿವೈಎಸ್ಪಿ ಸತ್ಯನಾರಾಯಣ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅಮರೇಶ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ತರಬೇತಿ ಕಾರ್ಯಾಗಾರದಲ್ಲಿ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ ನಿರ್ದೇಶನ ಜೆಜೆಎಂ ಅನುದಾನ ಪೋಲಾಗದಿರಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ಕೇಂದ್ರಮತ್ತು ರಾಜ್ಯಸರ್ಕಾರದ ಮಹತ್ವಪೂರ್ಣ ಕುಡಿಯುವ ನೀರಿನ ಪೂ-ರೈಕೆಯ ಯೋಜನೆಯಾದ ಜಲಜೀವನ್ ಮಿಷನ್ ಕಾರ್ಯದ ಅನುದಾನ ಪೋಲಾಗದಂತೆ ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಹೇಳಿದರು.




ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಿಲ್ಲಾ ಪಂಚಾಯತ್ ಇವರ ಸಹಯೋಗದಲ್ಲಿ ಫೀಡ್‌ಬ್ಯಾಕ್ ಫೌಂಡೇಶನ್ ವತಿಯಿಂದ ನಗರದ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ಜಲ ಜೀವನ್ ಮಿಷನ್ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಕುರಿತು ಸೋಮವಾರ ಆಯೋಜಿಸಿದ್ದ ನಾಲ್ಕು ದಿನಗಳ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಜನರಿಗೆ ಕುಡಿಯುವ ನೀರನ್ನು ಒದಗಿಸುವ ಈ ಮಹತ್ವಾಕಾಂಕ್ಷಿ ಯೋಜನೆ ಕುರಿತು ಜನರಿಗೆ ಮನವರಿಕೆ ಮಾಡಿಕೊಡಬೇಕು. ಹೀಗಾಗಿ ಕಾರ್ಯಾಗಾರ ಆಯೋಜಿಸಲಾಗಿದ್ದು, ಅವಳಿ ಜಿಲ್ಲೆಯ (ಬಳ್ಳಾರಿ ಮತ್ತು ವಿಜಯನಗರ) ಅಧಿಕಾರಿಗಳು, ಸಿಬ್ಬಂದಿಗಳು ಸರಿಯಾದ ಮಾಹಿತಿ ಪಡೆದುಕೊಳ್ಳಬೇಕು. ಯೋಜನೆಯ ಬಗ್ಗೆ ಕಾರ್ಯಗಾರದಲ್ಲಿ ಪಡೆದುಕೊಂಡ ಸಮಗ್ರ ವಿವರದೊಂದಿಗೆ ಕಾರ್ಯ ಯೋಜನೆ ರೂಪಿಸಿಕೊಂಡು ಯೋಜನೆ ಅನುಷ್ಠಾನಕ್ಕೆ ಸಹಕರಿಸಬೇಕು ಎಂದರು.

ಸಮುದಾಯದ ಜನರ ಪರಸ್ಪರ ಸಹಕಾರದೊಂದಿಗೆ ಜಲ ಜೀವನ್ ಮಿಷನ್ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಧಿಕಾರಿ ಮತ್ತು ಸಿಬ್ಬಂದಿಗಳು ಶ್ರಮಿಸಬೇಕು. ಇದಕ್ಕೆ ಆಯಾ ಗ್ರಾಪಂ ಅಧ್ಯಕ್ಷರು ಹಾಗೂ ಪಿಡಿಒ ಅಧಿಕಾರಿಗಳು ಕೈಜೋಡಿಸಬೇಕು ಎಂದು ತಿಳಿಸಿದರು.

ಜಲ ಜೀವನ್ ಮಿಷನ್ ಯೋಜನೆ ಅನುಷ್ಠಾನವು ಗುಣಮಟ್ಟತೆಯಿಂದ ಕೂಡಿರಬೇಕು.

ಗುಣಮಟ್ಟತೆಯ ಆಧಾರದ ಮೇಲೆ ವಿಶ್ವಬ್ಯಾಂಕ್ ಅನುದಾನ ಬಿಡುಗಡೆ ಮಾಡಲಾಗುತ್ತದೆ. ಮುಖ್ಯವಾಗಿ ಪೈಪ್ ಅಳವಡಿಕೆ ಕಾರ್ಯಕ್ಕೆ ಪ್ರಾಮುಖ್ಯತೆ ನೀಡಬೇಕು. ಕಲುಷಿತ ನೀರು ಸರಬರಾಜು ಮೂಲಗಳಿಂದ ದೂರ ಇರುವಂತೆ ನೋಡಿಕೊಳ್ಳಬೇಕು ಎಂದರು.

ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಅಧಿಕಾರಿ ಮತ್ತು ಸಿಬ್ಬಂದಿಗಳು ಕ್ಷೇತ್ರಮಟ್ಟದಲ್ಲಿ ಕಾರ್ಯನಿರ್ವಹಿಸುವಾಗ ಯೋಜನೆಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ತಿಳಿದುಕೊಂಡು ಕಾರ್ಯನಿರ್ವಹಿಸುವುದು ಜವಾಬ್ದಾರಿಯಾಗಿದೆ ಎಂದರು.

ಕ್ಷೇತ್ರಮಟ್ಟದಲ್ಲಿ ಕಾರ್ಯಕ್ರಮಗಳ ಜೊತೆಗೆ ಜಲ ಜೀವನ್ ಮಿಷನ್ ಯೋಜನೆಯಡಿಯಲ್ಲಿ ಅನುಷ್ಠಾನವಾಗುತ್ತಿರುವ ಕಾಮಗಾರಿಗಳ ಬಗ್ಗೆಯು ಸಂಪೂರ್ಣವಾದ ಮಾಹಿತಿ ಹೊಂದಿರಬೇಕು. ಯೋಜನೆಯ ಬಗ್ಗೆ ಯಾವುದೇ ನ್ಯೂನತೆಗಳಿದ್ದರೆ ಸಾಧ್ಯವಾದಷ್ಟು ತಮ್ಮ ಹಂತದಲ್ಲಿಯೇ ಬಗೆಹರಿಸಲು ಶ್ರಮಿಸಬೇಕು. ಅದೇರೀತಿ ಯೋಜನೆಯ ಮಹತ್ವವನ್ನು ತಿಳಿಸಿ ಆ ಯೋಜನೆಯು ಅನುಷ್ಠಾನ ಮಟ್ಟದಲ್ಲಿ ಎಲ್ಲರ ಜೋತೆ ಸೇರಿ ಕೆಲಸ ಮಾಡಿದರೆ ಮಾತ್ರ ಈ ಯೋಜನೆಯು ಯಶಸ್ವಿಯಾಗುತ್ತದೆ ಎಂದು ತಿಳಿಸಿದರು.

ಕಾರ್ಯಗಾರದಲ್ಲಿ ಗುರುಗಾವ್‌ನ ಫೀಡ್ ಬ್ಯಾಕ್ ಫೌಂಡೇಶನ್‌ನ ಸಿಇಒ ಅಜಯ್ ಸೀನಾ ಅವರು ಶಿಬಿರಾರ್ಥಿಗಳಿಗೆ ಜಲ ಜೀವನ್ ಮಿಷನ್ ಯೋಜನೆ ಅನುಷ್ಠಾನದ ಕುರಿತು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಜಿಪಂ ಮುಖ್ಯ ಲೆಕ್ಕಾಧಿಕಾರಿ ಪರಿಮಳ, ಜಿಪಂ ಯೋಜನಾನಿರ್ದೇಶಕ ವಿನೋದ್ ಕುಮಾರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಹೆಚ್. ಇಂಧುದಾರ್, ವಿಜಯನಗರ ಜಿಲ್ಲೆಯ ದೀಪಾ.ಎಸ್., ಫೀಡ್ ಬ್ಯಾಂಕ್ ಫೌಂಡೇಶನ್‌ನ ರಾಜ್ಯ ಯೋಜನಾ ಸಮನ್ವಯಾಧಿಕಾರಿ ಡಾ.ನಂದಕುಮಾರ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಭಿಯಂತರರು, ವಿವಿಧ ಗ್ರಾಪಂ ಅಧ್ಯಕ್ಷರು, ಪಿಡಿಒ ಅಧಿಕಾರಿಗಳು ಹಾಗೂ ಅನೇಕರು ಉಪಸ್ಥಿತರಿದ್ದರು.

# ಮನೆ ಹೊರಗಿನ ನೀರು ಸಂಗ್ರಹಕಗಳಿಗೆ ಸರಿಯಾಗಿ ಮುಚ್ಚಳ ಮುಚ್ಚುವ ಮೂಲಕ ಈಡಿಸ್ ಸೊಳ್ಳೆಗಳು ಮೊಟ್ಟೆ ಇಡದಂತೆ ಸಹಕರಿಸಿ: ಡಾ ಅಬ್ದುಲ್ಲಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ಡೆಂಗ್ಯುರೋಗ ಹರಡುವ ಈಡಿಸ್ ಸೊಳ್ಳೆಗಳ ಸಂತತಿಯನ್ನು ನಿರ್ಮೂಲನೆ ಮಾಡಲು ಪ್ರತಿಯೊಬ್ಬರೂ ಮನೆಯ ಸುತ್ತಲೂ ನೀರು ನಿಲ್ಲದಂತೆ ಸ್ವಚ್ಛವಾಗಿಡುವ ಮೂಲಕ ಡೆಂಗ್ಯು ರೋಗ ಹರಡುವ ಈಡಿಸ್ ಇಜಿಪ್ಟೈ ಸೊಳ್ಳೆಗಳ ಉತ್ಪತ್ತಿಯನ್ನು ತಡೆಯಲು ಸಾರ್ವಜನಿಕರು ಸಹಕರಿಸಿ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಅಬ್ದುಲ್ಲಾ ಜನತೆಗೆ ಮನವಿ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ವಿಭಾಗದ ಸಹಕಾರದಲ್ಲಿ ಲಾರ್ವಾ ಸಮೀಕ್ಷಾ ಕಾರ್ಯದ ವಿಶೇಷ ಅಭಿಯಾನದ ಹಿನ್ನೆಲೆಯಲ್ಲಿ ನಗರದ ಗಾಂಧಿನಗರ ಬಡಾವಣೆ ವ್ಯಾಪ್ತಿಯ ಬಿ.ಚಿ.ನಗರದಲ್ಲಿ ಮನೆ ಮನೆ ಭೇಟಿಯ ಸಮೀಕ್ಷಾ ಕಾರ್ಯ ಪರಿಶೀಲಿಸಿ ಅವರು ಮಾತನಾಡಿದರು.

ಡೆಂಗ್ಯು ಪ್ರಕರಣಗಳು ಗಣನೀಯವಾಗಿ ನಿಯಂತ್ರಣ ವಾಗಿದ್ದು, ವಿಶೇಷವಾಗಿ ನೀರು ಸಂಗ್ರಹಕಗಳಾದ ಡ್ರಮ್ ಬ್ಯಾರಲ್, ಕಲ್ಲಿನ ಡೋಣಿ, ಸಿಮೆಂಟ್ ತೊಟ್ಟಿ ಮುಂತಾದವುಗಳನ್ನು ವಾರದಲ್ಲಿ ಒಮ್ಮೆ ಚೆನ್ನಾಗಿ ತಿಕ್ಕಿ ತೊಳೆದು ನೀರು ತುಂಬುವುದಕ್ಕೆ ಆದ್ಯತೆ ನೀಡಬೇಕು, ಸ್ವಚ್ಛಗೊಳಿಸಲು ಸಾಧ್ಯವಿಲ್ಲದ ಪರಿಕರಗಳಿಗೆ ಟೆಮಿಫಾಸ್ ದ್ರಾವಣವನ್ನು ಹಾಕಲು ಸಹಕರಿಸಬೇಕು ಎಂದು ವಿನಂತಿಸಿದರು.

ಡೆಂಗ್ಯೂ ಖಾಯಿಲೆಗೆ ನಿರ್ದಿಷ್ಟ ಚಿಕಿತ್ಸೆ ಇಲ್ಲದರಿರುವುದರಿಂದ ಜ್ವರ, ತಲೆನೋವು, ಕಣ್ಣಿನ ಹಿಂಭಾಗದಲ್ಲಿ ನೋವು, ಮುಂತಾದವು ಕಂಡು ಬಂದರೆ ತಡ ಮಾಡದೆ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಬೇಕು ಎಂದು ಕೋರಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಎನ್ ವಿಬಿಡಿಸಿಪಿ ಜಿಲ್ಲಾ ಸಲಹೆಗಾರ ಪ್ರತಾಪ್, ಆಶಾ ಕಾರ್ಯಕರ್ತೆ ವಿಜಯಭಾರತಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಶ್ರೀ ಅಂಬಾಭವಾನಿ ದೇವಸ್ಥಾನ ಉದ್ಘಾಟನೆ ಹಾಗೂ ಮೂರ್ತಿ ಪ್ರತಿಷ್ಠಾಪನಾ ಸಮಾರಂಭ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಗೊಂದಳಿ ಸಮಾಜದ ಆರಾಧ್ಯ ದೈವ ಶ್ರೀ ಅಂಬಾ ಭವಾನಿ ನೂತನ ದೇವಸ್ಥಾನದ ಉದ್ಘಾಟನೆ ಹಾಗೂ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಫೇ.17,18 ರಂದು ವಿಶೇಷ ಕಾರ್ಯಕ್ರಮಗಳು ಜರುಗಲಿವೆ. ದಿನಾಂಕ 17.2.2025 ಸೋಮವಾರ ಬೆಳಿಗ್ಗೆ 10:00 ಘಂಟೆಗೆ ನೂತನ ಮೂರ್ತಿಗಳ ಗಂಗಸ್ಥಳ ನಂತರ ಕಳಸ ಕುಂಭಗಳೊಂದಿಗೆ ಪಟ್ಟಣದಲ್ಲಿ ಭವ್ಯ ಮೆರವಣಿಗೆ, ಅಂದೆ ಸಂಜೆ 5:00 ಘಂಟೆಗೆ ಮೂರ್ತಿಗಳ ಜಲವಾಸ, ಧಾನ್ಯವಾಸ ಹಾಗೂ ಶಯ್ಯಾದಿವಸ ನಡೆಯುವುದು. ದಿನಾಂಕ 18.02.2025 ಮಂಗಳವಾರ ಬೆಳಿಗ್ಗೆ 6:00 ಘಂಟೆಯಿಂದ ಪ್ರತಿಷ್ಠಾಪನೆಯ ಪೂಜಾ ವಿಧಿ ವಿಧಾನಗಳು ಪ್ರಾರಂಭವಾಗುವುದು ಮಧ್ಯಾಹ್ನ 1:00 ಘಂಟೆಗೆ ಮಹಾಪ್ರಸಾದ ಜರಗುವುದು. ಅರ್ಚಕ ಶ್ರೀ ವೇದ.ಮೂ. ಸಂತೋಷ ಭಟ್ ಜೋಶಿ ಇವರ ನೇತೃತ್ವದಲ್ಲಿ ಎಲ್ಲಾ ಪೂಜಾ ವಿಧಿ ವಿಧಾನಗಳು ಜರಗುವವು. ದಿನಾಂಕ 18-2- 2025 ರ ಬೆಳಿಗ್ಗೆ 10:30 ಘಂಟೆಗೆ ಧರ್ಮಸಭೆ ಜರುಗಲಿದ್ದು ದಿವ್ಯ



ಸಾನಿಧ್ಯವನ್ನು ಖಾಸ್ಗತೇಶ್ವರ ಮಠದ ಶ್ರೀ ಸಿದ್ಧಲಿಂಗ ದೇವರು ವಹಿಸುವರು. ಗುಂಡಕನಾಳ ಬ್ರಹನ್ ಮಠದ ಶ್ರೀ ಷ.ಬ್ರ. ಗುರುಲಿಂಗ ಶಿವಾಚಾರ್ಯರು, ಮ.ನಿ.ಪ್ರ.ಶಿವಕುಮಾರ ಮಹಾಸ್ವಾಮಿಗಳು ಕೊಡೆಕಲ್, ಅನ್ನದಾನೇಶ್ವರ ಹಿರೇಮಠ ಹಿರೂರದ ಷ.ಬ್ರ.ಶ್ರೀ ಜಯಸಿದ್ದೇಶ್ವರ ಮಹಾಸ್ವಾಮಿಗಳು, ವಡವಡಗಿ ನಂದಿ ಮಠದ ಮ.ನಿ.ಪ.ಶ್ರೀ ವೀರಸಿದ್ದ ಮಹಾಸ್ವಾಮಿಗಳು, ಕುಂಟೋಜಿ ಭಾವೈಕ್ಯತಾ ಹಿರೇಮಠದ ಶ್ರೀ ಷ.ಬ್ರ.ಡಾ.ಗುರು ಚನ್ನವೀರ ಶಿವಾಚಾರ್ಯರು, ಅರ್ಚಕ ಶ್ರೀ ವೇ.ಮೂ. ಸಂತೋಷ್ ಭಟ್ ಜೋಶಿ ಪಾವನ ಸಾನಿಧ್ಯ ವಹಿಸುವರು. ಕೆಎಸ್‌ಡಿಎಲ್ ಅಧ್ಯಕ್ಷರು, ಮುದ್ದೇಬಿಹಾಳ ಶಾಸಕ ಸಿ.ಎಸ್.ನಾಡಗೌಡ( ಅಪ್ಪಾಜಿ) ಸಮಾರಂಭವನ್ನು ಉದ್ಘಾಟಿಸುವರು. ಗೊಂದಳಿ ಸಮಾಜದ ಅಧ್ಯಕ್ಷ ವಿಠಲ ರಾಮು ಸೂರ್ಯವಂಶಿ, ಗೊಂದಳಿ ಸಮಾಜ ಮೈಸೂರು ರಾಜ್ಯಾಧ್ಯಕ್ಷ ಕೆ.ಜಯರಾಮಯ್ಯ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಎ.ಎಸ್.ಪಾಟೀಲ(ನಡಹಳ್ಳಿ). ಅತಿಥಿಗಳಾಗಿ ಪುರಸಭೆ ಸದಸ್ಯೆ ಅಕ್ಕಮಹಾದೇವಿ ಕಟ್ಟಿಮನಿ, ಸುರೇಶ್ ಭಿಸ್ಸೆ ವಿಜಯಪುರ, ಅಂಬಾಜಿ ಜೋಶಿ ಬಾಗಲಕೋಟ, ಯಶೋಧಾ ಇಂಗಳೆ ನಾಗರಾಳ, ಸಿಪಿಐ ಕಾರಟಗಿ ಪ್ರದೀಪ್ ಬಿಸ್ಸೆ, ಕಲಬುರ್ಗಿ ಗೋವಿಂದ ಭಟ್, ಕುಷ್ಟಗಿ ತುಕಾರಾಂ ಸುರ್ವೆ, ನಾಲತವಾಡ ಶಿಕ್ಷಕ ಚೆನ್ನಪ್ಪ ಗೊಂದಳಿ, ನಾರಾಯಣ ಗಣಪತಿ ದುರವೇ, ಗ್ರಾಪಂ ಮಾಜಿ ಅಧ್ಯಕ್ಷ ತುಕಾರಾಂ ಗೊಂದಳಿ, ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ, ಕಾಂಗ್ರೆಸ್ ಮುಖಂಡ ಪ್ರಭುಗೌಡ ಮದರ್ಕಲ್, ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ವಿಜಯಸಿಂಗ್ ಹಜೇರಿ, ನೀಲಮ್ಮ ಶಂ.ಪಾಟೀಲ ಹಾಗೂ ತಾಳಿಕೋಟಿ ಸರ್ವ ಸಮಾಜದ ಅಧ್ಯಕ್ಷರು ಮುಖಂಡರು ಹಾಗೂ ಗುರುಹಿರಿಯರು ಉಪಸ್ಥಿತರಿರುವರು ಎಂದು ಗೊಂದಳಿ ಸಮಾಜದ ಅಧ್ಯಕ್ಷ ವಿಠ್ಠಲ್ ರಾಮು ಸೂರ್ಯವಂಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಪ್ಲಿ: ಫೆ.18 ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗ ವ್ಯಾಪ್ತಿಯ ಬರುವ ವಿದ್ಯುತ್ ಗ್ರಾಹಕರು ಹಾಗೂ ಸಾರ್ವಜನಿಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ಫೆ.18 ರಂದು ಬೆಳಿಗ್ಗೆ 12 ಗಂಟೆಗೆ ಕಂಪ್ಲಿ ಜೆಸ್ಕಾಂ ಕಚೇರಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಕುಂದು ಕೊರತೆ ಸಭೆ ಆಯೋಜಿಸಲಾಗಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಭಾಗವಹಿಸಿ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ನಗರದ ಶಾಸ್ತ್ರಿನಗರ ಈಶ್ವರ ಗುಡಿ ಹಿಂಭಾಗದ ನಿವಾಸಿ ಶಾಡೋ ಫ್ಯಾಕ್ಸ್ ಕೊರಿಯರ್ ಕೆಲಸ ಮಾಡುತ್ತಿದ್ದ ಹೆಚ್.ವೀರೇಶ್ ಎನ್ನುವ 46 ವರ್ಷದ ವ್ಯಕ್ತಿಯು ಫೆ.04 ರಂದು ಕಾಣೆಯಾಗಿರುವ ಕುರಿತು ಕೌಲ್ ಬಜಾರ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಎಂದು ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: ಎತ್ತರ 5.5 ಅಡಿ, ಕೋಲು ಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟು, ಮೊಣಕಾಲಿನ ಕೆಳಗಡೆ ಗಂಟುಗಳಿರುತ್ತವೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಮತ್ತು ನೀಲಿ ಬಣ್ಣದ ಚೆಕ್ಸ್ ಶರ್ಟ್ ಮತ್ತು ಸಿಮೆಂಟ್ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೋಲಿಸ್ ಠಾಣೆಯ ದೂ.08392-240731,244145 ಪಿಎಸ್‌ಐ ಮೊ.94808203085, ಪಿಐ ಮೊ.9480803047 ಅಥವಾ ಬಳ್ಳಾರಿ ಪೋಲಿಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ನಗರದ ಕೌಲ್ ಬಜಾರ್ ಬಾಬುನಾಯ್ಡು ಸ್ಟ್ರೀಟ್‌ನ ನಿವಾಸಿ ಫ್ಯಾಕ್ಟರಿಯಲ್ಲಿ ಕೆಲಸ ಮಾಡುತ್ತಿದ್ದ ಎಸ್.ಪ್ರವೀಣ್ ಕುಮಾರ್ ಎನ್ನುವ 42 ವರ್ಷದ ವ್ಯಕ್ತಿಯು 2024 ರ ಅ.12 ರಂದು ಕಾಣೆಯಾಗಿರುವ ಕುರಿತು ಕೌಲ್ ಬಜಾರ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಎಂದು ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ: ಎತ್ತರ 5.10 ಅಡಿ, ಸಾಧಾರಣ ಕಪ್ಪು ಮೈಬಣ್ಣ, ದೃಢವಾದ ಮೈಕಟ್ಟು, ಎಡಗೈ ಮೇಲೆ ಇಂಗ್ಲಿಷ್‌ನಲ್ಲಿ ಮೋಕ್ಷ ಎಂದು ಹಚ್ಚೆ ಹಾಕಿಕೊಂಡಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ನೀಲಿ ಬಣ್ಣದ ಶರ್ಟ್ ಮತ್ತು ಚಾಕೋಲೆಟ್ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೋಲಿಸ್ ಠಾಣೆಯ ದೂ.08392-240731,244145 ಪಿಎಸ್‌ಐ ಮೊ.94808203085, ಪಿಐ ಮೊ.9480803047 ಅಥವಾ ಬಳ್ಳಾರಿ ಪೋಲಿಸ್ ಕಂಟ್ರೋಲ್ ರೂಂ ದೂ.08392-258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಳ್ಳಾರಿ: ಫೆ.20, 21 ಮತ್ತು 22 ರಂದು ಜಿಂದಾಲ್‌ನಲ್ಲಿ ಬೃಹತ್ ರಕ್ತದಾನ ಶಿಬಿರ

# 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರು ಸ್ವಯಂ ಪ್ರೇರಿತ ರಕ್ತದಾನ ಮಾಡಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.17-ಜಿಲ್ಲೆಯ ಸಂಡೂರು ತಾಲ್ಲೂಕಿನ ತೋರಣಗಲ್ಲು ಬಳಿಯ ಜೆಎಸ್‌ಡಬ್ಲೂಜೆ ಸಂಸ್ಥೆ ವತಿಯಿಂದ ಜಿಂದಾಲ್ ನ ವಿವಿಧ 10 ಸ್ಥಳಗಳಲ್ಲಿ ಬೃಹತ್ ರಕ್ತದಾನ ಶಿಬಿರ ಏರ್ಪಡಿಸಲಾಗಿದ್ದು, 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಅರ್ಹರು ಸ್ವಯಂ ಪ್ರೇರಿತ ರಕ್ತದಾನ ಮಾಡುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಹೇಳಿದರು.

ಅವರು ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬೃಹತ್ ರಕ್ತದಾನ ಶಿಬಿರ ಆಯೋಜನೆ ಕುರಿತಂತೆ ಆರೋಗ್ಯಾಧಿಕಾರಿಗಳ ಜೊತೆ ಏರ್ಪಡಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

ಮನುಷ್ಯ ಬದುಕಿರುವಾಗ ದಾನ ಮಾಡಬಹುದಾದಂತ ವಸ್ತು ರಕ್ತ. 18 ವರ್ಷ ಮೇಲ್ಪಟ್ಟ ಎಲ್ಲ ಅರ್ಹ ಪುರುಷ ಮತ್ತು ಮಹಿಳೆ ರಕ್ತದಾನ ಮಾಡುವ ಮೂಲಕ ಜಿಲ್ಲೆಯಲ್ಲಿ ರಕ್ತದ ಕೊರತೆಯನ್ನು ನೀಗಿಸಲು ಇದೇ ಫೆಬ್ರವರಿ 20, 21, 22 ರಂದು ಜಿಂದಾಲ್‌ನಲ್ಲಿ ಜರಗುವ ಬೃಹತ್ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ತಪ್ಪದೇ ರಕ್ತದಾನ ಮಾಡಿ ಶಿಬಿರ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ರಕ್ತದಾನ ಮಾಡುವುದರಿಂದ ದಾನಿಗಳ ದೇಹದಲ್ಲಿ ಹೊಸ ಚೈತನ್ಯ ಉಂಟು ಮಾಡಲು ಅನುವು ಮಾಡಿದಂತಾಗುತ್ತದೆ. ರಕ್ತದಾನದ ಮಹತ್ವಸ್ಮರಿಸಲು ವ್ಯಾಪಕ ಪ್ರಚಾರ ನೀಡಬೇಕು ಎಂದು ಈ ಸಂದರ್ಭದಲ್ಲಿ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್



ಬಾಬು ಅವರು ಮಾತನಾಡಿ, ರಕ್ತದಾನ ಮಾಡುವುದರಿಂದ ಪ್ರತಿದಿನ ಅಪಘಾತಗಳಿಂದ ಗಾಯಗೊಂಡವರಿಗೆ ಹಾಗೂ ರಕ್ತಹೀನತೆಯಿಂದ ಬಳಲುವ ಗರ್ಭಿಣಿಯರಿಗೆ, ಹೆರಿಗೆ ಸಂದರ್ಭದಲ್ಲಿ ಗರ್ಭಿಣಿಯರಿಗೆ ಮತ್ತು ತಲಸಿಮಿಯಾದಂತ ಕಾಯಿಲೆಯಿಂದ ಬಳಲುತ್ತಿರುವವರಿಗೆ ನಿರಂತರವಾಗಿ ರಕ್ತದ ಅವಶ್ಯಕತೆ ನೀಗಿಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ರಕ್ತದಾನ ಮಾಡುವುದರಿಂದ ನಮ್ಮ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಗೆ ನಿರಂತರವಾಗಿ ಸಹಕಾರಿಯಾಗಲಿದೆ. ಹಾಗಾಗಿ ಅರ್ಹ ಪ್ರತಿಯೊಬ್ಬ ಪುರುಷರು ಮೂರು ತಿಂಗಳಿಗೊಮ್ಮೆ, ಮಹಿಳೆ ನಾಲ್ಕು ತಿಂಗಳಿಗೊಮ್ಮೆ ರಕ್ತದಾನ ಮಾಡುವ ಮೂಲಕ ಮಾನವೀಯತೆಯ ಮೌಲ್ಯ ಅಳವಡಿಸಿಕೊಳ್ಳಬೇಕು ಎಂದರು.

*5000 ಯುನಿಟ್ ರಕ್ತ ಸಂಗ್ರಹಕ್ಕೆ ಗುರಿ:*

ಜಿಲ್ಲಾಡಳಿತ, ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ನಿರ್ವಹಣಾ ಘಟಕ ಇವರೊಂದಿಗೆ ತೋರಣಗಲ್ಲು ನ ಜೆಎಸ್‌ಡಬ್ಲ್ಯು ಜಿಂದಾಲ್ ಇವರ ಸಹಯೋಗದಲ್ಲಿ ಜಿಂದಾಲ್ ಆವರಣದ ವಿವಿಧ 10 ಸ್ಥಳಗಳಲ್ಲಿ ರಕ್ತ ಭಂಡಾರ (ಬ್ಲಡ್‌ಬ್ಯಾಂಕ್) ಮೂಲಕ ಬೃಹತ್ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿದ್ದು, ಒಟ್ಟು 5000 ಕ್ಕೂ ಹೆಚ್ಚು ಯುನಿಟ್ ರಕ್ತ ಸಂಗ್ರಹಿಸಲು ಗುರಿ ಹೊಂದಲಾಗಿದೆ. ಶಿಬಿರದಲ್ಲಿ 09 ರಕ್ತಕೇಂದ್ರಗಳು ಭಾಗವಹಿಸಲಿವೆ ಎಂದು ಅವರು ತಿಳಿಸಿದರು.

*ರಕ್ತದಾನ ಶಿಬಿರ ನಡೆಯುವ ಸ್ಥಳ:*

ಜಿಂದಾಲ್‌ನ ಒಪಿಜೆ ಸೆಂಟರ್‌ನ ತಮನ್ನಾ ಶಾಲೆ, ಜಿಂದಾಲ್ ಸಂಜೀವಿನಿ ಆಸ್ಪತ್ರೆ, ವಿದ್ಯಾನಗರದ ಆರೋಗ್ಯ ಕೇಂದ್ರ ಮತ್ತು ಲಿಟಲ್ ಎಲ್ಲೆ, ಹೆಚ್‌ಎಸ್‌ಟಿ ಕಾಂಪ್ಲೆಕ್ಸ್, ಸಿಆರ್‌ಎಂ-1 ಪ್ಲ್ಯಾಂಟ್, ಲಾಜಿಸ್ಟಿಕ್ ಪ್ಲಾಂಟ್, ಎಸ್‌ಎಂಎಸ್-4 ಪ್ಲ್ಯಾ, ಹೆಚ್‌ಆರ್‌ಡಿ ಪ್ಲ್ಯಾಂಟ್, ಜೆಎಸ್‌ಎಂಎಸ್ ಹೆಚ್‌ನ ಸ್ಟೆಪ್‌ಡೌನ್ ಐಸಿಯು ಮತ್ತು ಜೆಎಸ್‌ಡಬ್ಲೂ ಜೆ ಎನರ್ಜಿ ಸಭಾಂಗಣದಲ್ಲಿ ಬೆಳಿಗ್ಗೆ 09 ಗಂಟೆಯಿಂದ ಸಂಜೆ 04.30 ಗಂಟೆಯವರೆಗೆ ನಡೆಯಲಿದೆ.

*ಇಲ್ಲಿ ಸಾರ್ವಜನಿಕರಿಗೆ ಅವಕಾಶ:*

ತೋರಣಗಲ್ಲು ನ ಒಪಿಜೆ ಜಿಂದಾಲ್ ತಮನ್ನಾ ಶಾಲೆ ಆವರಣ ಮತ್ತು ಜಿಂದಾಲ್ ಸಂಜೀವಿನಿ ಆಸ್ಪತ್ರೆ ಆವರಣ ಸೇರಿ ಈ ಎರಡು ಸ್ಥಳದಲ್ಲಿ ಸಾರ್ವಜನಿಕರಿಗೆ ಸ್ವಯಂ ಪ್ರೇರಣೆಯಿಂದ ರಕ್ತದಾನ ಮಾಡಲು ಅವಕಾಶವಿದ್ದು, ಮೂರು ದಿನಗಳ ಕಾಲ ತಪ್ಪದೇ ಆಗಮಿಸಿ ರಕ್ತದಾನ ಮಾಡಬಹುದು ಎಂದು ತಿಳಿಸಿದರು.

ನೋಂದಣಿಗಾಗಿ ಮೊ.7829012277, 8039542124, 08395-42222, 9945367894, 9686595215 ಗೆ ಕರೆ ಮಾಡಿ ನೋಂದಾಯಿಸಿಕೊಳ್ಳಬಹುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯ-ರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಜಿಲ್ಲಾ ಡ್ಯಾಪ್ಲೋ ಮೇಲ್ವಿಚಾರಕ ಗಿರೀಶ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಫೆಬ್ರವರಿ 18 ರಂದು ಕಲ್ಯಾಣ ಕರ್ನಾಟಕ ರಾಷ್ಟ್ರೀಯ ಸಾಹಿತ್ಯೋತ್ಸವದ ಸಮಾರೋಪ ಸಮಾರಂಭ


ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.17-ಕಲ್ಯಾಣ ಕರ್ನಾಟಕ ರಾಷ್ಟ್ರೀಯ ಸಾಹಿತ್ಯೋತ್ಸವ ಕಾರ್ಯಕ್ರಮದ ಸಮಾರೋಪ ಸಮಾರಂಭವು ಫೆಬ್ರವರಿ 18 ರಂದು ಮಂಗಳವಾರ ಸಂಜೆ 4 ಗಂಟೆಗೆ ಗುಲಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆಯ ಹರಿಹರ ಸಭಾಂಗಣದಲ್ಲಿ ಜರುಗಲಿದೆ.

ಬೆಂಗಳೂರಿನ ಪ್ರಗತಿಪರ ಚಿಂತಕ ಸಿದ್ದನಗೌಡ ಪಾಟೀಲ ಅವರು ಸಮಾರೋಪ ನುಡಿಗಳನ್ನಾಡುವರು. ಗುಲಬರ್ಗಾ ವಿಶ್ವವಿದ್ಯಾಲಯದ ಕುಲಪತಿ (ಪ್ರಭಾರ) ಜಿ. ಶ್ರೀರಾಮುಲು ಅವರು ಅಧ್ಯಕ್ಷತೆವಹಿಸುವರು. ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಸದ್ದಪ್ಪ ಮೂಲಗೆ, ವಿದ್ಯಾವಿಷಯಕ ಪರಿಷತ್ ಸದಸ್ಯ ಎಸ್.ಎನ್. ಗಾಯಕವಾಡ, ವಿಶ್ವವಿದ್ಯಾಲಯದ ಕುಲಸಚಿವ(ಮೌಲ್ಯಮಾಪನ) ಪ್ರೊ. ಮೇಧಾವಿನಿ ಕಟ್ಟಿ, ವಿತ್ತಾಧಿಕಾರಿ ಗಾಯತ್ರಿ ಹಾಗೂ ಕನ್ನಡ ಅಧ್ಯಯನ ಸಂಸ್ಥೆ ಹಾಗೂ ಪಾಲಿ ಮತ್ತು ಬೌದ್ಧ ಅಧ್ಯಯನ ಸಂಸ್ಥೆಯ ನಿರ್ದೇಶಕ ಪ್ರೊ. ಎಚ್.ಟಿ. ಪೋತೆ ಅವರು ಕಾರ್ಯಕ್ರಮದಲ್ಲಿ ಗೌರವ ಅತಿಥಿಗಳಾಗಿ ಪಾಲ್ಗೊಳ್ಳುವರು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿ:9448604450

# ಪತ್ರಕರ್ತ ದಿ.ವಿರೇಶಕುಮಾರ ಮಠಪತಿಗೆ ಭಾವಪೂರ್ಣ ಶ್ರದ್ಧಾಂಜಲಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 17 :– ನಗರದ ಜಿಲ್ಲಾಪತ್ರಿಕಾ ಭವನದಲ್ಲಿರವಿವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ವತಿಯಿಂದ ಇತ್ತೀಚೆಗೆ ಅನಾರೋಗ್ಯದಿಂದ ಬಳಲಿ ಲಿಂಗೈಕ್ಯರಾಗಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚಿಟಗುಪ್ಪ ತಾಲೂಕು ನಿಕಟಪೂರ್ವ ಅಧ್ಯಕ್ಷರಾಗಿದ್ದ ದಿ.ವಿರೇಶಕುಮಾರ ಮಠಪತಿ ಅವರಿಗೆಭಾವಪೂರ್ಣಶ್ರದ್ಧಾಂಜಲಿ ಸಲ್ಲಿಸಲಾಯಿತು.

ಶ್ರದ್ಧಾಂಜಲಿಸಭೆಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ಅವರು, ಅಗಲಿದಪತ್ರಕರ್ತರಿಗೆಶ್ರದ್ಧಾಂಜಲಿ ಸಲ್ಲಿಸುವುದು ಸಂಪ್ರದಾಯ ಅಲ್ಲ, ಅದು ನಮ್ಮ ಕರ್ತವ್ಯ ಮತ್ತು ಧರ್ಮ. ಹಾಗಾಗಿ ನಾವು ನಮ್ಮ ಮನೆಯ(ಪತ್ರಕರ್ತರು) ಓರ್ವ ಸದಸ್ಯರನ್ನು ಕಳೆದುಕೊಂಡು ಬಡವಾಗಿದ್ದೇವೆ. ಅವರ ಆತ್ಮ–ಕ್ಕೆ ಶಾಂತಿ ಅಇಗಲಿ, ಅವರ ಅಗಲಿಕೆಯಿಂದ ಅವರ ಕುಟುಂಬಕ್ಕಾದ ನೋವು ಭರಿಸುವ ಶಕ್ತಿ ಭಗವಂತ ದಯಪಾಲಿಸಲಿ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರಸಂಘದಜಿಲ್ಲಾಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಮಾತನಾಡಿ, ಚಿಟಗುಪ್ಪ ತಾಲೂಕಿನ ನಿರ್ಣಾ ಗ್ರಾಮದ ಮಾತೋಶ್ರೀ ಸಂಗಮ್ಮ ತಾಯಿ ಹಾಗೂ ನಾಗಯ್ಯ ಸ್ವಾಮಿ ಮಠಪತಿ ಅವರ ಉದರದಲ್ಲಿ ಜೇಷ್ಟಸುಪುತ್ರರಾಗಿ 16 ಫೆರಬ್ರವರಿ 1971ರಲ್ಲಿ ಜನಿಸಿದ್ದರು. ಎರಡು ದಶಕಗಳಿಗಿಂತ ಹೆಚ್ಚು ಕಾಲ ವಿವಿಧ ಪತ್ರಿಕೆಗಳಲ್ಲಿ ಅನುಪಮ ಸೇವೆ ಸಲ್ಲಿಸಿ, ಇತ್ತಿಚೀಗೆ ಕಸ್ತುರಿ ಕಿರಣ ವಾರ ಪತ್ರಿಕೆ ಮುಖೇನ ತಮ್ಮ ಬರವಣಿಗೆ ಇನ್ನಷ್ಟು ಚುರುಕುಗೊಳಿಸಿದ್ದರು. ಮಾಧ್ಯಮ ಕ್ಷೇತ್ರದ ಜೊತೆಗೆ ನಂದಿನಿ ವಿದ್ಯಾಲಯ ಆರಂಭಿಸಿ ಶೈಕ್ಷಣಿಕ ಕ್ರಾಂತಿ ಮೂಡಿಸಿದ್ದರು. 5 ವರ್ಷಗಳ ಕಾಲ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಚಿಟಗುಪ್ಪ ತಾಲೂಕು ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು. ಅವರನ್ನುಕಳೆದುಕೊಂಡು ಬೀದರ್ ಜಿಲ್ಲೆಯ ಪತ್ರಕರ್ತರಾದ ನಾವು ಬಡವರಾಗಿದ್ದೇವೆ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಅಧ್ಯಕ್ಷತೆ ವಹಿಸಿದ್ದರು.

ಹಿರಿಯ ಪತ್ರಕರ್ತರಾದ ಗಂಧರ್ವ ಸೇನಾ, ಬಾಬುವಾಲಿ, ವಿಜಯಕುಮಾರ ಪಾಟೀಲ ಚಾಂಬೋಳ, ಶಶಿಕಾಂತ ಶೇಂಬೆಳ್ಳಿ, ನಾಗೇಶ ಪ್ರಭಾ, ಎಸ್.ಎಲ್.ರಾಮಕೃಷ್ಣ, ಮಹಾರುದ್ರ ಡಾಕುಳಗಿ, ದೇವರಾಜ, ಕರ್ನಾಟಕ ಕಾರ್ಯನಿರತಪತ್ರಕರ್ತರಸಂಘದ ಜಿಲ್ಲಾ ಉಪಾಧ್ಯಕ್ಷ ಶ್ರೀನಿವಾಸ ಚೌಧರಿ, ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಬಸವರಾಜ ಕಾಮಶೆಟ್ಟಿ, ಜಿಲ್ಲಾ ಕಾರ್ಯದರ್ಶಿ ಪ್ರಥ್ವಿರಾಜ, ಸುನಿಲಕುಮಾರ ಕುಲಕರ್ಣಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ರೇವಣಸಿದ್ದಯ್ಯ ಸ್ವಾಮಿ, ಮೌಲಾನಾಸಾಬ್, ಸಂತೋಷ ಚೆಟ್ಟಿ, ವಾರ್ತಾ ಇಲಾಖೆಯ ವಿಜಯಕೃಷ್ಣ ಸೋಲಪುರ ಹಾಗೂ ಇತರರು ಶ್ರದ್ಧಾಂಜಲಿ ಸಭೆಯಲ್ಲಿದ್ದರು.

# ಪತ್ರಕರ್ತರು ತಮ್ಮ ಮಾಧ್ಯಮ ಧರ್ಮ ಪಾಲಿಸಲಿ: ಶಿವಶರಣಪ್ಪ ವಾಲಿ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.17:–ನೈಜಪತ್ರಕರ್ತರಾದವರು ಪ್ರಾಮಾಣಿಕ ಹಾಗೂ ನಿಸ್ಪಕ್ಷಪಾತ ಬರವಣಿಗೆ ಮುಖೇನ ತಮ್ಮ ಮಾಧ್ಯಮ ಧರ್ಮ ಪಾಲಿಸತಕ್ಕದ್ದೆಂದು ಹಿರಿಯ ಪತ್ರಕರ್ತರಾದ ಶಿವಶರಣಪ್ಪ ವಾಲಿ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಜರುಗಿದ ಪ್ರಶಸ್ತಿ ಪುರಸ್ಕೃತರಿಗಾಗಿ ಜರುಗಿದ ಅಭಿನಂದನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿರುವ ಅವರು, ಪತ್ರಕರ್ತರಾದವರು ಇಂದು ವೃತ್ತಿ ಧರ್ಮ ಬಿಟ್ಟು ರಾಜಕೀಯ ಮುಖಂಡರ ಹಾಗೂ ಅಧಿಕಾರಿಗಳಗುಲಾಮರಂತೆವರ್ತಿಸುತ್ತದ್ದೇವೆ. ಪರಸ್ಪರ ದ್ವೇಷ ಸಾಧನೆಗಾಗಿ ನಮ್ಮ ನಮ್ಮಲ್ಲೆ ಬೈದಾಡಿಕೊಳ್ಳುವುದು, ಪವಿತ್ರ ಬರವಣಿಗೆ ಎಂಬುದನ್ನುಮರೆತು ಪತ್ರಕರ್ತರಾದವರು ಪತ್ರಕರ್ತರ ಮೇಲೆ ಬರೆಯುವ ದುಷ್ಟ ಚಾಳಿಯಿಂದ ಹೊರ ಬರಬೇಕು, ಸಂಬಂಧವನ್ನು ದೂರ ಸರಿಸಿ ನಮ್ಮವರು ತಪ್ಪು ಮಾಡಿದರೂ ಅವರ ವಿರೂದ್ಧ ಬರೆಯುವ ತಕತ್ತು ಬೆಳೆಸಿಕೊಂಡಾಗ ಮಾತ್ರ ಪ್ರಬುದ್ಧ ಪತ್ರಕರ್ತನಾಗಲು ಸಾಧ್ಯ ಎಂದವರು ಹೇಳಿದರು.

ಇನ್ನೋರ್ವ ಹಿರಿಯ ಪತ್ರಕರ್ತ ಗಂಧರ್ವ ಸೇನಾ ಮಾತನಾಡಿ, ಪತ್ರಕರ್ತರು ವ್ಯಕ್ತಿಯಿಂದ ಮಿಂಚದೆ ಬರವಣಿಗೆಯಿಂದ ಮಿಂಚಬೇಕು. ಮೆಚ್ಚುವಂಥ ಬರವಣಿಗೆ ಇರಬೇಕೆ ಹೊರತು ಮಿಥ್ಯ ಬರವಣಿಗೆಯಿಂದ ಸಮಾಜಕ್ಕೆ ಬೇಸರವಾಗುವ ಪತ್ರಕರ್ತನಾಗಬಾರದೆಂದು ಕಿವಿ ಮಾತು ಹೇಳಿದರು.

ಪತ್ರಕರ್ತರು ಹಾಗೂ ಮಾಜಿ ಬೂಡಾ ಅಧ್ಯಕ್ಷ ಬಾಬು ವಾಲಿ ಮಾತನಾಡಿ, ಪತ್ರಕರ್ತರಾದವರಿಗೆ ಹೊರಗೆ ಎಷ್ಟೆ ಸನ್ಮಾನವಿತ್ತರೂನಮ್ಮ ಮನೆಯಾದ ಪತ್ರಕರ್ತರ ಸಂಘದಿಂದ ಸನ್ಮಾನ ಮಾಡಿಕೊಳ್ಳುವುದು ನಮ್ಮ ಭಾಗ್ಯದಲ್ಲಿ ಬರೆದಿರಬೇಕು. ಇಂದು ಸನ್ಮಾನ ಸ್ವೀಕರಿಸುತ್ತಿರುವ ಪ್ರಶಸ್ತಿ ಪುರಸ್ಕೃತರು ನಿಜವಾದ ಧನ್ಯರು. ಈ ಕಾರ್ಯ ಮಾಡುತ್ತಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯ ಶ್ಲಾಘನಿಯ ಎಂದು ಕೊಂಡಾಡಿದರು.

ಬೀದರ್, ಕಲಬುರಗಿ ಹಾಗೂ ಯಾದಗಿರಿ ಹಾಲು ಉತ್ಪಾದಕರ ಸಂಘದ ನಿರ್ದೇಶಕ ಮಲ್ಲಿಕಾರ್ಜುನ

ಬಿರಾದಾರ ಮಾತನಾಡಿ, ಯೊಗ್ಯ ಪತ್ರಕರ್ತರಿಗೆ ಪ್ರಶಸ್ತಿ ದೊರೆತಾಗ ಅವರು ಇಡೀ ಪತ್ರಕರ್ತರ ಸಮೂಹಕ್ಕೆ ಮಾದರಿಯಾಗುವರು. ಇಲ್ಲಿ ಪ್ರಶಸ್ತಿ ಪಡೆದಿರುವವರು ನೈಜ ಪತ್ರಕರ್ತರು, ಅವರನ್ನು ಸನ್ಮಾನಿಸಿರುವ ಕಾರ್ಯ ಇಡೀ ಪತ್ರಿಕಾ ರಂಗದ ಗೌರವ ಹೆಚ್ಚಿಸಿದೆ ಎಂದರು.

ಸನ್ಮಾನ ಸ್ವೀಕರಿಸಿದ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಶಶಿಕಾಂತ ಶಂಬೆಳ್ಳಿ ಮಾತನಾಡಿ, ನನ್ನ ತವರಿನಲ್ಲಿ ನನಗೆ ಯಾವುದೇ ಅರ್ಜಿ ಹಾಕದಿದ್ದರೂ ಕಳೆದ ವರ್ಷ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಈ ವರ್ಷ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ನೀಡಿ ಗೌರವಿಸಿರುವುದು ನನ್ನ ಸೌಭಾಗ್ಯ. ಈ ನೆಲದ ಋಣ ನನ್ನ ಮೇಲಿದ್ದು, ಮುಂದೆಯೂ ನನ್ನ ಪ್ರಾಮಾಣಿಕ ಬರವಣಿಗೆಯಿಂದ ಜಿಲ್ಲೆಯ ಸೇವೆ ಮಾಡುವುದಾಗಿ ಭರವಸೆ ನೀಡಿದರು.

ಅಧ್ಯಕ್ಷತೆ ವಹಿಸಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಅಧ್ಯಕ್ಷ ಡಿ.ಕೆ ಗಣಪತಿ ಮಾತನಾಡಿ, ನಾವು ಅಧಿಕಾರಕ್ಕೆ ಬಂದಾಗಿನಿಂದ ನೊಂದ ಅನೇಕ ಪತ್ರಕರ್ತರ ಕುಟುಂಬಗಳಿಗೆ ಪರಿಹಾರ ಕೊಡಿಸುವುದು, ಹಿರಿಯ ಪತ್ರಕರ್ತರನ್ನು ಗೌರವಿಸುವುದು, ಲಿಂಗೈಕ್ಯರಾದ ಪತ್ರಕರ್ತರಿಗೆ ಶ್ರದ್ಧಾಂಜಲಿ ಕಾರ್ಯಕ್ರಮ ಹಾಗೂ ಪ್ರಸಸ್ತಿ ಪಡೆದವರಿಗೆ ಅಭಿನಂದನಾ ಸಮಾರಂಭ ಹಮ್ಮಿಕೊಂಡು ಅವರನ್ನು ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಲಿದ್ದೇವೆ ಎಂದರು. ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಮಾತನಾಡಿದರು.

ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಬಸವರಾಜ ಕಾಮಶೆಟ್ಟಿ, ಜಿಲ್ಲಾ ಉಪಾಧ್ಯಕ್ಷ ಶ್ರೀನಿವಾಸ ಚೌಧರಿ, ವಾರ್ತಾ ಇಲಾಖೆಯ ಅಧಿಕಾರಿ ವಿಜಯಕೃಷ್ಣಸೋಲಪುರ ಹಾಗೂ ಇತರರು ವೇದಿಕೆಯಲ್ಲಿದ್ದರು.

ಇದೇ ವೇಳೆ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪಡೆದ ಶಶಿಕಾಂತ ಶೆಂಬೆಳ್ಳಿ, ಗಣರಾಜ್ಯೋತ್ಸವ ಸನ್ಮಾನ ಸ್ವೀಕರಿಸಿದ ಎಸ್.ಎಲ್.ರಾಮಕೃಷ್ಣ, ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಹಾಗೂ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಪತ್ರಿಕಾ ಮಾಲಿಕರ ಹಾಗೂ ಪತ್ರಕರ್ತರ ಆರ್ಥಿಕ, ಸಾಮಾಜಿಕ ಹಾಗೂ ಔದ್ಯಮಿಕ ಸ್ಥಿತಿಗತಿಯ ಬಗ್ಗೆ ಅಧ್ಯಯನ ಮಾಡಿ ವರದಿ ನೀಡುವ ಸಮಿತಿ ಸದಸ್ಯರಾದ ಪ್ರಥ್ವಿರಾಜ.ಎಸ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಣ್ಣ ಮತ್ತು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಪರಿಷತ್ ಸದಸ್ಯರಾದ ಮಾಳಪ್ಪ ಅಡಸಾರೆ, ಕಕಾಪ ಸಂಘದ ಜಿಲ್ಲಾ ಉಪಾಧ್ಯಕ್ಷ ನಾಗಶೆಟ್ಟಿ ಧರಂಪುರ, ಕಾರ್ಯದರ್ಶಿ ಸುನಿಲಕುಮಾರ ಕುಲಕರ್ಣಿ, ಖಜಾಂಚಿ ಎಂ.ಪಿ ಮುದಾಳೆ, ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಮೌಲಾನಾಸಾಬ್, ಗೋಪಿಚಂದ್ ತಾಂದಳೆ, ರೇವಣಸಿದ್ದಯ್ಯ ಸ್ವಾಮಿ, ಸಂತೋಷ ಚೆಟ್ಟಿ, ಚಿಟಗುಪ್ಪ ತಾಲೂಕು ಅಧ್ಯಕ್ಷ ನವಿನ ಗಂಜಿ, ಪ್ರಧಾನ ಕಾರ್ಯದರ್ಶಿ ಮುಸ್ತಾಫಾ ಖಾದ್ರಿ ಸೇರಿದಂತೆ ಜಿಲ್ಲೆಯ ಹಲವಾರು ಪತ್ರಕರ್ತರು ಕಾರ್ಯಕ್ರಮದಲ್ಲಿದ್ದರು.

ಆರಂಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಸ್ವಾಮಿ ಸರ್ವರನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

# 18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ವಾಹನ ಚಲಾಯಿಸಿದರೆ ದಂಡ : ನ್ಯಾ.ಸಚಿನ್ ಕೌಶಿಕ್

ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.17:–18 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ವಾಹನ ಚಲಾಯಿಸಿದರೆ 25 ಸಾವಿರ ರೂ. ದಂಡ ಹಾಗೂ 2 ವರ್ಷ ಜೈಲು ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ ಎಂದು ಹೆಚ್ಚುವರಿ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಸಚಿನ್ ಕೌಶಿಕ್ ಅವರು ನುಡಿದರು.



ಇಂದು ಜಿಲ್ಲಾ ಕಾನೂನು ಸೇವೆ ಪ್ರಾಧಿಕಾರ, ಜಿಲ್ಲಾಡಳಿತ, ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಹಾಗೂ ಮೋಟಾರ್ ವಾಹಾನ ತರಬೇತಿ ಶಾಲೆ ಸಂಘದ ಸಂಯುಕ್ತಾಶ್ರಯದಲ್ಲಿ ನಡೆದ 36ನೇ ರಾಷ್ಟೀಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕಾರು ಚಾಲಕರು ಕಡ್ಡಾಯವಾಗಿ ಸೀಟ ಬೆಲ್ಟ್ ಹಾಕಿಕೊಂಡು ಚಾಲನೆ ಮಾಡಬೇಕು. ಮದ್ಯಪಾನ, ಧೂಮಪಾನ ಮತ್ತು ಗುಟಖಾ ತಿಂದು ಚಾಲನೆ ಮಾಡಿದರೆ ಅಪಘಾತ ಸಂಭವಿಸಬಹುದು. ಚಾಲಕರು ನಶೆ ಮಾಡದೇ ವಾಹನ ಚಲಾಯಿಸಬೇಕು. ಕಡ್ಡಾಯವಾಗಿ ವಿಮಾ ಮಾಡಿಸಬೇಕು. ಒಂದು ವೇಳೆ ರಸ್ತೆ ಅಪಘಾತವಾದರೆ ವಾಹನದ ಮೇಲೆ ವಿಮೆ ಇಲ್ಲದೇ ಹೋದರೆ ಅಪಘಾತಕ್ಕೊಳಗಾದ ವ್ಯಕ್ತಿಗೆ ದಂಡದ ಹಣ ಕಟ್ಟಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಧೀಶ ಹಾಗು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದ್ಯಸ ಕಾರ್ಯದರ್ಶಿ ಪ್ರಕಾಶ್ ಬನ್ಸೋಡೆ ಅವರು ಮಾತನಾಡಿ, ರಸ್ತೆ ಮೇಲೆ ಬರುವ ಪಾದಚಾರಿಗಳು ರಸ್ತೆಬದಿ ಇರುವ ಫುಟಪಾತ್ ಉಪಯೋಗಿಸಬೇಕು. ಕಡ್ಡಾಯವಾಗಿ ರಸ್ತೆ ಸಂಚಾರ ನಿಯಮಗಳನ್ನು ತಪ್ಪದೆ ಪಾಲಿಸುವುದರಿಂದ ರಸ್ತೆ ಅಪಘಾತ ಕಡಿಮೆ ಮಾಡಲು ಸಾಧ್ಯ ಎಂದರು.

ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ್ ಶಿಲವಂತ್ ಅವರು ಮಾತನಾಡಿ, ದ್ವಿಚಕ್ರ ವಾಹಾನದ ಮೇಲೆ ಇಬ್ಬರಿಗಿಂತ ಹೆಚ್ಚು ವಿಧ್ಯಾರ್ಥಿಗಳು ಸವಾರಿ ಮಾಡಬಾರದು. ಅಪಘಾತಕ್ಕೆ ಒಳಗಾದ ವ್ಯಕ್ತಿಗೆ ಮೊದಲು ತಲೆಗೆ ಪೆಟ್ಟು ಬಿಳುವುದು ಆದುದರಿಂದ ಕಡ್ಡಯವಾಗಿ ಹೆಲ್ಮೆಟ್ ಧರಿಸಿ ಚಾಲನೆ ಮಾಡಬೇಕು. ವಾಹನ ಅತಿ ವೇಗವಾಗಿ ಓಡಿಸಬಾರದು ಎಂದು ತಿಳಿಸಿದರು.

ಜಂಟಿ ಸಾರಿಗೆ ಅಯುಕ್ತ ಸಿದ್ದಪ್ಪಾ ಎಚ್ ಕಲ್ಲೇರ್ ಅವರು ಮಾತನಾಡಿ, ರಸ್ತೆ ಅಪಘಾತಗಳಿಂದ ಲಕ್ಷಾಂತರ ಜನ ಅಂಗವಿಕಲರಾಗುತ್ತಿದ್ದಾರೆ. ಪಯಣಿಸುವಾಗ ಸವಾರರು ಮೊಬೈಲ್ ಬ್ಲುಟುಥ್, ಹೆಡ್ ಫೋನ್ ಬಳಸಬಾರದು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ್ ಬಿರಾದರ್, ಮೋಟಾರ್ ವಾಹನ ತರಬೇತಿ ಶಾಲೆಯ ಸಂಘದ ಅಧ್ಯಕ್ಷ ಪ್ರಕಾಶ್ ಗುಮ್ಮೆ, ಹಿರಿಯ ಮೋಟಾರ್ ವಾಹನ ನಿರೀಕ್ಷಕ ಪ್ರವಿಣ್, ಸಿ. ಈರಮ್ಮಾ, ಅಶ್ವಿನ್ ರೆಡ್ಡಿ, ಸಂಘದ ರಾಜ್ಯ ಉಪಾಧ್ಯಕ್ಷ ಶಿವರಾಜ್ ಜಮಾದಾರ್, ಮಲ್ಲಿಕಾರ್ಜುನ್, ಸುಧಾಕರ ಬಿರಾದಾರ್ ಹಾಗೂ ಉಮೇಶ ಘುಳೆ ಸೇರಿದಂತೆ ಇತರರು ಭಾಗವಹಿಸಿದ್ದರು.

# ಇಂದು ಶ್ರೀ ಅಂಬಾಭವಾನಿ ದೇವಸ್ಥಾನ ಉದ್ಘಾಟನೆ ಹಾಗೂ ಧರ್ಮಸಭೆ

ತಾಳಿಕೋಟಿ:ಪಟ್ಟಣದಗೊಂದಳಿ ಸಮಾಜದ ಆರಾಧ್ಯ ದೈವ ಶ್ರೀ ಅಂಬಾ ಭವಾನಿ ನೂತನ ದೇವಸ್ಥಾನದ ಉದ್ಘಾಟನೆ, ಮೂರ್ತಿ ಪ್ರತಿಷ್ಟಾಪನೆ ಹಾಗೂ ಧರ್ಮಸಭೆ ಇಂದು (ಫೆ.18) ಮಂಗಳವಾರ ಜರುಗಲಿದೆ. ಬೆಳಿಗ್ಗೆ 10:30 ಘಂಟೆಗೆ ಧರ್ಮಸಭೆಯಕಾರ್ಯಕ್ರಮಗಳು ಆರಂಭವಾಗಲಿದ್ದು ದಿವ್ಯ ಸಾನಿಧ್ಯವನ್ನು ಖಾಸ್ಗತೇಶ್ವರ ಮಠದ ಶ್ರೀ ಸಿದ್ಧಲಿಂಗದೇವರು ವಹಿಸುವರು. ಗುಂಡಕನಾಳ ಬ್ರಹನ್ ಮಠದ ಶ್ರೀ ಷ.ಬ್ರ. ಗುರುಲಿಂಗಶಿವಾಚಾರ್ಯರು, ವು.ನಿ.ಪ್ರ.ಶಿವಕುವಾರ ಮಹಾಸ್ವಾಮಿಗಳು ಕೊಡೆಕಲ್, ಅನ್ನದಾನೇಶ್ವರ ಹಿರೇಮಠ ಹಿರೂರದಷ.ಬ್ರ.ಶ್ರೀಜಯಸಿದ್ದೇಶ್ವರ ಮಹಾಸ್ವಾಮಿಗಳು,ವಡವಡಗಿನಂದಿ ಮಠದಮ.ನಿ.ಪ.ಶ್ರೀ ವೀರಸಿದ್ದ ಮಹಾಸ್ವಾಮಿಗಳು,ಕುಂಟೋಜಿ ಭಾವೈಕ್ಯತಾ ಹಿರೇಮಠದ ಶ್ರೀ ಷ.ಬ್ರ.ಡಾ.ಗುರು ಚನ್ನವೀರ ಶಿವಾಚಾರ್ಯರು,ಅರ್ಚಕ ಶ್ರೀ ವೇ.ಮೂ. ಸಂತೋಷ್ ಭಟ್ ಜೋಶಿ ಪಾವನ ಸಾನಿಧ್ಯ ವಹಿಸುವರು. ಕೆಎಸ್‌ಡಿಎಲ್ ಅಧ್ಯಕ್ಷರು, ಮುದ್ದೇಬಿಹಾಳ ಶಾಸಕ ಸಿ.ಎಸ್.ನಾಡಗೌಡ(ಅಪ್ಪಾಜಿ) ಸಮಾರಂಭವನ್ನು



ಉದ್ಘಾಟಿಸುವರು.ಗೊಂದಳಿ ಸಮಾಜದ ಅಧ್ಯಕ್ಷ ವಿಠಲ ರಾಮು ಸೂರ್ಯವಂಶಿ, ಗೊಂದಳಿ ಸಮಾಜ ಮೈಸೂರು ರಾಜ್ಯಾಧ್ಯಕ್ಷ ಕೆ. ಜಯರಾಮಯ್ಯ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕ ಎ.ಎಸ್.ಪಾಟೀಲ(ನಡಹಳ್ಳಿ). ಅತಿಥಿಗಳಾಗಿ ಪುರಸಭೆ ಸದಸ್ಯೆ ಅಕ್ಕಮಹಾದೇವಿ ಕಟ್ಟಿಮನಿ, ಸುರೇಶ್ ಭಿಸ್ಸೆ ವಿಜಯಪುರ, ಅಂಬಾಜಿ ಜೋಶಿ ಬಾಗಲಕೋಟ, ಯಶೋಧಾ ಇಂಗಳೆ ನಾಗರಾಳ,ಸಿಪಿಐ ಕಾರಟಗಿ ಪ್ರದೀಪ್ ಬಿಸ್ಸೆ, ಕಲಬುರ್ಗಿ ಗೋವಿಂದ ಭಟ್, ಕುಷ್ಟಗಿ ತುಕಾರಾಂ ಸುರ್ವೆ, ನಾಲತವಾಡ ಶಿಕ್ಷಕ ಚೆನ್ನಪ್ಪ ಗೊಂದಳಿ, ನಾರಾಯಣ ಗಣಪತಿ ದುರವೇ, ಗ್ರಾಪಂ ಮಾಜಿ ಅಧ್ಯಕ್ಷ ತುಕಾರಾಂ ಗೊಂದಳಿ, ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ, ಕಾಂಗ್ರೆಸ್ ಮುಖಂಡ ಪ್ರಭುಗೌಡ ಮದರ್ಕಲ್, ಕಾಂಗ್ರೆಸ್ ಜಿಲ್ಲಾ ಕಾರ್ಯದರ್ಶಿ ವಿಜಯಸಿಂಗ್ ಹಜೇರಿ, ನೀಲಮ್ಮ ಶಂ.ಪಾಟೀಲ ಹಾಗೂ ತಾಳಿಕೋಟಿ ಮುಸ್ಲಿಂ ಸಮಾಜ ಧಾರ್ಮಿಕ ಮುಖಂಡ ಸೈಯದ್ ಶಕೀಲ ಅಹ್ಮದ್ ಖಾಜಿ, ಸಂಭಾಜಿ ವಾಡಕರ, ಹರಿಸಿಂಗ್ ಮೂಲಿಮನಿ, ಭೀಮರಾವ್ ಕುಲಕರ್ಣಿ, ಮಲ್ಲಾರಿ ದರ್ಜಿ, ಬಾಬುರಾವ್ ಚಿತಾಪೂರ, ನಾರಾಯಣ ಹಿಂಗಮೊರೆ, ಲಕ್ಷ್ಮಣ್ ಕಲಾಲ, ಕಕುಸಾ ರಂಗರೇಜ,ಡಾ. ಎನ್.ಎಲ್.ಶೆಟ್ಟಿ,ಡಿ.ಪಿ.ಧನಪಾಲ,ಡಾ. ಆರ್.ಪಿ.ಅಗರವಾಲ,ಚಂದ್ರಶೇಖರ್ ದೊಡ್ಮನಿ, ಹುಲಗಪ್ಪ ಕಟ್ಟಿಮನಿ, ಮುದಕನಗೌಡ ಪಾಟೀಲ, ಬಾಳು ಬಕ್ಷಿ,ಮಾಸೂಮಸಾಬ ಕೆಂಭಾವಿ, ಸಂಜೀವಪ್ಪ ಬರದೇನಾಳ, ಪರುಶುರಾಮ ಹೊಟಗಾರ, ಸಂದೀಪ ಗೋರೆ, ರಮೇಶ್ ಮೂಕಿಹಾಳ,ಯಮನಪ್ಪ ಕಟ್ಟಿಮನಿ ಹಾಗೂ ಗುರುಹಿರಿಯರು ಉಪಸ್ಥಿತರಿರುವರು ಎಂದು ಗೊಂದಳಿ ಸಮಾಜದ ಅಧ್ಯಕ್ಷ ವಿಠ್ಠಲ್ ರಾಮು ಸೂರ್ಯವಂಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವರಾದ ಎನ್.ಎಸ್.ಬೋಸರಾಜು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆಬ್ರವರಿ 17–ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಫೆ.18 ಮತ್ತು ಫೆ.19ರಂದು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಫೆ.18ರಂದು ಬೆಳಗ್ಗೆ 9 ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ ಬೆಳಗ್ಗೆ 10 ಗಂಟೆಗೆ ರಾಂಪೂರ ಜಲಾಶಯದ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡುವರು. ಬಳಿಕ ರಾಯಚೂರಿನ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗಿಯಾಗುವರು. ಮಧ್ಯಾಹ್ನ 1.30ಕ್ಕೆ ರಾಯಚೂರಿನಿಂದ ನಿರ್ಗಮಿಸಿ ಸಿರವಾರ ತಾಲೂಕಿಗೆ ತೆರಳಿ ಮಾನವಿ ವಿಧಾನಸಭಾ ಕ್ಷೇತ್ರದ ಶಾಸಕರೊಂದಿಗೆ ಸಿರವಾರ ತಾಲೂಕಿನ ನವಲಕಲ್–ಘಟಕನದೊಡ್ಡಿ–ಕುರಕುಂದಾ–ಕಸಮದೊಡ್ಡಿ–ಹೀರಾ–ಹೂಡಾ ಗ್ರಾಮಗಳಲ್ಲಿ ಲೋಕೋಪಯೋಗಿ ಮತ್ತು ಪಂಚಾಯತ್ ರಾಜ್ಯ ಎಂಜಿನಿಯರಿಂಗ್ ಇಲಾಖೆ ಹಾಗೂ ಕೆಕೆಆರ್‌ಡಿಬಿ ಮತ್ತು ಇತರೆ ಇಲಾಖೆಗಳಿಂದ ಕೈಗೊಳ್ಳಲಾಗುವ ರಸ್ತೆ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಮತ್ತು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 5 ಗಂಟೆಗೆ ಕವಿತಾಳಗೆ ತೆರಳಿ ಕವಿತಾಳ ಪಟ್ಟಣದಲ್ಲಿ ಕ್ರೀಡಾಂಗಣ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆ ಸಮಾರಂಭದಲ್ಲಿ ಭಾಗವಹಿಸುವರು. ಸಂಜೆ 6 ಗಂಟೆಗೆ ಕವಿತಾಳದಿಂದ ನಿರ್ಗಮಿಸಿ ರಾಯಚೂರಿಗೆ ಆಗಮಿಸಿ ವಾಸ್ತವ್ಯ ಮಾಡುವರು.

ಫೆ.19ರಂದು ಬೆಳಗ್ಗೆ 9 ಗಂಟೆಗೆ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಬಳಿಕ ಬೆಳಗ್ಗೆ 11 ಗಂಟೆಗೆ ಟಿಪ್ಪು ಸುಲ್ತಾನ ವೃತ್ತದಲ್ಲಿನ ತಮ್ಮ ಕಚೇರಿಯಲ್ಲಿ ಸ್ಥಳೀಯ ಅಧಿಕಾರಿಗಳೊಂದಿಗೆ ಸಭೆ ನಡೆಸುವರು.

# ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಸಾಲ ವಿತರಣೆ ಮಾಡಲು ಕ್ರಮವಹಿಸಬೇಕು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.17:ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಕಲಬುರಗಿ ನಗರದ ಐವಾನ್ ಶಾಹಿ ಅತಿಥಿಗೃಹದಲ್ಲಿ ಭಾನುವಾರ ಕೌಶಲ್ಯಾಭಿವೃದ್ಧಿ ಇಲಾಖೆಯ ಎನ್.ಆರ್.ಎಲ್.ಎಮ್.(ಓಖಐಒ)ಯೋಜನೆ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಸಿದರು.

ಜಿಲ್ಲೆಯಲ್ಲಿ ಸ್ವ-ಸಹಾಯ ಸಂಘಗಳ ಬ್ಯಾಂಕ್ ಲಿಂಕೇಜ್ ಕುಂಠಿತದ ಬಗ್ಗೆ ಅಸಮಾದಾನ ವ್ಯಕ್ತಪಡಿಸಿದ ಅವರು,ಮುಂದಿನ ಒಂದು ತಿಂಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಬ್ಯಾಂಕ್ ಶಾಖಾ ವ್ಯವಸ್ಥಾಪಕರು ಮತ್ತು ಜೆಪಿಎಲ್‌ಎಫ್ ಪದಾಧಿಕಾರಿಗಳು ಸಭೆ ನಡೆಸಿ, ಜಿಲ್ಲೆಯ ನಿಗದಿತ ಗುರಿಯಂತೆ ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಸಂಪರ್ಕ ಮೂಲಕ ಸಾಲ ವಿತರಣೆ ಮಾಡಲು ಕ್ರಮವಹಿಸಬೇಕು ಎಂದರು.

ಗ್ರಾಮ ಮಟ್ಟದಲ್ಲಿ ಅರಿವು ಕಾರ್ಯಕ್ರಮ ಹಮ್ಮಿಕೊಂಡು ಗೃಹಲಕ್ಷ್ಮಿ ಫಲಾನುಭವಿಗಳು, ನರೇಗಾ ಫಲಾನುಭವಿಗಳು ಮತ್ತು ಅರ್ಹ ಫಲಾನುಭವಿಗಳು ಸೇರ್ಪಡೆಗೆ ಸೂಕ್ತ ಕ್ರಮವಹಿಸಬೇಕು. ನಿಯಮಾನುಸಾರ ಜಿಪಿಎಲ್‌ಎಫ್ ವಾರ್ಷಿಕ ಸಭೆ ಮತ್ತು ಅವಧಿ ಪೂರ್ಣವಾದ ಪದಾಧಿಕಾರಿಗಳ ಬದಲಾವಣೆ ಮಾಡಿ ಸಮುದಾಯ ಬಂಡವಾಳ ನಿಧಿ ಸರ್ಮಪಕವಾಗಿ ಬಳಕೆ ಮಾಡಲು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರಸ್ತುತ ಸಾಮಾಜಿಕ ಆಂದೋಲನ ಅಭಿಯಾನದ ಮೂಲಕ ಸ್ವ-ಸಹಾಯ ಸಂಘದಿಂದ ಹೊರಗುಳಿದ ಕುಟುಂಬಗಳಲ್ಲಿ 70,000 ಮಹಿಳಾ ಸದಸ್ಯರನ್ನು ಸ್ವ-ಸಹಾಯ ಸಂಘದಲ್ಲಿ ಸೇರ್ಪಡೆಗೆ ಕ್ರಮವಹಿಸಲಾಗುತ್ತಿದೆ. ಜಿಲ್ಲೆಯ ಎನ್‌ಆರ್‌ಎಲ್‌ಎಂ ಸ್ವ-ಸಹಾಯ ಸಂಘಗಳಿಗೆ ಬ್ಯಾಂಕ್ ಲಿಂಕೇಜ್ ಮೂಲಕ ಒಟ್ಟು 25 ಕೋಟಿ ರೂ. ಗಳ ಸಾಲ ಸೌಲಭ್ಯ ಒದಗಿಸಲಾಗಿದ್ದು, ಕೃಷಿ ಜೀವನೋಪಾಯ ಮತ್ತು ಕೃಷಿಯೇತರ ಜೀವನೋಪಾಯ ಚಟುವಟಿಕೆಯಲ್ಲಿ ಸ್ವ-ಸಹಾಯ ಸಂಘಗಳ ಸದಸ್ಯರು ತೊಡಗಿರುವ ಆದಾಯ ಉತ್ಪನ್ನ ಚಟುವಟಿಕೆಗಳ ಬಗ್ಗೆ ವಿವರಿಸಿದರು.

ಸಭೆಯಲ್ಲಿ ಕೌಶಲ್ಯಾಭಿವೃದ್ಧಿ ಇಲಾಖೆಯ ಡಿಎಸ್‌ಡಿಓ, ಜಿಟಿಟಿಸಿ ಅಧಿಕಾರಿಗಳು, ಜಿಲ್ಲೆಯ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ಡಿಎಂಎಂಯು ಟಿಎಂಎಂಯು ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಕಲಬುರಗಿ ಜಿಪಂ ಡಿಆರ್‌ಡಿಎ ಯೋಜನಾ ನಿರ್ದೇಶಕ ಜಗದೇವ ಸ್ವಾಗತಿಸಿದರು. ಡಿಪಿಎಂ ರಾದ ಲೋಹಿತ ಅವರು ವಂದಿಸಿದರು.

# ಸಂಶೋಧಕರು ನೈಸರ್ಗಿಕ, ಸಾವಯವ ಕೃಷಿಯ ಮೌಲ್ಯಮಾಪನ ಮಾಡಲಿ: ಕುಲಪತಿ ಡಾ.ಎಂ.ಹನುಮಂತಪ್ಪ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ17:ನೈಸರ್ಗಿಕ ಮತ್ತು ಸಾವಯವ ಕೃಷಿಯನ್ನು ಎಲ್ಲಿ ಅಳವಡಿಸಬೇಕು ಎಂಬುದನ್ನು ಸಂಶೋಧಕರು ವಿಮರ್ಶಾತ್ಮಕವಾಗಿ ಮೌಲ್ಯಮಾಪನ ಮಾಡಬೇಕು. ಅಲ್ಲದೆ ಸುಸ್ಥಿರ ಕೃಷಿ ಪದ್ಧತಿಗಳ ಕುರಿತು ಸಾರ್ವಜನಿಕರಿಗೆ ತಿಳಿಹೇಳಬೇಕೆಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಂ. ಹನುಮಂತಪ್ಪ ಅವರು ಹೇಳಿದರು.

ಫೆ.17ರ ಸೋಮವಾರ ದಂದು ನಗರದ ಕೃಷಿ ವಿವಿಯ ಸಾವಯವ ಕೃಷಿ ಸಂಶೋಧನಾ ಸಂಸ್ಥೆಯ ಸಮ್ಮೇಳನ ಸಭಾಂಗಣದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಇಂಡಿಯನ್ ಕೌನ್ಸಿಲ್ ಆಫ್ ಅಗ್ರಿಕಲ್ಚರಲ್ ರಿಸರ್ಚ್ ನವದೆಹಲಿ ಪ್ರಾಯೋಜಿತ ಚಳಿಗಾಲದ ಸುಸ್ಥಿರ ಮಣ್ಣಿನ ಆರೋಗ್ಯ ಮತ್ತು ಜೀವನೋಪಾಯದ ಭದ್ರತೆಗಾಗಿ ಸಾವಯವ ಕೃಷಿ ಮತ್ತು ನೈಸರ್ಗಿಕ ಕೃಷಿಯ ತಾಂತ್ರಿಕ ಸಾಧನೆ, ಸಂಶೋಧನಾ ಆದ್ಯತೆ ಮತ್ತು ಭವಿಷ್ಯದ ಕಾರ್ಯತಂತ್ರಗಳು ಕುರಿತು ಫೆ.17ರಿಂದ ಮಾರ್ಚ್ 09ರವರೆಗೆ ನಡೆಯುವ ಕಾರ್ಯಾಗಾರ–ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತೀವ್ರವಾದ ಏಕಬೆಳೆ ಕೃಷಿಯಿಂದಾಗಿ ಮಣ್ಣಿನ ಫಲವತ್ತತೆ ಕುಸಿತ ಮತ್ತು ಜೀವವೈವಿಧ್ಯ ನಷ್ಟದಿಂದ ಉಂಟಾಗುವ ಸವಾಲುಗಳ ಕುರಿತು ಜನಸಾಮಾನ್ಯರಿಗೆ ಅರಿವು ಮೂಡಿಸಬೇಕು. ಭಾರತಾದ್ಯಂತ ಸಾವಯವ ಇಂಗಾಲದ ಮಟ್ಟವು ಸ್ಥಿರವಾಗಿ ಕಡಿಮೆಯಾಗುತ್ತಿದೆ. ಮಣ್ಣಿನ ಫಲವತ್ತತೆಯನ್ನು ಪುನಃ ಸ್ಥಾಪಿಸಲು ಬೆಳೆ ಪರಿವರ್ತನೆ ಮತ್ತು ಸಾವಯವ ಪದ್ಧತಿಯನ್ನು ರೈತರು ಅಳವಡಿಸಿಕೊಳ್ಳಬೇಕು. ಗುಜರಾತ್ ಮಾದರಿ ಮತ್ತು ಇ–ಶಾಪ್ ತಂತ್ರಜ್ಞಾನದಂತಹ ಸುಧಾರಿತ ಮಣ್ಣಿನ ಪರೀಕ್ಷಾ ತಂತ್ರಜ್ಞಾನಗಳ ಪಾತ್ರದ ಬಗ್ಗೆ ಅವರು ಒತ್ತಿ ಹೇಳಿದರು.

ವಿಶ್ವವಿದ್ಯಾನಿಲಯದ ಐಸಿಎಆರ್ ಮೂರು ಚಳಿಗಾಲದ ಕೋರ್ಸ್‌ಗಳಿಗೆ ಮಂಜೂರಾತಿ ನೀಡಿದೆ. ಅವುಗಳಲ್ಲಿ ಒಂದು ಈಗಾಗಲೇ ಕೀಟನಾಶಕ ಶೇಷ ನಿರ್ವಹಣೆ ಮತ್ತು ಗುಣಮಟ್ಟ ವಿಶ್ಲೇಷಣೆಯ ಕುರಿತು ಪೂರ್ಣಗೊಂಡಿದೆ. ಉಳಿದ ಎರಡು ಕೊಯ್ಲು ನಂತರದ ತಂತ್ರಜ್ಞಾನ ಮತ್ತು ಆಹಾರ ಸಂಸ್ಕರಣೆಯ ಮೇಲೆ ಕೇಂದ್ರೀಕೃತವಾಗಿವೆ. ಇದು ಕೃಷಿ ಸಂಶೋಧನೆಯನ್ನು ಮುನ್ನಡೆಸುವ ಸಂಸ್ಥೆಯ ಬದ್ಧತೆಯನ್ನು ಪ್ರದರ್ಶಿಸುತ್ತದೆ. ಸುಸ್ಥಿರ ಕೃಷಿಯ ಕುರಿತು ಸಮಗ್ರ ಚರ್ಚೆಯನ್ನು ಖಚಿತಪಡಿಸಿಕೊಳ್ಳಲು ತಜ್ಞರ ಉಪನ್ಯಾಸಗಳನ್ನು ಬಹಳ ಜಾಗರೂಕತೆಯಿಂದ ಆಯೋಜನೆ ಮಾಡಬೇಕೆಂದರು.

ತೀವ್ರ ಕೃಷಿ ಪದ್ಧತಿಯ ಕಾರಣದಿಂದಾಗಿ ಮಣ್ಣಿನ ಸಾರ್ವತ್ರಿಕ ಫಲವತ್ತತೆ ಮತ್ತು ಜೈವಿಕ ಕಾರ್ಬನ್ ಅಂಶದ ಪ್ರಮಾಣ ಕಡಿಮೆಯಾಗುತ್ತಿದೆ. ಒಂದೇ ಬೆಳೆ ಸತತ ಬೆಳೆಸುವ ಪದ್ಧತಿ ಹೆಚ್ಚುತ್ತಿದೆ. ನಾವು ಮಣ್ಣಿನ ಭೌತಿಕ, ರಸಾಯನಿಕ ಮತ್ತು ಜೈವಿಕ ಗುಣಗಳನ್ನು ಸಮತೋಲನದಲ್ಲಿರಿಸುವ ಮಾರ್ಗಗಳನ್ನು ಅನ್ವೇಷಿಸಬೇಕಾಗಿದೆ. ಅಲ್ಲದೆ ಮಣ್ಣಿನ ಪೋಷಕಾಂಶ ಕೊರತೆಗಳನ್ನು ತಕ್ಷಣ ನಿಗಿಸಬೇಕು. ಶ್ರೀಲಂಕಾದ ನೈಸರ್ಗಿಕ ಕೃಷಿ ಅನುಭವವನ್ನು ಆಧರಿಸಿ ಸೂಕ್ತ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗಿದೆ ಎಂದು ಸಲಹೆ ನೀಡಿದರು.

21 ದಿನಗಳ ಕಾಲ ಕಾರ್ಯಾಗಾರ: ಫೆ.17ರಿಂದ ಮಾರ್ಚ್ 09ರವರೆಗೆ ಸುಮಾರು 21ದಿನಗಳ ಕಾಲ ನಡೆಯುವ ಕಾರ್ಯಾಗಾರದಲ್ಲಿ ಸಾವಯವ ಕೃಷಿ, ಮಣ್ಣಿನ ಆರೋಗ್ಯ, ಕೃಷಿಯಲ್ಲಿ ತಂತ್ರಜ್ಞಾನ ಬಳಕೆ, ಆರೋಗ್ಯ ವೃದ್ಧಿ ಸೇರಿದಂತೆ ಹತ್ತಾರು ವಿಚಾರಗಳು ಚರ್ಚೆ ನಡೆಯಲಿವೆ. ಈ ಕಾರ್ಯಾಗಾರದಲ್ಲಿ ದೇಶದ ವಿವಿಧ ಮೂಲೆಗಳಿಂದ ಆಗಮಿಸಿದ ಕೃಷಿ ವಿಜ್ಞಾನಿಗಳು ತಮ್ಮ ವಿಚಾರ ಮಂಡಿಸಲಿದ್ದಾರೆ.

# ಶರಣಬಸವೇಶ್ವರ ನೂತನ ರಥೋತ್ಸವಕ್ಕೆ ಅದ್ದೂರಿ ಚಾಲನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಫೆ.17:ಯಲಬುರ್ಗಾ ತಾಲೂಕಿನ ಗೆದಿಗೇರಿ ಗ್ರಾಮದಲ್ಲಿ ಶ್ರೀ ಶರಣಬಸವೇಶ್ವರನ ನೂತನ ರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಮೈಸೂರು ಸಂಸ್ಥಾನ ಮಠದ ವಿಜಯ ಮಹಾಂತೇಶ್ವರ ಶ್ರೀಗಳು ಶ್ರೀ ಅನ್ನದಾನೇಶ್ವರ ಮಠದ ಕರಿಬಸವ ಶ್ರೀಗಳು ದಿವ್ಯ ಸಾನಿಧ್ಯವನ್ನು ವಹಿಸಿದ್ದರು.

ಸುಮಾರು ವರ್ಷಗಳಿಂದ ಶ್ರೀ ಮಠದ ಭಕ್ತರ ಕನಸು ನನಸಾಯಿತು ಸುಮಾರು ಸುಮಾರು 45 ಲಕ್ಷ ರೂಪಾಯಿ ವೆಚ್ಚದಲ್ಲಿ ಮಹಾ ರಥ ಸಿದ್ಧಗೊಂಡಿರುತ್ತದೆ ಎಂದು ವಿಜಯ ಮಹಾಂತೇಶ್ವರ ಮಹಾಸ್ವಾಮಿಗಳು ಹೇಳಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರಿಬಸವೇಶ್ವರ ಶ್ರೀಗಳು ಗೆದಿಗೇರಿ ಗ್ರಾಮವು ಒಂದು ಚಿಕ್ಕಹಳ್ಳಿಯಾಗಿ ಸಾವಿರಾರು ಭಕ್ತರ ಕಣ್ಮಣಿ ಸೆಳೆಯುವ ಹಾಗೆ ಮಹಾ ರಥೋತ್ಸವವನ್ನು ಕಂಡು ಹೀಗೆ ಮುಂಬರುವ ದಿನಗಳಲ್ಲಿ ಶ್ರೀಮಠದ ಕಾರ್ಯಕ್ರಮ ಮುಂದುವರೆಯಲಿ ಎಂದು ನುಡಿದರು. ಈ ಸಂದರ್ಭದಲ್ಲಿ ಸುತ್ತಮುತ್ತಲಿನ ಗ್ರಾಮಸ್ಥರು ಶರಣಬಸವೇಶ್ವರ ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಕುಂಭಮೇಳಕ್ಕೆ ಹೋಗಿ ವಾಪಸ್ಸು ಬರುವಾಗ ಹೃದಯಾಘಾತ ವ್ಯಕ್ತಿ ಮೃತ್ಯು



ಕಂಟೆಪ್ಪಾ ಜಿರ್ಗೆ ಅವರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 17: ಉತ್ತರ ಪ್ರದೇಶದ ಪ್ರಯಾಗರಾಜ್‌ನ ಮಹಾ ಕುಂಭಮೇಳಕ್ಕೆ ಹೋಗಿ ವಾಪಸ್ಸು ಬರುವಾಗ ಹೃದಯಾಘಾತದಿಂದ ವ್ಯಕ್ತಿಯೊಬ್ಬರು ಮೃತಪಟ್ಟ ಘಟನೆ ನಡೆದಿದೆ.

ಕಮಲನಗರ್ ತಾಲ್ಲೂಕಿನ ಠಾಣಕುಶನೂರು ಗ್ರಾಮದ ನಿವಾಸಿ ಕಂಟೆಪ್ಪಾ ಜಿರ್ಗೆ (65) ಮೃತಪಟ್ಟ ವ್ಯಕ್ತಿ ಎಂದು ತಿಳಿದುಬಂದಿದೆ.

ಕಂಟೆಪ್ಪಾ ಜಿರ್ಗೆ ಅವರು ಪ್ರಯಾಗರಾಜ್ ಮಹಾ ಕುಂಭಮೇಳಕ್ಕೆ ಹೋಗಿ ವಾಪಸ್ ಬರುತ್ತಿದ್ದಾಗ ಉತ್ತರ ಪ್ರದೇಶದ ಕಾಶಿಯಲ್ಲಿ ಬುಧವಾರ ಸುಮಾರು 11 ಗಂಟೆಗೆ ಹೃದಯಘಾತದಿಂದ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ.

ಮೃತರು ಧರ್ಮಪತ್ನಿ, ಮೂರು ಜನ ಅಣ್ಣಂದಿರು, ಓರ್ವ ತಮ್ಮ, ಮೂವರು ಅಕ್ಕಂದಿರು, ನಾಲ್ಕು ಹೆಣ್ಣುಮಕ್ಕಳು ಹಾಗೂ ಓರ್ವ ಗಂಡು ಮಗ ಸಮೇತ ಅಪಾರ ಬಳಗವನ್ನು ಅಗಲಿದ್ದಾರೆ.

# ಅಂಬಾ ಭವಾನಿ ದೇವಸ್ಥಾನ ನೂತನ ಮೂರ್ತಿಗಳ ಭವ್ಯ ಮೆರವಣಿಗೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಫೆ.17:ಪಟ್ಟಣದ ಶ್ರೀ ಅಂಬಾಭವಾನಿ ಗೊಂದಳಿ ಸಮಾಜದ ನೂತನ ಅಂಬಾ ಭವಾನಿ ದೇವಸ್ಥಾನದಲ್ಲಿ ಪ್ರತಿಷ್ಠಾಪನೆಗೊಳ್ಳಲಿರುವ ಮೂರ್ತಿಗಳ ಭವ್ಯ ಮೆರವಣಿಗೆ ಸೋಮವಾರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಿತು. ಮುಂಜಾನೆ 10:00 ಘಂ–ಟೆಗೆ ಪಟ್ಟಣದ ಭೀಮನಭಾವಿ ತಟದ ಮೇಲೆ ಗಂಗಸ್ಥಳದ ಕಾರ್ಯಕ್ರಮಗಳು ಸಕಲ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಅರ್ಚಕ ಸಂತೋಷ್ ಭಟ್ ರ ನೇತೃತ್ವದಲ್ಲಿ ಜರುಗಿದವು. ನಂತರ ಅಲ್ಲಿಂದ ಸಕಲವಾದ್ಯ ಮೇಳ ಕಳಸ ಕುಂಭಗಳೊಂದಿಗೆ ಆರಂಭವಾದ ಮೂರ್ತಿಗಳ ಮೆರವಣಿಗೆಯು ಪಟ್ಟಣದ ಶ್ರೀ ಮಹಾರಾಣಾ ಪ್ರತಾಪ್ ಸಿಂಹ ಸರ್ಕಲ್, ವಿಠಲ ಮಂದಿರ ಮುಂಭಾಗದ ರಸ್ತೆ, ಕತ್ರಿಬಜಾರ್ ಮಾರ್ಗವಾಗಿ ಮತ್ತೆ ಗೊಂದಳಿ ಸಮಾಜದ ಶ್ರೀ ಅಂಬಾಭವಾನಿ ದೇವಸ್ಥಾನಕ್ಕೆ ತಲುಪಿತು. ಮಧ್ಯಾಹ್ನ 1 ಗಂಟೆಗೆ ಮಹಾ ಪ್ರಸಾದ ಜರುಗಿತು. ಸಂಜೆ 5:00 ಘಂಟೆಗೆ ಮೂರ್ತಿಗಳ ಜಲವಾಸ, ಧಾನ್ಯವಾಸ, ಹಾಗೂ ಶಯ್ಯಾದಿವಾಸ ನಡೆಯಿತು. ಇಂದು ಕಾರ್ಯಕ್ರಮದಲ್ಲಿ ಗೊಂದಳಿ ಸಮಾಜದ ಅಧ್ಯಕ್ಷ ವಿಠ್ಠಲ್ ಸೂರ್ಯವಂಶಿ, ಉಪಾಧ್ಯಕ್ಷ ಶಿವಾಜಿ ಸೂರ್ಯವಂಶಿ, ಗೌರವಾಧ್ಯಕ್ಷ ತುಕಾರಾಂ ಸೂರ್ಯವಂಶಿ, ಗಣ್ಯರಾದ ರಾಜು ವಾಗ್ಮರೆ, ಅಶೋಕ್ ಮುತ್ತೋದ್ಕರ್, ಪರುಶುರಾಮ್ ಪಾರುಗೆ, ಹನುಮಂತ್ ವಾಸ್ತರ್, ಅಪ್ಪಣ್ಣ ಸೂರ್ಯವಂಶಿ ಗೋವಿಂದ ಸೂರ್ಯವಂಶಿ ಸಾಯಿಬಣ್ಣ ಮೋದಕರ್ ಸದಾಶಿವನಾಯಕ್, ಕುಂಡಲೀಕ ಪಾರಿಗೆ ಹಾಗೂ ನಾಮದೇವ್ ಮಾಸ್ತರ್ ಇದ್ದರು.

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.17:ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಫೆಬ್ರವರಿ 18 ರಂದು ಮಂಗಳವಾರ ಸಂಜೆ 5 ಗಂ–ಟೆಗೆ ಕಲಬುರಗಿ ಶರಣಬಸವ ಕಾಲೇಜಿನಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಶರಣಬಸವ ವಿಶ್ವವಿದ್ಯಾಲಯ ವತಿಯಿಂದ ಏರ್ಪಡಿಸಲಾದ ಕಲ್ಯಾಣ ಕರ್ನಾಟಕ ಮೀಡಿಯಾ ಹಬ್ಬ–2025ರ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸುವರು.


ಕರ್ನಾಟಕ ಸರ್ಕಾರ
**ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂಶೋಧನೆ, ಬಳ್ಳಾರಿ.**

**2024–25 ನೇ ಸಾಲಿಗೆ ಬಳ್ಳಾರಿ ಸಂಶೋಧನಾ ವೃತ್ತ ವ್ಯಾಪ್ತಿಯ ಚಳ್ಳಕೆರೆ ವಲಯದ ವಿವಿಧ ಸಂಶೋಧನಾ ಕೇಂದ್ರಗಳಲ್ಲಿ ಬೀಜ ಸಂಗ್ರಹಣೆ ಮತ್ತು ವಿತರಣೆ ಹಾಗೂ ಮುಂಗಡ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧ ಅಲ್ಪಾವಧಿ ಟೆಂಡರ್ ಪ್ರಕಟಣೆ (ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ)**

ಈ ಕಛೇರಿ ಅಧಿಸೂಚನೆ ಸಂಖ್ಯೆ: ಉಅಸಂ.ಸಂಬ/ಬಿಜಿಟಿ/ಟೆಂಡರ್–ಸಿಆರ್–06/2024–25, ದಿನಾಂಕ 15.02.2025 ರ ಪ್ರಕಾರ 2024–25 ನೇ ಸಾಲಿನಲ್ಲಿ 2024–25 ನೇ ಸಾಲಿಗೆ ಬಳ್ಳಾರಿ ಸಂಶೋಧನಾ ವೃತ್ತ ವ್ಯಾಪ್ತಿಯ ಚಳ್ಳಕೆರೆ ವಲಯದ ವಿವಿಧ ಸಂಶೋಧನಾ ಕೇಂದ್ರಗಳಲ್ಲಿ ಬೀಜ ಸಂಗ್ರಹಣೆ ಮತ್ತು ವಿತರಣೆ ಹಾಗೂ ಮುಂಗಡ ಕಾಮಗಾರಿಗಳನ್ನು ಕೈಗೊಳ್ಳುವ ಸಂಬಂಧ ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಬಂಧ ಈ ವೃತ್ತದಲ್ಲಿ ನೊಂದಾಯಿತ ಅರಣ್ಯ ಗುತ್ತಿಗೆದಾರರಿಂದ ಇ–ಪ್ರೊಕ್ಯೂರ್‌ಮೆಂಟ್ ಪೋರ್ಟಲ್ (ತಾಂತ್ರಿಕ ಮತ್ತು ಆರ್ಥಿಕ) ಮುಖಾಂತರ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಮೊದಲನೆಯ ಟೆಂಡರ್‌ಗಾಗಿ ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 28.02.2025 ಅಲ್ಲದೇ ಮೊದಲನೆ ಟೆಂಡರ್‌ನಲ್ಲಿ ಯಾರೂ ಭಾಗವಹಿಸದಿದ್ದಲ್ಲಿ ಎರಡನೆ ಟೆಂಡರ್‌ಗಾಗಿ ಟೆಂಡರ್ ಸ್ವೀಕರಿಸುವ ಕೊನೆಯ ದಿನಾಂಕ: 09.03.2025 ಕ್ಕೆ ನಿಗದಿಪಡಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಕಚೇರಿಯ ಅವಧಿಯಲ್ಲಿ ಈ ಕಚೇರಿಗೆ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/–ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂಶೋಧನೆ, ಬಳ್ಳಾರಿ.
ಡಿಐಪಿಆರ್/ಬಳ್ಳಾರಿ/921/ಕೆಎಸ್‌ಎಂಸಿಎ/2024–25



ಕರ್ನಾಟಕ ಸರ್ಕಾರ
**ಜಿಲ್ಲಾ ಪಂಚಾಯತ್, ಬೀದರ.**
**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ**
**ಸಹಾಯಕ ನಿರ್ದೇಶಕರ ಕಛೇರಿ, ನೆಹರು ಕ್ರೀಡಾಂಗಣ ಬೀದರ –585401**
ದೂರವಾಣಿ ಹಾಗೂ ಫ್ಯಾಕ್ಸ್: 08482–226681. adyssbdr@yahoo.in

ಸಂಖ್ಯೆ: ಸನಿ/ಯುಸೇಕ್ರೀಇ/ಬಿ/ಸಿಆರ್:– /2024–25. ದಿನಾಂಕ: 14/02/2025

**ಟೆಂಡರ್ ಜಾಹಿರಾತು**
**(ಇ ಪ್ರೊಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ ಮಾತ್ರ)**

ಬೀದರ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಕ್ರೀಡಾ ಮತ್ತು ಸಂಗೀತ ಸಾಮಗ್ರಿ ಕೊಳ್ಳಲು ತಯಾರಕರು ಮತ್ತು ಸರಬರಾಜುದಾರರಿಂದ ಟೆಂಡರ್ ಅಹ್ವಾನಿಸಲಾಗಿದೆ. ಇ–ಸಂಗ್ರಹಣೆ ಪೋರ್ಟಲ್ www.kppp.karnataka.gov.in ಮುಖಾಂತರ ದಿನಾಂಕ: 14/02/2025 ರಂದು ಮಧ್ಯಾಹ್ನ 3:00 ಗಂಟೆಯಿಂದ ದಿನಾಂಕ: 24/02/2025 ರಂದು ಸಾಯಂಕಾಲ 5:00 ಗಂಟೆಯವರೆಗೆ Upload ಮಾಡಬಹುದು. ಆಸಕ್ತಿಯುಳ್ಳವರು ಟೆಂಡರ್ ಸಲ್ಲಿಸಲು ಕೋರಿದೆ. ಟೆಂಡರ್ ಮೊತ್ತ ರೂ. 12.80 ಲಕ್ಷ ಮತ್ತು ಇ.ಎಂ.ಡಿ. ರೂ. 32000/– ಹಾಗೂ ಟೆಂಡರ್ ಫೀ ರೂ. 500/–

ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೀದರ ರವರನ್ನು ಖುದ್ದಾಗಿ ಅಥವಾ ದೂರವಾಣಿ ಸಂ. 08482–226681 ಗೆ ಸಂಪರ್ಕಿಸಲು ಕೋರಿದೆ.

1) ತಾಂತ್ರಿಕ್ ಬಿಡ್ ತೆರೆಯುವ ದಿನಾಂಕ : 25/02/2025 ಸಾಯಂಕಾಲ 5:15 ಗಂಟೆ, 2) ಮಾದರಿ ಸಲ್ಲಿಸಬೇಕಾದ ದಿನಾಂಕ : 21/02/2025 ಸಾಯಂಕಾಲ 5:00 ಗಂಟೆ, 3) ಮಾದರಿ ಸಲ್ಲಿಸಬೇಕಾದ ವಿಳಾಸ : ಸಹಾಯಕ ನಿರ್ದೇಶಕರವರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಕ್ರೀಡಾಂಗಣ, ಬೀದರ–58 5401, 4) ಆರ್ಥಿಕ ಬಿಡ್ ತೆರೆಯುವ ದಿನಾಂಕ : 27/02/2025 ಬೆಳಿಗ್ಗೆ 11:00 ಗಂಟೆ

ಸಹಿ/–ಸಹಾಯಕ ನಿರ್ದೇಶಕರು,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,
ಬೀದರ.

ವಾ.ಸಾ.ಸಂ.ಇ/ಬೀದರ/405/ಕೆ.ಎಸ್.ಎಂ.ಸಿ.&ಎ/2024–25


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.